ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ–13 | ISSUE - 96 ಸಂಚಿಕೆ– 96 | PAGE-8 ಪುಟ–8 | ಗುರುವಾರ 22.05.2025 | RS.2/- ಬೆಲೆ 2/–

# ‘ದಿವಾಳಿ ಮಾಡೆಲ್ ಆಫ್ ಕರ್ನಾಟಕ’ ಸಿಎಂಗೆ ಬಿರುದು ನೀಡಿದ ಬಿಜೆಪಿ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.21:ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ‘ದಿವಾಳಿ ಮಾಡೆಲ್ ಆಫ್ ಕರ್ನಾಟಕ’ ಬಿರುದನ್ನು ನಾವು ನೀಡುತ್ತಿದ್ದೇವೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ತಿಳಿಸಿದ್ದಾರೆ.

ಬಿಜೆಪಿ ನಗರ ಕಾರ್ಯಾಲಯ ಬಾವುರಾವ್ ದೇಶಪಾಂಡೆ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಇಂದು ಮಾತನಾಡಿದ ಅವರು, ರಾಜ್ಯ ಸರ್ಕಾರ ದಿವಾಳಿಯಾಗಿದೆ. ಸಾಲ ಪಡೆದು ಸಂಬಳ ಕೊಡುವಂಥ ಸ್ಥಿತಿ ಬಂದಿದೆ. ನಮ್ಮ ಡಿ.ಕೆ.ಶಿವಕುಮಾರಣ್ಣ ನಿನ್ನೆ ಇದನ್ನು ಸರಿಯಾಗಿ ಹೇಳಿದ್ದಾರೆ. ತಿಂಗಳಿಗೊಮ್ಮೆ 2 ಸಾವಿರ ಹಣ ಕೊಡಲು ನಿಮ್ಮಪ್ಪನ ಮನೆ ಗಂಟಾ ಎಂದು ಕೇಳಿದ್ದಾರೆ. ತಿಂಗಳಿಗೊಮ್ಮೆ 2 ಸಾವಿರ ಫಟಾಫಟ್ ಹಣ ಕೊಡುವುದಾಗಿ ರಾಹುಲ್ ಗಾಂಧಿ ಹೇಳಿದ್ದರು. ಇಲ್ಲಿ ಶಿವಕುಮಾರ್ ಕಟಾಕಟ್, ಯಾವಾಗ ಹಣ ಬರುತ್ತೋ ಆಗ ದುಡ್ಡು ಕೊಡುವುದಾಗಿ ಹೇಳಿದ್ದಾರೆ ಎಂದು ಗಮನ ಸೆಳೆದರು.

ಯಾವ ಸಾಧನೆಗೆ ಈ ಸಂಭ್ರಮಾಚರಣೆ?

ಮುಖ್ಯಮಂತ್ರಿಗಳೇ.. ಯಾವ ಸಾಧನೆಗಾಗಿ ಈ 2 ವರ್ಷದ ಸಂಭ್ರಮಾಚರಣೆ ಮಾಡಿದ್ದೀರಿ? ಏನು ಕಡಿದು ಕಟ್ಟೆ ಹಾಕಿದ್ದೀರಿ? ಎಂದು ಕೇಳಿದರು. ಹಾಲಿನ ದರ ಏರಿಸಿದ್ದೀರಿ. ನೀರು, ವಿದ್ಯುತ್, ಪೆಟ್ರೋಲ್, ಡೀಸೆಲ್, ಆಸ್ತಿ ತೆರಿಗೆ ಇವೆಲ್ಲವನ್ನೂ ಏರಿಸಿದ್ದೀರಿ. ದರ ಏರಿಸಿದ ಪರಿಣಾಮವಾಗಿ ಜನರು ಕಷ್ಟದಲ್ಲಿರುವಾಗ, ಸಮಾವೇಶ ಮಾಡಬೇಕೆಂದು ನಿಮಗೆ ಯಾಕೆ ಅನ್ನಿಸಿದೆ? ಎಂಬ ಪ್ರಶ್ನೆಯನ್ನು ಮುಂದಿಟ್ಟರು.

ರೈತರ ಆತ್ಮಹತ್ಯೆ, ಬಾಣಂತಿಯರ ಸಾವಿಗಾಗಿ ಸಮಾವೇಶವೇ?

ಎರಡು ವರ್ಷಗಳಾಗಿದೆ. ಪರಿಶಿಷ್ಟ ಜಾತಿಗೆ ಸೇರಿದ 187 ಕೋಟಿ ರೂ.ಯನ್ನು ಫಟಾಫಟ್ ಲೂಟಿ ಮಾಡಿದ್ದೀರಿ. ಇನ್ನೊಂದೆಡೆ 89 ಕೋಟಿ ರೂ. ಲೂಟಿ ಆಗಿರುವುದಾಗಿ ಸಿದ್ದರಾಮಯ್ಯನವರೇ ಅಧಿವೇಶನದಲ್ಲಿ ಹೇಳಿದ್ದಾರೆ. ಅದಕ್ಕಾಗಿ ಈ ಸಂಭ್ರಮವೇ? ಮುಡಾ ಹಗರಣದಲ್ಲಿ ವಾಸ್ತು ಪ್ರಕಾರ ಇರುವ 14 ಮೂಲೆ ನಿವೇಶನಗಳನ್ನು ಲೂಟಿ ಹೊಡೆದಿದ್ದಕ್ಕೆ ನಿಮ್ಮ ಈ ಸಂಭ್ರಮಾಚರಣೆಯೇ? ಎಂದು ಕೇಳಿದರು.

ಕಳಪೆ ದ್ರಾವಣ ನೀಡಿ ದಿನನಿತ್ಯ 15–20 ಬಾಣಂತಿಯರ ಸಾವಾಗಿದೆಯಲ್ಲವೇ? ಸಚಿವರೇ, ಸರ್ಕಾರಿ ಆಸ್ಪತ್ರೆಗೆ ಹೆರಿಗೆಗೆ ಹೋದರೆ ವಾಪಸ್ ಬರುವುದೇ ಇಲ್ಲವೆಂಬ ಗ್ಯಾರಂಟಿಗಾಗಿ ಈ ಸಾಧನೆಯೇ? ರಾಜ್ಯದಲ್ಲಿ 2 ಸಾವಿರಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಪರಿಹಾರ ಬರುವುದಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಾರೆ ಎಂದು ನಿಮ್ಮ ಸಚಿವರು ಹೇಳಿದ್ದಾರೆ. ಬರಗಾಲ ಬರಲೆಂದು ರೈತರು ಕೇಳಿಕೊಳ್ಳುತ್ತಾರೆಂದು ಇನ್ನೊಬ್ಬ ಸಚಿವ ಶಿವಾನಂದ ಪಾಟೀಲರು ಹೇಳಿದ್ದಾರೆ. ಈ ಸಾಧನೆಗಾಗಿ ಸಮಾವೇಶವೇ? ವಕ್ಫ್ ಮಂಡಳಿ ಹೆಸರಿನಲ್ಲಿ ಸಾಬರು ಲಕ್ಷಾಂತರ ಎಕರೆ ರೈತರ ಜಮೀನು, ದೇವಸ್ಥಾನದ ಆಸ್ತಿಯನ್ನು ಲೂಟಿ ಹೊಡೆದರಲ್ಲವೇ? ಅವರಿಗೆಲ್ಲ ಇದೇ ಜಮೀರ್ ಅಹ್ಮದ್ ಕೃಪಾಶೀರ್ವಾದ ಮಾಡಿದ್ದರಲ್ಲವೇ? ವಕ್ಫ್ ಆಸ್ತಿ ವಾಪಸ್ ಕೊಡಿಸುವುದಾಗಿ ಹೇಳಿಕೆ ಕೊಟ್ಟರಲ್ಲವೇ? ಇದಕ್ಕಾಗಿ ನಿಮ್ಮ ಸಾಧನಾ ಸಮಾವೇಶ ಮಾಡುತ್ತಿದ್ದೀರಾ? ಕೆಪಿಎಸ್‌ಸಿ ಪ್ರಶ್ನೆಪತ್ರಿಕೆ ತಯಾರು ಮಾಡಲು ಯೋಗ್ಯತೆ ಇಲ್ಲದ ಸರ್ಕಾರ ಇದು. ಕನ್ನಡ ಅನುವಾದದಲ್ಲಿ 79 ತಪ್ಪು ಮಾಡಿದ್ದಾರೆ. 2 ಲಕ್ಷ ಅಭ್ಯರ್ಥಿಗಳು ಇದ್ದರು. ಅವರ ಮನೆ, ಜೀವನ ಹಾಳು ಮಾಡಿದ್ದೀರಲ್ಲವೇ? ಅವರ ಬಾಳಿಗೆ ಕೊಡಲಿ ಇಟ್ಟಿದ್ದಕ್ಕೆ ಈ ಸಾಧನಾ ಸಮಾವೇಶ ಮಾಡುತ್ತೀರಾ? ಎಂದು ಕೇಳಿದರು.

ಗಣೇಶ ವಿಗ್ರಹಕ್ಕೆ ಜೈಲುವಾಸ, ಪಾಕ್ ಜಿಂದಾಬಾದ್ ಹೇಳಿದ್ದಕ್ಕಾಗಿ ಸಂಭ್ರಮವೇ?

ಹುಬ್ಬಳ್ಳಿಯಲ್ಲಿ ನೇಹಾ ಲವ್ ಜಿಹಾದ್ ಕೊಲೆ ಆಯಿತು. ಇದಕ್ಕಾಗಿ ಸಂಭ್ರಮಾಚರಣೆಯೇ? ನಾಗಮಂಗಲದಲ್ಲಿ ಪೊಲೀಸ್ ವ್ಯಾನಿನಲ್ಲೇ ಗಣೇಶನ ವಿಗ್ರಹದ ಮೆರವಣಿಗೆ ನಡೆಸಿ ವಿಸರ್ಜಿಸಿದ್ದೀರಿ. ಗಣೇಶನಿಗೂ ಜೈಲುವಾಸ ಮಾಡಿದ್ದೀರಿ. ಇದಕ್ಕೋಸ್ಕರ ಈ ಸಮಾವೇಶವೇ? ಪಾಕಿಸ್ತಾನದ ಜೊತೆ ಯುದ್ಧ ಬೇಡ ಎಂದಿದ್ದೀರಿ. ಪಾಕಿಸ್ತಾನ ಜಿಂದಾಬಾದ್ ಎಂದರೆ, ನಸೀರ್ ಸಾಬ್ ಜಿಂದಾಬಾದ್ ಹೇಳಿಕೆ ಕೊಟ್ಟಿರಿ. ಫೊರೆನ್ಸಿಕ್ ವರದಿಯಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದದ್ದು ಸಾಬೀತಾಗಿದೆ. ನಿಮಗೆ ಮಾನ ಮರ್ಯಾದೆ ಇದೆಯೇ ಕಾಂಗ್ರೆಸ್ಸಿಗರೇ ಎಂದು ಪ್ರಶ್ನೆಗಳನ್ನು ಮುಂದಿಟ್ಟರು.

ಮಳೆಯಿಂದ 5 ಜನ ಮೃತಪಟ್ಟಿದ್ದಾರೆ. ಈ ಸಾವಿನ ಮೇಲೆ ಸಮಾವೇಶ ಮಾಡಿದ್ದೀರಿ. ಬೆಂಗಳೂರಿನ ಜನರು ಕರ್ನಾಟಕ ಬಜೆಟ್‌ನ ಶೇ. 67ರಷ್ಟು ತೆರಿಗೆ ಕಟ್ಟುತ್ತಾರೆ. ಅಂಥವರನ್ನು ನೀರಿನಲ್ಲಿ ಮುಳುಗಿಸಿದ್ದೀರಿ. ಬೆಂಗಳೂರನ್ನು ತೇಲುವ ಹಾಗೇ ಮಾಡಿದ್ದೀರಲ್ಲವೇ? ಇದಕ್ಕಾಗಿ ನಿಮ್ಮ ಸಮಾವೇಶ ಮಾಡಿದ್ದೀರಾ ಎಂದರು.

ಹೆಚ್ಚು ಬಾರ್, ವೈನ್ ಸ್ಟೋರ್ ತೆರೆದಿದ್ದಕ್ಕೆ ಅಭಿನಂದನೆ:

ಹಾಲಿನ ದರ 3 ಬಾರಿ 9 ರೂ. ಹೆಚ್ಚಿಸಿ ರೈತರಿಗೆ ಎಷ್ಟು ಪೈಸೆ ಕೊಟ್ಟಿದ್ದೀರಿ? ರೈತರ ಸಬ್ಸಿಡಿ ಇನ್ನೂ ಕೊಟ್ಟಿಲ್ಲ. ಕರ್ನಾಟಕದಲ್ಲಿ ಹೆಚ್ಚು ಬಾರ್‌ಗಳು, ವೈನ್ ಸ್ಟೋರ್ ತೆರೆದಿದ್ದೀರಿ. ಅದಕ್ಕಾಗಿ ವಿಪಕ್ಷವಾದ ನಮ್ಮಿಂದ ನಿಮಗೆ ಅಭಿನಂದನೆಗಳು ಎಂದು ವ್ಯಂಗ್ಯವಾಡಿದರು. ಬಾರ್, ವೈನ್ ಸ್ಟೋರ್‌ಗೆ ಹಳ್ಳಿಯಲ್ಲಿ 2 ಕೋಟಿ ರೂ., ನಗರದಲ್ಲಿ 3 ಕೋಟಿ ರೂ. ದರ ನಿಗದಿ ಮಾಡಿದ್ದಾರೆ ಎಂದು ಟೀಕಿಸಿದರು. ತಂದೆ, ತಾಯಿಯ ಆಸೆಗೆ ಕೊಳ್ಳಿ ಇಟ್ಟಿದ್ದೀರಲ್ಲವೇ?

ಚಾಮರಾಜನಗರ, ಮಂಡ್ಯ, ರಾಯಚೂರು ಸೇರಿ 9 ವಿಶ್ವವಿದ್ಯಾಲಯಗಳನ್ನು ಯಾಕೆ ಮುಚ್ಚಿದ್ದೀರಿ? ಅದಕ್ಕೆ ಕೇವಲ 250 ಕೋಟಿ ರೂ. ಬೇಕಾಗಿತ್ತು. ನಿಮಗೆ ಬಾರ್, ವೈನ್ ಸ್ಟೋರ್‌ಗಳಿಂದ ಬರುವ ಹಣದ ಶೇ. 10ರಷ್ಟನ್ನು ಹಾಕಿದ್ದರೆ ಬಡ ವಿದ್ಯಾರ್ಥಿಗಳ ಆಸೆ ಈಡೇರಿಸಬಹುದಿತ್ತು. ಮಗ, ಮಗಳು ವಿದ್ಯಾವಂತರಾಗುವ ತಂದೆ, ತಾಯಿಯ ಆಸೆಗೆ ಕೊಳ್ಳಿ ಇಟ್ಟಿದ್ದೀರಲ್ಲವೇ? ಎಂದು ಕೇಳಿದರು.

ರಾಜ್ಯದ 40 ಸರ್ಕಾರಿ ಸಂಸ್ಥೆಗಳ ದಿವಾಳಿ:

ರಾಜ್ಯದ 40 ಸರ್ಕಾರಿ ಸಂಸ್ಥೆಗಳು ದಿವಾಳಿ ಆಗಿವೆ. ಸಾರ್ವಜನಿಕ ವಲಯದ 127 ಉದ್ಯಮಗಳಲ್ಲಿ 60 ಉದ್ಯಮಗಳು ನಷ್ಟದಲ್ಲಿವೆ. ಈ ಕಂಪನಿಗಳು 46,800 ಕೋಟಿ ರೂ. ಸಾಲ ಮಾಡಿವೆ. ಪ್ರವಾಸೋದ್ಯಮ, ರಾಜೀವ್ ಗಾಂಧಿ ವಸತಿ ನಿಗಮ, ಮೈಸೂರು ಪೇಪರ್ ಮಿಲ್ಸ್, ಕೆಎಸ್‌ಆರ್‌ಟಿಸಿ, ಎನ್ ಡಬ್ಲ್ಯೂಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಬೆಸ್ಕಾಂ ಮುಚ್ಚುವ ಸ್ಥಿತಿಯಲ್ಲಿದೆ ಎಂದು ಸಿಎಜಿ ವರದಿಯನ್ನು ಉಲ್ಲೇಖಿಸಿ ತಿಳಿಸಿದರು.

## ಭೀಕರ ಸರಣಿ ಅಪಘಾತ:6 ಜನರ ಸಾವು



ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ,ಮೇ.21:ಸ್ಕಾರ್ಪಿಯೋ ಕಾರ್, ವಿಆರ್ ಎಲ್ ಖಾಸಗಿ ಬಸ್, ಕಂಟೇನರ್ ವಾಹನ ಮಧ್ಯೆ ಭೀಕರ ಅಪಘಾತ ಸಂಭವಿಸಿ 6 ಜನರು ದಾರುಣ ಸಾವಿಗೀಡಾದ ಹೃದಯ ವಿದ್ರಾವಕ ಘಟನೆ ಜಿಲ್ಲೆಯ ಮನಗೂಳಿ ಬಳಿಯ ರಾಷ್ಟ್ರೀಯ ಹೆದ್ದಾರಿ– 50 ರಲ್ಲಿ ಬುಧವಾರ ಬೆಳಗ್ಗೆ ನಡೆದಿದೆ.

ಸೊಲ್ಲಾಪುರ ಕಡೆಯಿಂದ ಹೋಗುತ್ತಿದ್ದ

(2ನೇ ಪುಟ ನೋಡಿ)

## ಕಮಲನಗರ:ರಸ್ತೆ ಮೇಲೆ ಕಸ, ಹಂದಿಗಳು ತಿರುಗಾಟ ಅಸ್ವಚ್ಛತೆಗೆ ಬೇಸತ್ತು ಹೋದ ಜನ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.21: ಪಟ್ಟಣ್ಣದ ಬೀದರ –ನಾಂಡೆದ ರಾಷ್ಟ್ರೀಯ ಹೆದ್ದಾರಿಗೆ ಹತ್ತಿ ಕೊಂಡಿರುವ, ತರಕಾರಿ, ಹಣ್ಣು ಹಂಪಲು ಅಂಡಿಗೆ ಖರೀದಿಗೆ ಬಂದ ಜನ ರಸ್ತೆ ಮೇಲೆ ಹಲವು ದಿನಗಳಿಂದ ಕಸ ಸ್ವಚ್ಛತೆ ಮಾಡದೇ ಇರುವುದರಿಂದ, ಹಂದಿಗಳು ತಿರುಗಾಡಿ ಸಂಪೂರ್ಣ ಗಲೀಜು ಮಾಡುತ್ತಿವೆ. ದಿನಲೂ ನೂರಾರು ಜನ ಓಡಾಡುವ ರಸ್ತೆಯ ಮೇಲಿಂದ ಕಸ ಸರಿಯಾದ ಸಮಯಕ್ಕೆ ಸ್ವಚ್ಛ ಮಾಡದೇ ಇರುವುದೇ ಇದಕ್ಕೆ ಕಾರಣ ಎಂದು ಮಾರುಕಟ್ಟೆಗೆ ಬಂದ ಜನ ನಿರಾಶೆ ವ್ಯಕ್ತ ಪಡಿಸಿದರು. ಕಸದ ಮೇಲೆ ಮಳೆ ಬಿದ್ದು ಕೆಸರು ರಾಡಿಗುತ್ತಿದೆ, ಇದರಿಂದ ಸೊಳ್ಳೆ ಕಾಟ ಹೆಚ್ಚುಗುತ್ತಿದೆ, ಮಕ್ಕಳು ಹಿರಿಯರು ಓಡಾಡುವ ರಸ್ತೆ ಸಂಜೆ ಹೊತ್ತು ಸೊಳ್ಳೆಗಳ ಕಾಟದಿಂದ ಬೇಸತ್ತು ಹೋಗಿದ್ದಾರೆ ಎಂದು ಸ್ಥಳೀಯರು ತಮ್ಮ ಗೋಳನ್ನು ಹೇಳಿ ಕೊಂಡರು. ಅಧಿಕಾರಗಳು ಈಗಲಾದರೂ ಸ್ವಚ್ಛತೆ ಬಗ್ಗೆ ಗಮನ ಹರಿಸಿ, ಕಸ ವಿಲೆಯವಾರಿ ಮಾಡಿ ಜನರಿಗೆ ಅನುಕೂಲ ಮಾಡಿ ಕೂಡಬೇಕು ಎಂದು ಒತ್ತಾಯಿಸಿದ್ದಾರೆ.

## ವಕ್ಫ್ ಇಸ್ಲಾಂನ ಅತ್ಯಗತ್ಯ ಭಾಗವಲ್ಲ, ಅದು ದಾನಧರ್ಮವಲ್ಲದೆ ಬೇರೇನೂ ಅಲ್ಲ : ಕೇಂದ್ರದ ವಾದ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮೇ.21: ವಕ್ಫ್ ಎನ್ನುವುದು ಇಸ್ಲಾಂನ ಅತ್ಯಗತ್ಯ ಭಾಗವಲ್ಲ, ಅದು ದಾನಧರ್ಮವಲ್ಲದೆ ಬೇರೇನೂ ಅಲ್ಲ ಎಂದು ಸುಪ್ರೀಂ ಕೋರ್ಟ್‌ಗೆ ಕೇಂದ್ರ ಸರ್ಕಾರ ಹೇಳಿದೆ. ವಕ್ಫ್ ಕಾಯ್ದೆ ಸಿಂಧುತ್ವ ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಗಳ ವಿಚಾರಣೆ ವೇಳೆ ಸರ್ಕಾರದ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ವಾದ ಮಂಡಿಸಿದರು.

ವಕ್ಫ್ ಒಂದು ಇಸ್ಲಾಮಿಕ್ ಪರಿಕಲ್ಪನೆ. ಆದರೆ ಅದು ಇಸ್ಲಾಂನ ಅತ್ಯಗತ್ಯ ಭಾಗವಲ್ಲ, ವಕ್ಫ್ ಇಸ್ಲಾಂನಲ್ಲಿ ಕೇವಲ ದಾನವಾಗಿದೆ. ದಾನವು ಪ್ರತಿಯೊಂದು ಧರ್ಮದ ಭಾಗವಾಗಿದೆ ಮತ್ತು ಕ್ರಿಶ್ಚಿಯನ್ ಧರ್ಮಕ್ಕೂ ಸಹ ಇದು ಸಂಭವಿಸಬಹುದು ಎಂದು ತೀರ್ಪುಗಳು ತೋರಿಸುತ್ತವೆ. ಹಿಂದೂಗಳು ದಾನ ಮಾಡುವ ವ್ಯವಸ್ಥೆಯನ್ನು ಹೊಂದಿದ್ದಾರೆ. ಸಿಖ್ಖರು ಸಹ ಈ ಸಂಪ್ರದಾಯ ಹೊಂದಿದ್ದಾರೆ ಎಂದು ಹೇಳಿದರು.

ಬಳಕೆದಾರರಿಂದ ವಕ್ಫ್ ತತ್ವದ ಅಡಿಯಲ್ಲಿ ವಕ್ಫ್ ಎಂದು ಘೋಷಿಸಲಾದ ಆಸ್ತಿಗಳನ್ನು ಮರುಪಡೆಯಲು ಕೇಂದ್ರವು ಕಾನೂನುಬದ್ಧ ಅಧಿಕಾರ ಹೊಂದಿದೆ. ಸರ್ಕಾರಿ ಭೂಮಿಯ ಮೇಲೆ ಯಾರಿಗೂ ಹಕ್ಕಿಲ್ಲ. ಅದು ಸರ್ಕಾರಕ್ಕೆ ಸೇರಿದ್ದು, ಆಸ್ತಿ ವಕ್ಫ್ ಎಂದು ಘೋಷಿಸಲ್ಪಟ್ಟಿದ್ದರೆ ಸರ್ಕಾರವು ಆಸ್ತಿಯನ್ನು ಉಳಿಸಬಹುದು ಎಂದು ಮೆಹ್ತಾ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಮತ್ತು ನ್ಯಾಯಮೂರ್ತಿ ಆಗಸ್ಟೀನ್ ಜಾರ್ಜ್ ಮಸಿಹ್ ಅವರನ್ನೊಳಗೊಂಡ ದ್ವಿ–ಸದ್ಯಸ ಪೀಠಕ್ಕೆ ತಿಳಿಸಿದರು.

ಹೊಸ ಕಾನೂನಿನಲ್ಲಿ ಔಪಚಾರಿಕ ದಾಖಲೆಗಳಿಲ್ಲದಿದ್ದರೂ ಸಹ, ಧಾರ್ಮಿಕ ಮತ್ತು ದತ್ತಿ ಉದ್ದೇಶಗಳಿಗಾಗಿ ದೀರ್ಘಕಾಲೀನ ಬಳಕೆಯ ಆಧಾರದ ಮೇಲೆ ಆಸ್ತಿಯನ್ನು ವಕ್ಫ್ ಎಂದು ಪರಿಗಣಿಸಲು ಅನುವು ಮಾಡಿಕೊಡುತ್ತದೆ. ಬಳಕೆದಾರ–ರಿಂದ ವಕ್ಫ್ ಮೂಲಭೂತ ಹಕ್ಕಲ್ಲ ಎಂದು ಪ್ರತಿಪಾದಿಸಿದ ಅವರು, ಬಳಕೆದಾರರಿಂದ ವಕ್ಫ್ ಅನ್ನು ಮೂರು ವಿನಾಯಿತಿಗಳೊಂದಿಗೆ ಅನುಮತಿಸಲಾಗುವುದಿಲ್ಲ, ಅದು ನೋಂದಾಯಿಸಲ್ಪಡಬೇಕು, ಖಾಸಗಿ ಆಸ್ತಿ ಮತ್ತು ಸರ್ಕಾರಿ ಆಸ್ತಿಯಾಗಿರಬೇಕು ಎಂದು ಹೇಳಿದರು.

ಬ್ರಿಟಿಷ್ ಮತ್ತು ಭಾರತೀಯ ಸರ್ಕಾರಗಳು ಪರಿಹರಿಸಲು ಸಾಧ್ಯವಾಗದ ಸಮಸ್ಯೆಗಳನ್ನು ಇತ್ತೀಚಿನ ವಕ್ಫ್ ಕಾನೂನು ತಿದ್ದುಪಡಿಗಳು ಪರಿಹರಿಸಿವೆ ಎಂದು ಸುಪ್ರೀಂ ಕೋರ್ಟ್‌ಗೆ ತಿಳಿಸಿದರು.

## ಖುದ್ದು ಪ್ರಿಯಾಂಕ ಖರ್ಗೆ ತಳವಾರರಿಗೆ ಎಸ್ಟಿ ಸರ್ಟಿಫಿಕೇಟ್ ಕೊಡಿಸಬೇಕು: ಛಲವಾದಿ ನಾರಾಯಣ ಸ್ವಾಮಿ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.21: ಇದು ರಾಜಕೀಯ ವಿಷಯವಲ್ಲ ಒಂದು ಸಮುದಾಯದ ಭವಿಷ್ಯದ ವಿಚಾರ ನಾನು ಇದರಲ್ಲಿ ರಾಜಕೀಯ ಮಾತಾಡುವುದಿಲ್ಲ ಕೂಡಲೇ ಪ್ರಿಯಾಂಕ ಖರ್ಗೆ ಅವರೇ ಖುದ್ದಾಗಿ ಮುಂದೆ ನಿಂತು ತಳವಾರ ಸಮಾಜಕ್ಕೆ ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ ಮೊದಲಿನಂತೆ ಸರಳವಾಗಿ ನೀಡುವ ವ್ಯವಸ್ಥೆ ಮಾಡಬೇಕು ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಅವರು ಹೇಳಿದ್ದರು.

ತಳವಾರ ಸಮಾಜದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ತಳವಾರ ಸಮಾಜ ಸಂಘಟನೆವತಿಯಿಂದ ಕೈಗೊಂಡಿರುವ 14ನೇ ದಿನದ ಅನಿರ್ದಿಷ್ಟಾವಧಿಯ ಧರಣಿ ಸತ್ಯಾಗ್ರ–ಕ್ಕೆ ಬೆಂಬಲಿಸಲು ಭೇಟಿ ನೀಡಿದ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರಿಯಾಂಕ ಖರ್ಗೆ ಅವರು ಇದನ್ನು ಬಹಳ ಸೂಕ್ಷ್ಮವಾಗಿ ಅರ್ಥಮಾಡಿಕೊಳ್ಳಬೇಕು. ಇದೊಂದು ಸಮುದಾಯಕ್ಕೆ ಸಂಬಂಧಿಸಿದ ವಿಷಯವಾಗಿದ್ದರಿಂದ ಇದರಲ್ಲಿ ರಾಜಕೀಯ ಮಾಡಬಾರದು. ಅದಕ್ಕೆ ನಾನು ಇದರಲ್ಲಿ ರಾಜಕೀಯ ಮಾಡುವುದಿಲ್ಲ. ಪ್ರಸ್ತುತ ಈಗ ಶಾಲಾ ಕಾಲೇಜುಗಳು, ಕೃಷಿ ಚಟುವಟಿಕೆಗಳು ಆರಂಭವಾಗುತ್ತವೆ. ವಿದ್ಯಾರ್ಥಿಗಳಿಗೆ ರೈತರಿಗೆ ಸೇರಿದಂತೆ ತಳವಾರ ಸಮುದಾಯದವರಿಗೆ

ಜಾತಿ ಪ್ರಮಾಣ ಪತ್ರ ಅವಶ್ಯಕತೆ ಇದೆ.

(2ನೇ ಪುಟ ನೋಡಿ)

## ಅಪರಿಚಿತ ವಾಹನ ಡಿಕ್ಕಿ: ಮಹಿಳೆ ಸಾವು


ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.21: ತಾಲ್ಲೂಕಿನ ಕಾರಂಜಾ ಡ್ಯಾಮ್ ಸಮೀಪ ಮಂಗಳವಾರ ರಾತ್ರಿ ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ಅಂದಾಜು 55 ವರ್ಷ ವಯಸ್ಸಿನ ಮಹಿಳೆ ಸ್ಥಳದಲ್ಲೇ ಸಾವನಪ್ಪಿದ್ದಾಳೆ.

ಮೃತ ಮಹಿಳೆಗೆ ಯಾರು ವಾರಸುದಾರರು ಇಲ್ಲ. ಆಕೆಯ ಕುರಿತಾದ ವ್ಯಕ್ತಿಗತ ಮಾಹಿತಿ ಲಭ್ಯವಾಗಿಲ್ಲ.

ಈ ಸಂಬಂಧ ಧನ್ನೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಹನುಮಾನ ಮಂದಿರದ ಜೀರ್ಣೋದ್ಧಾರಕ್ಕೆ ಮಂಜೂರಾದ ಅನುದಾನದ ಮಂಜೂರಾತಿ ಪತ್ರ ಹಸ್ತಾಂತರ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: (ಮೇ.21) ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಅಪಘಾತ:6 ಜನರ ಸಾವು

ಸ್ಕಾರ್ಪಿಯೋ ಕಾರ್, ಮುಂಬೈನಿಂದ ಬಳ್ಳಾರಿ ಕಡೆಗೆ ಹೋಗುತ್ತಿದ್ದ ವಿಆರ್ ಎಲ್ ಬಸ್, ಕಂಟೇನರ್ ಮಧ್ಯೆ ಭೀಕರ ಅಪಘಾತ ಸಂಭವಿಸಿ, ಸ್ಕಾರ್ಪಿಯೋದಲ್ಲಿರುವ ನಾಲ್ವರು, ವಿಆರ್‌ಎಲ್ ಚಾಲಕ ಸ್ಥಳದಲ್ಲೇ ಅಸುನೀಗಿದ್ದಾರೆ. ಕಂಟೇನರ್ ಚಾಲಕ ತೀವ್ರವಾಗಿ ಗಾಯಗೊಂಡಿದ್ದಾನೆ.ಕಾರಿನಲ್ಲಿ ಪ್ರಯಾಣಿಸುತ್ತಿದ್ದ ತೆಲಂಗಾಣ ರಾಜ್ಯದ ಟಿ. ಭಾಸ್ಕರನ್ ಮಲಕಂಠನ, ಆತನ ಪತ್ನಿ ಪವಿತ್ರಾ, ಪುತ್ರ ಅಭಿರಾಮ, ಪುತ್ರಿ ಜೋಸ್ನಾ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ.ಅದೃಷ್ಟವಶಾತ್ ಟಿ. ಭಾಸ್ಕರನ್ ಅವರ ಇನ್ನೋರ್ವ ಪುತ್ರ 10 ವರ್ಷದ ಪ್ರವೀಣ ತೇಜ ಬದುಕುಳಿದಿದ್ದು, ತೀವ್ರವಾಗಿ ಗಾಯಗೊಂಡಿದ್ದಾನೆ. ಕಾರ್ ಚಾಲಕ ಹೊರ್ತಿ ಗ್ರಾಮದ ವಿಕಾಸ ಶಿವಪ್ಪ ಮಕನಿ ಕೂಡಾ ಈ ದುರಂತದಲ್ಲಿ ಮೃತಪಟ್ಟಿದ್ದಾರೆ. ಇದಲ್ಲದೆ ವಿಆರ್‌ಎಲ್ ಬಸ್ ಚಾಲಕ ಕಲಗುಟಗಿ ತಾಂಡಾದ ಬಸವರಾಜ ರಾಠೋಡ ಅಸುನೀಗಿದ್ದಾರೆ.ಮೃತ ಟಿ. ಭಾಸ್ಕರನ್ ಅವರು ಕೆನರಾ ಬ್ಯಾಂಕ್ ಮ್ಯಾನೇಜರ್ ಆಗಿದ್ದ. ಲಾರಿ ಚಾಲಕ ಹುಲಿಜಂತಿಯ ಚನ್ನಬಸು ಸಿದ್ದಪ್ಪ ಮಾಳಿ ಗಾಯಗೊಂಡಿದ್ದಾರೆ.0ಅಪಘಾತದ ಹೊಡೆತಕ್ಕೆ ಕಾರ್ ನಜ್ಜುಗುಜ್ಜಾಗಿದ್ದು, ಕಾರಿನಲ್ಲಿದ್ದ ಮೃತರ ಶವಗಳನ್ನು ಹೊರ ತಗೆಯಲು ಪೊಲೀಸರು ಹರ ಸಾಹಸ ಪಡಬೇಕಾಯಿತು. ಸುದ್ದಿ ತಿಳಿದ ತಕ್ಷಣ ಘಟನಾ ಸ್ಥಳಕ್ಕೆ ಮನಗೂಳಿ ಪೊಲೀಸರು ತೆರಳಿ ಪರಿಹಾರ ಕಾರ್ಯ ಕೈಗೊಂಡರು. ಗಾಯಾಳುಗಳನ್ನು ತಕ್ಷಣ ಆಸ್ಪತ್ರೆಗೆ ರವಾನಿಸಲಾಯಿತು.ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಗ್ರಾಮೀಣ ಡಿಎಸ್ಪಿ ಸುಲ್ಪಿ ಮತ್ತಿತರ ಪೊಲೀಸ್ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.ಇಲ್ಲಿನ ಚತುಷ್ಪಥ 50ರ ರಾಷ್ಟ್ರೀಯ ಹೆದ್ದಾರಿಯ ಮತ್ತೊಂದು ಬದಿಯ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಯಿತು.ಮನಗೂಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

# ಕೊಡಿಸಬೇಕು: ಛಲವಾದಿ ನಾರಾಯಣ ಸ್ವಾಮಿ

ಕೂಡಲೇ ಪ್ರಿಯಾಂಕ ಖರ್ಗೆಯವರು ಮುಖ್ಯಮಂತ್ರಿಗಳ ಗಮನಕ್ಕೆ ತಂದು ತಳವಾರ ಸಮಾಜದ ಬೇಡಿಕೆ ನ್ಯಾಯ ಸಮ್ಮತವಾಗಿದೆ ಅವರಿಗೆ ಮೊದಲಿನಂತೆ ಸರಳವಾಗಿ ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ, ಸಿಂಧುತ್ವ ಪ್ರಮಾಣ ಪತ್ರ ಸೇರಿದಂತೆ ವಿವಿಧ ಸರ್ಕಾರಿ ಸೌಲಭ್ಯಗಳನ್ನು ನೀಡಬೇಕು. ಏಕೆಂದರೆ ಕೇಂದ್ರ ಸರ್ಕಾರದ ಆದೇಶದಂತೆ ರಾಜ ಬಿಜೆಪಿ ಸರ್ಕಾರ ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿ ಆಗಿದ್ದಾಗ ವಿಶೇಷವಾಗಿ 7% ಮೀಸಲಾತಿ ಹೆಚ್ಚಿಗೆ ಮಾಡಿ ಪರಿಶಿಷ್ಟ ಪಂಗಡಕ್ಕೆ ಸೇರಿಸಿ ಇವರನ್ನು ರಾಜ್ಯ ಹಿಂದುಳಿದ ವರ್ಗದ ಪಟ್ಟಿಯಿಂದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲಾಗಿದೆ.

ಯಾವುದೇ ರೀತಿಯ ಸಮಸ್ಯೆವಿರದಿದ್ದರೂ ವಿನಾಕಾರಣ ಗೊಂದಲ ಸೃಷ್ಟಿ ಮಾಡಿ ತಳವಾರ ಸಮಾಜಕ್ಕೆ ಅನ್ಯಾಯ ಮಾಡಲಾಗುತ್ತಿದೆ. ಇವರೆಲ್ಲಾ ತಮ್ಮ ಕ್ಷೇತ್ರದ ಜನರು, ಇವರ ಬಗ್ಗೆ ವಿಶೇಷವಾದ ಕಾಳಜಿ ನಿಮಗಿರಬೇಕು. ಬದಲಾಗಿ ನಿಮ್ಮಿಂದಲೇ ಇವರಿಗೆ ಅನ್ಯಾಯವಾಗುತ್ತಿದೆ. ತಳವಾರರಿಗೆ ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ ನೀಡಲು ಯಾವುದೇ ರೀತಿಯ ಕಾನೂನು ತೊಡಕಾಗಲಿ, ಸಮಸ್ಯೆಯಾಗಲಿ ಇಲ್ಲ. ನಾವು ತಳವಾರರಿಗೆ ಸರ್ಟಿಫಿಕೇಟ್ ನೀಡಬಹುದು, ಆದರೆ ನಮಗೆ ಮೇಲಿಂದ ಒತ್ತಡವಿದೆ ಎಂದು ಹೇಳುತ್ತಿದ್ದಾರೆ. ಹಾಗಾದರೆ ಅಧಿಕಾರಿಗಳಿಗೆ ಒತ್ತಡ ಹಾಕುವವರು ಯಾರು?

ಇಲ್ಲಿ ತಾವೇ ಉಸ್ತುವಾರಿ ಮಂತ್ರಿಗಳಾಗಿದ್ದರಿ, ಆದ್ದರಿಂದ ತಳವಾರ ಸಮಾಜಕ್ಕೆ ಆಗುತ್ತಿರುವ ಅನ್ಯಾಯಕ್ಕೆ ನೇರ ಹೊಣೆ ತಾವೇ ಆಗುತ್ತಿದ್ದೀರಿ, ಕೆಲವೊಬ್ಬ ಅಧಿಕಾರಿಗಳು ಪ್ರತ್ಯಕ್ಷ, ಪರೋಕ್ಷವಾಗಿ ನೇರಾ ನೇರ ತಮ್ಮ ಹೆಸರನ್ನು ಹೇಳುತ್ತಿದ್ದಾರೆ.

ಏನಾದರೂ ಸಮಸ್ಯೆ ಇದ್ದರೆ ಪ್ರಿಯಾಂಕ ಖರ್ಗೆ ಅವರೇ ನೀವೆ ಎದುರಿಗೆ ನಿಂತು ಆ ಸಮಸ್ಯೆಯನ್ನು ಬಗೆಹರಿಸಿ ಸರ್ಟಿಫಿಕೇಟ್ ಕೊಡುವಂಥ ಕೆಲಸ ಮಾಡಬೇಕು. ಅಂತರದಲ್ಲಿ ಯಾವುದೇ ಸಮಸ್ಯೆವಿಲ್ಲದ ತಳವಾರ ಸಮುದಾಯಕ್ಕೆ ನಿಮ್ಮಿಂದಲೇ ಅನ್ಯಾಯವಾಗುತ್ತಿದೆ. ರಾಜ್ಯದ ತುಂಬಾ ಎಲ್ಲಾ ತಳವಾರರಿಗೆ ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ ನೀಡಲಾಗುತ್ತಿದೆ, ಆದರೆ ತಮ್ಮ ಕ್ಷೇತ್ರದಲ್ಲಿ ಹೀಗಾಗುತ್ತಿದೆ. ತಾವು ಕೂಡಲೇ ತಳವಾರ ಸಮುದಾಯದ ಜನರಿಗೆ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ನೀಡಿ, ಅದರ ಮೀಸಲಾತಿ ಅಡಿಯಲ್ಲಿ ಸಿಗುವ ಸರ್ಕಾರದ ಎಲ್ಲಾ ಸೌಲಭ್ಯಗಳು ಕೂಡಲೇ ತಳವಾರ ಸಮಾಜದವರಿಗೆ ನೀಡುವಂತೆ ಕ್ರಮ ಕೈಗೊಳ್ಳಿ, ಬೇಕಾದರೆ ಅದರ ಕ್ರೆಡಿಟ್ ನೀವೇ ತೆಗೆದುಕೊಳ್ಳಿ. ನಮ್ಮದೇನು ಯಾವುದೇ ಅಭ್ಯಂತರವಿಲ್ಲ. ವಿನಾಕಾರಣ ಒಂದು ಸಮುದಾಯಕ್ಕೆ ಅನ್ಯಾಯವಾಗಬಾರದು. ಶೀಘ್ರ ಅವರಿಗೆ ಸರ್ಟಿಫಿಕೇಟ್ ಕೊಡಿಸುವ ಜವಾಬ್ದಾರಿ ನಿಮ್ಮದು ಆ ನಿಟ್ಟಿನಲ್ಲಿ ತಾವು ಕ್ರಮಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದೆ ತಳವಾರ ಸಮಾಜ ಯಾವ ನಿರ್ಣಯ ಕೈಗೊಳ್ಳುತ್ತದೆ ಅವರೊಂದಿಗೆ ನಾವು ನಿಂತುಕೊಳ್ಳುತ್ತೇವೆ. ಅವರ ಬೇಡಿಕೆಯಂತೆ ರಾಜಪಾಲರ ಗಮನಕ್ಕೆ ತಂದು ಕಲಬುರ್ಗಿಯಲ್ಲಿ ಉಗ್ರವಾದ ಹೋರಾಟ ಮಾಡುತ್ತೇವೆ. ಎಂದು ಎಚ್ಚರಿಸಿದ್ದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ತಳವಾರ ಸಮಾಜದ ರಾಜ್ಯಾಧ್ಯಕ್ಷರಾದ ಡಾ. ಸರ್ದಾರ ರಾಯಪ್ಪ, ಮಾಜಿ ಸಚಿವರು ಬಾಬುರಾವ್ ಚೌವ್ಹಾಣ್, ಬಿಜೆಪಿ ಕಲಬುರ್ಗಿ ಜಿಲ್ಲಾ ಅಧ್ಯಕ್ಷ ಅಶೋಕ ಬಗಲಿ, ಮಾಜಿ ಬಿಜೆಪಿ ಜಿಲ್ಲಾಧ್ಯಕ್ಷ ಶಿವರಾಜ್ ಪಾಟೀಲ್ ರದ್ದೆವಾಡಿಗಿ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಿಂದುಳಿದ ವರ್ಗ ಅವ್ವಣ್ಣ ಮ್ಯಾಕೇರಿ, ಮಾಜಿ ಕಾಡ ಅಧ್ಯಕ್ಷರು ಶರಣಪ್ಪ ತಳವಾರ, ಬಿಜೆಪಿಯ ಹಿರೇಮಠ ಅಂಬರಾಯ ಅಷ್ಟಗಿ, ಅಫಜಲಪುರ ತಾಲೂ, ಅಧ್ಯಕ್ಷರು ಬಿಜೆಪಿ ವಿದ್ಯಾಧರ ಮಂಗಳೂರೆ ,ಎನ್ ರುದ್ರಯ್ಯ ಬಿಜೆಪಿ ಮುಖಂಡರು, ಬಸವರಾಜ ಬೂದಿಹಾಳ, ವಿದ್ಯಾಧರ ಮಂಗಳೂರು, ಬಾಗೇಶ್ ಹೋತಿನಮಡು, ಸಾಬಣ್ಣ ಜಾಲಗಾರ, ಅಶೋಕ ಕಂಕಿ, ಪ್ರೇಮ ಕೋಲಿ, ಈರಣ್ಣ ಹೊಸಮನಿ, ಬಾಬುಗೌಡ ಮಾಲಿ ಪಾಟೀಲ, ಪ್ರವೀಣ, ಬೋಗೇಶ ಸೇರಿದಂತೆ ಬಿಜೆಪಿ ಜಿಲ್ಲಾ ಪದಾಧಿಕಾರಿಗಳು ಸಮಾಜದ ಮುಖಂಡರು ಭಾಗಿಯಾಗಿದ್ದರು.

## ಅನುದಾನದ ಮಂಜೂರಾತಿ ಪತ್ರ ಹಸ್ತಾಂತರ

ಯೋಜನೆ(ರಿ) ಬಸವಕಲ್ಯಾಣ ತಾಲ್ಲೂಕಿನ ರಾಜೇಶ್ವರ ವಲಯದ ಹಣಮಂತವಾಡಿ (ಆರ್) ಗ್ರಾಮದ ಜೈ ಹನುಮಾನ ದೇವಸ್ಥಾನಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಸಮುದಾಯ ಅಭಿವೃದ್ಧಿ ವಿಭಾಗದಿಂದ ರೂ. 1.5 ಲಕ್ಷ ಅನುದಾನ ಮೊತ್ತದ ಮಂಜೂರಾತಿ ಪತ್ರವನ್ನು ಗ್ರಾಮಾಭಿವೃದ್ಧಿ ಯೋಜನೆಯ ಬಸವಕಲ್ಯಾಣ ತಾಲ್ಲೂಕು ಯೋಜನಾಧಿಕಾರಿ ರವಿಂದ್ರ ರವರು ದೇವಸ್ಥಾನದ ಪಂಚ ಕಮಿಟೀಯ ಪದಾಧಿಕಾರಿಗಳಿಗೆ ಹಸ್ತಾಂತರ ಮಾಡಿದರು.

ಈ ಸಂಧರ್ಭದಲ್ಲಿ ಗ್ರಾಮಾಭಿವೃದ್ಧಿ ಯೋಜನೆಯ ಹಣಮಂತವಾಡಿ (ಆರ್) ಒಕ್ಕೂಟದ ಅಧ್ಯಕ್ಷರಾದ ಶ್ರೀಮತಿ ಲಾವಣ್ಯ ಬೋರಾಳೆ, ರಾಜೇಶ್ವರ ವಲಯ ಮೇಲ್ವಿಚಾರಕರಾದ ಅಶ್ವಿನಿ ಪೂಜಾರಿ ಗ್ರಾಮದ ಮುಖಂಡರಾದ ಶ್ರೀ ರಾಮಣ್ಣಾ ಕಮಲಾಪೂರೆ, ವಿಜಯಕುಮಾರ ದೊಡ್ಡಮನಿ, ನಾಗೇಂದ್ರರೆಡ್ಡಿ ಉಪಾರ, ವೆಂಕಟಸ್ವಾಮಿ ನಾಯ್ಡು, ಕಮಿಟೀಯ ಉಪಾಧ್ಯಕ್ಷರಾದ ಜ್ಞಾನರಾಜ ಕಮ್ಮಾ, ಕಾರ್ಯದರ್ಶಿ ವಿಠಲ ರಾಸೂರೆ, ಖಜಾಂಚಿ ಮಾಣಿಕ ಅಯ್ಯಣೋರ ಪದಾಧಿಕಾರಿಗಳಾದ ಆಕಾಶ ನಿರ್ಣಾ, ವೆಂಕಟೇಶ ಕಮ್ಮಾ, ಮಾದಣ್ಣಾ ಸೀತಾಳಗೇರಾ ಸೇವಾ ಪ್ರತಿನಿಧಿ ಶ್ರೀಮತಿ ನಾಗಮ್ಮಾ ಬುಕ್ಕಾ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು,

# ಅರವಿಂದ ಹಾಗೂ ಸುನೀಲ್ ಕುಲಕರ್ಣಿಯವರ ನೇಮಕಕ್ಕೆ ಹರ್ಷ


ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 21 : ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದಬೀದರ್ ತಾಲುಕು ಘಟಕವನ್ನು ರಚಿಸಲಾಗಿದೆ. ಜಿಲ್ಲಾ ಅಧ್ಯಕ್ಷ ವೆಂಕಟೇಶ್ವರ ಕುಲಕರ್ಣಿಯವರನೇತೃತ್ವದಲ್ಲಿ ರಚಿಸಲಾಗಿರುವ ತಾಲುಕು ಸಮೀತಿಗೆ ಮನೋಹರ್ ದಂಡೆಯವರನ್ನುಅಧ್ಯಕ್ಷರನ್ನಾಗಿ ನೇಮಿಸಲಾಗಿದೆ.ಪ್ರಗತಿಆರೋಗ್ಯ ಮತ್ತು ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಅರವಿಂದ ಕುಲಕರ್ಣಿಯವರನ್ನುಹಾಗೂ ಬೀದರ್ ಎಕ್ಸಪ್ರೆಸ್ ಪತ್ರಿಕೆಯ



ಸಂಪಾದಕ ರಾದ ಸುನೀಲ್ ಕುಲಕರ್ಣಿ ಯವರನ್ನು ಸಹ –ಕಾರ್ಯದರ್ಶಿ ಗಳನ್ನಾಗಿ ನೇಮಿಸಲಾಗಿದೆ.

ಸದರೀಯವರ ನೇಮಕಕ್ಕೆ ಅಕ್ಷಯ ವೆಲ್ಫೇರ್ ಸಂಸ್ಥೆಯ ಅಧ್ಯಕ್ಷ ಸುನೀತಾ ಆನಂದ, ಖ್ಯಾತ ಮಕ್ಕಳ ರೋಗ ತಜ್ಞ



ಡಾಕ್ಟರ ಸಿ.ಆನಂದರಾವ್, ರಾಜ್ಯ ಹಿರಿಯ ನಾಗರಿಕರ ಪ್ರಶಸ್ತಿ ಪುರಸ್ಕೃತ ವೀರಭದ್ರಪ್ಪ ಉಪ್ಪಿನ, ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಓಂಕಾರ್ ಪಾಟೀಲ್, ಹಿರಿಯ ಸಾಹಿತಿ ಎಂ.ಜಿ.ದೇಶಪಾಂಡೆ ಮುಂತಾದವರು ಹರ್ಷ ವ್ಯಕ್ತ ಪಡಿಸಿದ್ದಾರೆ.

## ಭಾನು ಮುಷ್ತಾಕ್ ನಮ್ಮ ನೆಲದ ಹೆಮ್ಮೆ : ಕೆ.ವಿ.ಪ್ರಭಾಕರ್ ಸಂತಸ

ಬೆಂಗಳೂರು ಮೇ 21 :ಬೂಕರ್ ವೇದಿಕೆಯಲ್ಲಿ ಕನ್ನಡದ ಸಾಹಿತ್ಯದ ಹಿರಿಮೆಯನ್ನು ಎತ್ತಿ ಹಿಡಿದ ಲೇಖಕಿ, ಪತ್ರಕರ್ತೆ, ಕತೆಗಾರ್ತಿ ಭಾನು ಮುಷ್ತಾಕ್ ಅವರಿಗೆ ಅಂತಾರಾಷ್ಟ್ರೀಯ ಭೂಕರ್ ಪ್ರಶಸ್ತಿ ಲಭಿಸಿರುವುದು ಅವರ ಕತೆಗಳಲ್ಲಿ ಬೆಸೆದಿರುವ ಭಾರತೀಯತೆಯ ಬೆಸುಗೆಗೆ ಸಿಕ್ಕಿರುವ ಅಂತಾರಾಷ್ಟ್ರೀಯ ಮನ್ನಣೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಸಂತಸ ವ್ಯಕ್ತಪಡಿಸಿದ್ದಾರೆ.ತಮ್ಮ ಲೇಖನ, ಭಾಷಣ ಮತ್ತು ಕತೆಗಳಲ್ಲಿ ನಮ್ಮ ನೆಲದ ಮೂಲ ಸತ್ವ ಮತ್ತು ಮೂಲ ತತ್ವ ಆಗಿರುವ ಸರ್ವ ಜನಾಂಗದ ಶಾಂತಿಯ ತೋಟ ಎನ್ನುವ ಮೌಲ್ಯವನ್ನು ಮತ್ತು ಜಾತ್ಯತೀತತೆಯನ್ನು ಬೆಸೆಯುವ ಕಾರ್ಯ ಮಾಡುತ್ತಲೇ ಬರುತ್ತಿದ್ದಾರೆ. ಇವರಿಗೆ ಬೂಕರ್ ಪ್ರಶಸ್ತಿ ಬಂದಿರುವುದು ಕನ್ನಡ ಸಾಹಿತ್ಯ ಮತ್ತು ಕನ್ನಡತನದ ಹಿರಿಮೆಯನ್ನು ಹೆಚ್ಚಿಸಿದ್ದು ಪ್ರತಿಯೊಬ್ಬ ಕನ್ನಡಿಗನೂ ಹೆಮ್ಮೆ ಪಡಬೇಕಾದ ಸಂದರ್ಭ ಇದಾಗಿದೆ.ವಿಶ್ವಮಾನವತೆಯ ಸದಾಶಯವನ್ನು ಎತ್ತಿ ಹಿಡಿಯುವ ಭಾನು ಮುಷ್ತಾಕ್ ಅವರ ಕತೆಗಳು ವಿಶ್ವದ ಎಲ್ಲಾ ಭಾಷೆಗಳಿಗೂ ಅನುವಾದಗೊಳ್ಳಬೇಕು ಎನ್ನುವುದು ನನ್ನ ಆಶಯ.

ಭಾನು ಮುಷ್ತಾಕ್ ಅವರ ಹಸೀನಾ ಮತ್ತು ಇತರ ಕೃತಿಗಳು ನನಗೆ ಬಹಳ ಇಷ್ಟವಾದ ಸಂಕಲನ. ಇವರನ್ನು ಈ ಸಂದರ್ಭದಲ್ಲಿ ಅಭಿನಂದಿಸುತ್ತೇನೆ.

# ಪ್ರಿಯಾಂಕ್ ಖರ್ಗೆಯನ್ನು ನಾಯಿಗೆ ಹೋಲಿಸಿದ ಛಲವಾದಿ ನಾರಾಯಣಸ್ವಾಮಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.21:ಪ್ರಿಯಾಂಕ್ ಖರ್ಗೆ ಮಾತೆತ್ತಿದ್ದರೆ ಪ್ರಧಾನ ಮಂತ್ರಿಯವರಬಗ್ಗೆಮಾತಾಡ್ತಾರೆ. ಪ್ರಿಯಾಂಕ್ ಖರ್ಗೆಯವರೆ ನೀವೇನಾದ್ರು ಕೇಳಬೇಕಾದ್ರೆ ,ನಿಮ್ಮ ಪ್ರಶ್ನೆಗಳನ್ನು ನಿಮ್ಮ ತಂದೆಯವರಿಗೆ ಹೇಳಿ ಅವರು ಮೋದಿಯವರಿಗೆ ಕೇಳ್ತಾರೆ,ಮಲ್ಲಿಕಾರ್ಜುನ್ ಖರ್ಗೆಯವರು ಅಷ್ಟು ಬುದ್ಧಿವಂತರು ಅಲ್ವಾ,ಆನೆ ಹೋಗ್ತಿದ್ದರೆನಾಯಿಬೊಗಳಿದಂತೆ ಬೌ ಬೌ ಅಂತಾ ಯಾವಾಗಲೂ ಮೋದಿಯವರ ವಿರುದ್ಧ ಬೊಗಳ್ತಿರಾ ಇಲ್ಲಿ ಆನೆ ಪ್ರಧಾನಿ ನರೇಂದ್ರ ಮೋದಿ ನಾಯಿ ಪ್ರಿಯಾಂಕ್ ಖರ್ಗೆಯವರು ಎಂದು ವಿಧಾನ ಪರಿಷತ್ತಿನ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ತಿಳಿಸಿದರು.




ಅವರು ಕಲಬುರಗಿಯಲ್ಲಿ ಚಲವಾದಿ ನಾರಾಯಣ ಸ್ವಾಮಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ,ಪ್ರಿಯಾಂಕ ಖರ್ಗೆ ಸ್ಥಳೀಯ ವಿಷಯಗಳನ್ನು ಮಾತನಾಡದೇ ಯಾವಗಲೂ ಪ್ರಧಾನಿ ಮೋದಿಯನ್ನು ಟೀಕಿಸುವುದರಲ್ಲೇ ಕಾಲಹರಣ ಮಾಡುತ್ತಾರೆ.ಆಪರೇಷನ್ ಸಿಂಧೂರದ ಬಗ್ಗೆ ಇಡೀ ದೇಶ ಹೊಗಳಿದರೇ ಇವರು ಮಾತ್ರ ಇಲ್ಲಸಲ್ಲದ ಕ್ಯಾತೆ ತೆಗೆದು ಮಾತನಾಡುತ್ತಾರೆ ಎಂದರು.

ಕರ್ನಾಟಕಕಾಂಗ್ರೆಸ್ ಸರ್ಕಾರದ ವೈಫಲ್ಯಗಳ ಶಾಪವಾದ ವಸೂಲಿ ಸರ್ಕಾರ ಅನ್ನೋ ಟ್ಯಾಗ್ ಲೈನ್ ಹೊಂದಿರುವ ಚಾರ್ಜ್ ಶೀಟ್‌ನ್ನು ಬಿಡುಗಡೆಗೊಳಿಸಿದರು.

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಸಾಧನಾ ಸಮಾವೇಶ ಮಾಡಿದೆ.ನನ್ನ ಪ್ರಕಾರ ಕಾಂಗ್ರೆಸ್ ಸಾಧನೆಗಳು ಶೂನ್ಯ ಜಿರೋ.ಜನರವೇದನೆಗಳ ಸಮಾವೇಶ ಅದು ಆಗಬೇಕಿತ್ತು

ಬೆಂಗಳೂರಿನ ರಸ್ತೆಯಲ್ಲಿ ಜನರಿಗೆ ಓಡಾಡೋದಕ್ಕೆ ಆಗ್ತಿಲ್ಲ ಚರಂಡಿ ಬ್ಲಾಕ್ ಆಗಿ ಕೆಟ್ಟ ನೀರು ರಸ್ತೆ ಮೇಲೆ ಮನೆಗೆ ನುಗ್ತುತ್ತಿವೆಜನ ಗಾಡಿಯಲ್ಲಿ ನಡೆದುಕೊಂಡು ಹೋಗೋಕೆ ಆಗೋದಿಲ್ಲಬಹುಶಃ ಸರ್ಕಾರ ವಾಟರ್ ಬೋಟ್ ಕೊಡಬೇಕಾಗುತ್ತೆಮುಖ್ಯಮಂತ್ರಿ ಆ ತಿರ್ಮಾನ ತೆಗೆದುಕೊಳ್ಳುವ ಪರಿಸ್ಥಿತಿ ಬಂದಿದೆ ಎಂದರು. ಗೃಹ ಲಕ್ಷ್ಮೀ ಹಣ ನೀವು ಐದು ವರ್ಷ ಕೊಟ್ಟರು ಮಳೆಯಿಂದ ಹಾನಿಯಾದ ಮನೆ ವಸ್ತುಗಳು ಖರಿದಿ ಮಾಡೋದಕ್ಕೆ ಆಗೋದಿಲ್ಲ ಅಂತಿದ್ದಾರೆ ಹೆಣ್ಣ ಮಕ್ಕಳು

ಈ ಸರ್ಕಾರದ ದೊಡ್ಡ ಸಾಧನೆ ಭ್ರಷ್ಟಾಚಾರ, ಕಮಿಷನ್ ಹೊಡೆದಿದ್ದೆ ಇವರ ಸಾಧನೆ.ಈ ಸರ್ಕಾರದ ಮಂತ್ರಿಗಳು ಕಚೇರಿ ತೆರಳಿದ ಬಳಿಕ ಭ್ರಷ್ಟಾಚಾರದ ಒಳ್ಳೆ ವ್ಯಾಪಾರ ಆಗಲಿ ಅಂತಾ ಬೇಡಿಕೊಳ್ಳುತ್ತಾರೆಸಿದ್ದರಾಮಯ್ಯ ಅವರ ಹೆಂಡತಿಯ ಅಣ್ಣ ಐದು ಲಕ್ಷಕ್ಕೆ ಜಮೀನು ಪಡೆದು 62 ಕೋಟಿ ಕೊಡುವಂತೆ ಕೇಳಿದ್ದರು.ಖರ್ಗೆ ಕುಟುಂಬ ಏರ್ಪೋರ್ಟ್ ಪಕ್ಕದಲ್ಲೆ ಐದು ಎಕರೆ ಜಮೀನು ಪಡೆದರು

ಇಲ್ಲಿಗಲ್ ಅಂತಾ ಗೊತ್ತಾದ ಬಳಿಕ ಇಬ್ಬರು ರಾತ್ರೋ ರಾತ್ರಿ ವಾಪಸ್ ಕೊಟ್ಟರು

ರಾಹುಲ್ ಗಾಂಧಿಗೆ ಮತಿ ಭ್ರಮಣೆ ಆಗಿದೆಯೋ ಏನೋ ಗೊತ್ತಿಲ್ಲ.ನಮ್ಮ ಎಷ್ಟು ಪ್ಲೈಟ್ ಹೊಡೆದುರುಳಿಸಿದ್ರು ಅಂತಾ ಕೇಳ್ತಾರೆ.ರಾಹುಲ್ ಅನ್ ಫಿಟ್ ಫಾರ್ ಅಪೋಸಿಶನ್ ಲೀಡರ್

ಮಲ್ಲಿಕಾರ್ಜುನ್ ಖರ್ಗೆ ಚುಟ್ ಪುಟ್ ಯುದ್ದ ನಮ್ಮ ಪಾಕಿಸ್ತಾನ ಅಂತಾ ಹೇಳಿದ್ದಾರೆ. ನೀವು ಯಾರ ಪರ ಇದ್ದಿರಿ ಅಂತಾ ಹೇಳಬೇಕು ಅಲ್ವಾ ಖರ್ಗೆಯವರೇ ಎಂದು ಪ್ರಶ್ನಿಸಿದರು.

# ದೇಶಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ರೈತರ ನೋಂದಣಿಗೆ ಮೊಬೈಲ್ ಆಪ್ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.21– ತಲೆ ತಲಾಂತರಗಳಿಂದ ಕೃಷಿಯಲ್ಲಿ ದೇಸಿ ತಳಿಗಳನ್ನು ಬಳಕೆ ಮಾಡುತ್ತಿರುವ ರೈತರಿಗೆ ಉತ್ತೇಜನ ನೀಡಲು ಕೃಷಿ ಇಲಾಖೆ ಜಿಲ್ಲೆಯಲ್ಲಿ ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮ ಹಮ್ಮಿಕೊಂಡಿದೆ. ಇದಕ್ಕಾಗಿ ರೈತರ ನೋಂದಣಿಗೆ ಮೊಬೈಲ್ ಆಪ್ ಬಿಡುಗಡೆ ಮಾಡಿದೆ.

ಸ್ಥಳೀಯ ತಳಿಗಳು ಅಥವಾ ಸಾಂಪ್ರದಾಯಿಕ ಕೃಷಿಪದ್ಧತಿಯಿಂದ ಅಭಿವೃದ್ಧಿ, ನಿರ್ವಹಿಸಲ್ಪಡುವ ತಳಿಗಳು ದೇಸಿ ತಳಿಗಳೆಂದು ಕರೆಯಲ್ಪಡುತ್ತವೆ, ಇವು ರೈತರ ಸಾಂಪ್ರದಾಯಿಕ ಮತ್ತು ಪರಂಪರೆ ಪ್ರಭೇದಗಳಾಗಿರುತ್ತವೆ. ಈ ತಳಿಗಳಲ್ಲಿರುವ ವಿಶಿಷ್ಟ ಗುಣಲಕ್ಷಣಗಳು ಮತ್ತು ಭೌಗೋಳಿಕ ಮೂಲಗಳ ಕಾರಣದಿಂದ ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾದ ಅಧಿಸೂಚಿತ ಪ್ರಭೇದಗಳಿಗಿಂತ ದೇಸಿ ತಳಿಗಳು ಪೋಷಕಾಂಶಗಳಲ್ಲಿ ಸಮೃದ್ಧವಾಗಿರುತ್ತವೆ ಎಂದು ಕೃಷಿ ಇಲಾಖೆ ತಿಳಿಸಿದೆ.

ದೇಸಿ ತಳಿಗಳನ್ನು ಸಂರಕ್ಷಿಸಿ ಬೆಳೆಸುವ ಮೂಲಕ ಕೃಷಿ ಪರಂಪರೆಯನ್ನು ಮುಂದುವರೆಸುತ್ತಿರುವ ರೈತರನ್ನು ಗುರುತಿಸುವುದು ಮತ್ತು ಉತ್ತೇಜಿಸುವುದನ್ನು ಮನಗಂಡು ಕೃಷಿ ಇಲಾಖೆಯು ದೇಸಿ ತಳಿಗಳ ನಿರಂತರ ಕೃಷಿಯನ್ನು ಪ್ರೋತ್ಸಾಹಿಸಲು, ಜೀವ ವೈವಿಧ್ಯತೆಯನ್ನು ಬೆಂಬಲಿಸಲು ಹಾಗೂ ಸುಸ್ಥಿರ ಕೃಷಿಪದ್ಧತಿಯನ್ನು ಪೋಷಿಸಲು ಈ ಉತ್ತೇಜನ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲಾಗಿರುತ್ತದೆ.

ಕಣ್ಮರೆಯಾಗುತ್ತಿರುವ ತಳಿಗಳನ್ನು ಸಂರಕ್ಷಿಸುವ ಜೊತೆಗೆ ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ದೇಸಿ ತಳಿಗಳ ಗುರುತಿಸುವಿಕೆ ಹಾಗೂ ಸಂರಕ್ಷಣೆಯ ಗುರಿಯನ್ನು ಹೊಂದಲಾಗಿದೆ.ದೇಸಿ ತಳಿಗಳನ್ನು ಹಿಂದಿನಿಂದಲೂ ಸಂರಕ್ಷಿಸಿ ಕೃಷಿ ಮಾಡುತ್ತಿರುವ ರೈತರಿಗೆ ಬೆಂಬಲ ನೀಡುವ ಜೊತೆಗೆ ದೇಸಿ ತಳಿಗಳ ಜನಪ್ರಿಯತೆಗೆ ಬೆಂಬಲ ನೀಡುವ ಸಂಕಲ್ಪ ಮಾಡುವುದು ಕಾರ್ಯಕ್ರಮದ ಉದ್ದೇಶವಾಗಿದೆ.

ಕೃಷಿ ಇಲಾಖೆಯ ವತಿಯಿಂದ ದೇಸಿ ತಳಿ ಸಂರಕ್ಷಿಸುತ್ತಿರುವ ರೈತರನ್ನು ಗುರುತಿಸಲು ಮತ್ತು ಅಂತಹ ರೈತರ ನೋಂದಣಿಗಾಗಿ ಮೊಬೈಲ್ ಆಪ್ ಬಿಡುಗಡೆ ಮಾಡಿದ್ದು, ಈಗಾಗಲೆ ಕೃಷಿ ಇಲಾಖೆಯ ಸಿಬ್ಬಂದಿಗಳು ರೈತರ ನೋಂದಣಿಯನ್ನು ಪ್ರಾರಂಭಿಸಿರುತ್ತಾರೆ.ಕೃಷಿ ಇಲಾಖೆಯ ನೂತನ ಯೋಜನೆಯ ಲಾಭ ಪಡೆಯಲು ರೈತರು, ತಮ್ಮ ಸಮೀಪದ ಕೃಷಿ ಇಲಾಖೆಯ ಕಛೇರಿಗೆ ಭೇಟಿ ನೀಡುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಶಂಕರಲಿಂಗೇಶ್ವರ ಮಹಾಸ್ವಾಮಿಗಳ ಜಾತ್ರಾ ಮಹೋತ್ಸವ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಮೇ.21:ತಾಲೂಕಿನ ಕೆಸರಟ್ಟಿ ಗ್ರಾಮದ ಶ್ರೀ ಶಂಕರಲಿಂಗ ಗುರುಪೀಠ ಮಹಾಸಂಸ್ಥಾನ ಮಠದ ಘೋರ ತಪಸ್ವಿ ಶ್ರೀ ಶಂಕರ ಲಿಂಗೇಶ್ವರ ಮಹಾಸ್ವಾಮಿಗಳ 95ನೇ ಜಾತ್ರಾ ಮಹೋತ್ಸವ ಹಾಗೂ ಶ್ರೀ ಸೋಮಲಿಂಗ ಮಹಾಸ್ವಾಮಿಗಳ 19ನೇ ತುಲಾಭಾರ ಹಾಗೂ ಪ್ರಶಸ್ತಿ ಪ್ರಧಾನಸಮಾರಂಭದಅಂಗವಾಗಿ ಮೇ 27 ರಿಂದ 28 ರ ವರೆಗೆ ಶ್ರೀಮಠದಲ್ಲಿ ವಿವಿಧ ಕಾರ್ಯಕ್ರಮಗಳು ಜರುಗಲಿವೆ. ಜಾತ್ರಾಮಹೋತ್ಸವದಅಂಗವಾಗಿ ಮೇ 27 ಮಂಗಳವಾರದಂದು ಬೆಳಿಗ್ಗೆ 5–00 ರಿಂದ 7–00 ವರೆಗೆ ಶ್ರೀ ಶಂಕರಲಿಂಗೇಶ್ವರ ಮಹಾಸ್ವಾಮಿಗಳ ಗದ್ದುಗೆಗೆ ಹಾಗೂ ಅಮೋಘಸಿದ್ಧ ದೇವರ ಮೂರ್ತಿಯ ಪೂಜಾರತಿ ಹಾಗೂ ಶ್ರೀ



ಮಂಜು ರಾಥೋಡ ನಾಗೂರ ತಾಂಡಾ ಶ್ರೀ ಗೋಪಾಲ ಚೌಹಾನ್ ಕಾಳಗಿ ತಾಂಡಾ ಪರಿವಾರದಿಂದ ಪೂಜ್ಯ ಶ್ರೀ ಸೋಮಲಿಂಗ ಮಹಾಸ್ವಾಮಿಗಳ ರುದ್ರಾಕ್ಷಿ ಕಿರೀಟ ಧಾರಣೆ ನಡೆಯುವುದು. ಸಂಜೆ 6:00 ಗಂಟೆಗೆ ಶ್ರೀ ನಾಮದೇವ ಚಂಪು ಚವಾಣ್ ಹಾಗೂ ಶ್ರೀ ಸಂತೋಷ್ ಚಂಪು ಚವಾಣ್ ನಾಗೂರ ತಾಂಡಾ ಪರಿವಾರದಿಂದ ಪರಮಪೂಜ್ಯ ಶ್ರೀ ಸೋಮಲಿಂಗ ಮಹಾಸ್ವಾಮಿಗಳ 19ನೇ ತುಲಾಭಾರ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭ ಜರಗುವುದು. ರಾತ್ರಿ 10.30 ಗಂಟೆಗೆ ಸುಪ್ರಸಿದ್ಧ ಶ್ರೀ ಭೀಮ ಹರಿಸಿಂಗ್ ನಾಯಕ್ ಬೊಮ್ಮನಜೋಗಿ ತಾಂಡಾ ಹಾಗೂ ಶ್ರೀ ಅಮೋಘಸಿದ್ದೇಶ್ವರ ಡೊಳ್ಳಿನ ಗಾಯನ ಸಂಘದ ಕುಮಾರಿ ಶಾಂತಾ ಅಕ್ಕ ಹಡಲಗೇರಿ, ಮಾಳಿಂಗೇಶ್ವರ ಡೊಳ್ಳಿನ ಗಾಯನ ತಂಡ ಹಾಗೂ ಲೋಕೇಶ ಸೋಮು ರವಿ ಬೊಮ್ಮಗೊಂಡ ತಾಂಡಾ ಅವರಿಂದ ಡೊಳ್ಳಿನ ಗಾಯನ ಕಾರ್ಯಕ್ರಮ ನಡೆಯುವುದು. ದಿನಾಂಕ 28–5–2025ರಂದು ಅಮೃತಗಳಿಗೆಯ 2 ಗಂ–ಟೆಗೆ ಗಂಗಸ್ಥಳ ಪೂಜೆ, ಪ್ರಾತ 4:30 ಗಂಟೆಗೆ ಶ್ರೀ ಅಮೋಘಸಿದ್ದೇಶ್ವರ ಹೇಳಿಕೆ ನಡೆಯುವುದು ನಂತರ ಬೆಳಿಗ್ಗೆ 7:00 ಗಂಟೆಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಕಲ ವಾದ್ಯ ಮೇಳ ಗಳೊಂದಿಗೆ ಪಲ್ಲಕ್ಕಿ ಉತ್ಸವ ಜರಗುವುದು. ಶ್ರೀ ಪ್ರೇಮ ಸಿಂಗ್ ನಾಯಕ ವ್ಯವಸ್ಥಾಪಕರು ಎಸ್ ಬಿ ಐ ಬ್ಯಾಂಕ್ ಇವರಿಂದ ಮಹಾಪ್ರಸಾದ ಸೇವೆ ಇರುವುದು. ಈ ಎಲ್ಲ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಯಾವತ್ತೂ ಶ್ರೀಮಠದ ಭಕ್ತರು ಅಪಾರ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಶ್ರೀ ಶಂಕರಲಿಂಗ ಗುರುಪೀಠ ಮಹಾ ಸಂಸ್ಥಾನ ಮಠದ ಪ್ರಕಟಣೆ ತಿಳಿಸಿದೆ.

# ಆತ್ಮವಿಶ್ವಾಸದಿಂದ ಎಲ್ಲವೂ ಸಾಧ್ಯ

ಮಲ್ಲಮ್ಮ ನುಡಿ ವಾರ್ತೆ

ಬೀದರ್:ಮೇ.21:ಆತ್ಮವಿಶ್ವಾಸದಿಂದ ಅಂದುಕೊಂಡ ಎಲ್ಲವನ್ನೂ ಸಾಧಿಸಲು ಸಾಧ್ಯವಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ನಗರದ ನೌಬಾದನ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಈಚೆಗೆ ನಡೆದ ಸುವರ್ಣ ಮಹೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.




ಬೀದರ್ ವಿದ್ಯಾರ್ಥಿಗಳು ಯಾರಿಗಿಂತಲೂ ಕಡಿಮೆ ಇಲ್ಲ. ಅನೇಕರು ವಿಜ್ಞಾನಿಗಳಾಗಿದ್ದಾರೆ. ದೇಶ, ವಿದೇಶದಲ್ಲಿ ಉನ್ನತ ಹುದ್ದೆಗಳಲ್ಲಿದ್ದಾರೆ ಎಂದು ತಿಳಿಸಿದರು.50 ವರ್ಷ ಪೂರೈಸಿರುವ ಕಾಲೇಜು ಸಾವಿರಾರು ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ರೂಪಿಸಿದೆ ಎಂದು ತಿಳಿಸಿದರು.ಸರ್ಕಾರಿ ಕಾಲೇಜುಗಳಲ್ಲಿ ಕಡಿಮೆ ಶುಲ್ಕದಲ್ಲಿ ಗುಣಮಟ್ಟದ ಶಿಕ್ಷಣ ಕೊಡಲಾಗುತ್ತಿದೆ. ಬಡ ಹಾಗೂ ಮಾಧ್ಯಮ ವರ್ಗದ ವಿದ್ಯಾರ್ಥಿಗಳು ಸರ್ಕಾರಿ ಕಾಲೇಜುಗಳ ಪ್ರಯೋಜನ ಪಡೆಯಬೇಕು ಎಂದು ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್ ಹೇಳಿದರು.

1974 ರಲ್ಲಿ ಪ್ರಾರಂಭವಾದ ಕಾಲೇಜು ಯಶಸ್ವಿಯಾಗಿ 50 ವರ್ಷ ಪೂರೈಸಿದೆ. ಜಿಲ್ಲೆಯ ಶೈಕ್ಷಣಿಕ ಪ್ರಗತಿ ತನ್ನದೇ ಆದ ಕೊಡುಗೆ ನೀಡಿದೆ ಎಂದು ಪ್ರಾಚಾರ್ಯೆ ಡಾ. ಜೈಶ್ರೀ ಪ್ರಭಾ ತಿಳಿಸಿದರು.

ಕಾಲೇಜಿನಲ್ಲಿ ಸಾವಿರಾರು ವಿದ್ಯಾರ್ಥಿಗಳು ಸ್ನಾತಕ ಹಾಗೂ ಸ್ನಾತಕೋತ್ತರ ಶಿಕ್ಷಣ ಪೂರ್ಣಗೊಳಿಸಿದ್ದಾರೆ ಎಂದು ತಿಳಿಸಿದರು.

ಬೀದರ್ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ, ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಬಿಡಿಎ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್, ಕಾಲೇಜಿನ ಸಿಬ್ಬಂದಿ ಕಾರ್ಯದರ್ಶಿ ಡಾ. ರಾಜಕುಮಾರ, ಸಾಂಸ್ಕೃತಿಕ ಕಾರ್ಯದರ್ಶಿ ಡಾ. ಎಲಿಷಾ ದೇವಿದಾಸ,ಡಾ. ಮಹಾದೇವಿ ಹೆಬ್ಬಾಳೆ, ಡಾ. ಜೈಭಾರತ ಮಂಗೇಶ್ಕರ್, ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ ಇದ್ದರು. ಪಾಲಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಶಿವಕುಮಾರ ಶಾರದಳ್ಳಿಗೆ ಉತ್ತಮ ಜಿಲ್ಲಾ ಅಧ್ಯಕ್ಷ ಪ್ರಶಸ್ತಿ ಪ್ರದಾನ.

ಮಲ್ಲಮ್ಮ ನುಡಿ ವಾರ್ತೆ

ಚಿಮುದ್ದೇಬಿಹಾಳ: ವಿಜಯನಗರ ಜಿಲ್ಲೆಯಲ್ಲಿ ಜರುಗಿದ ರಾಜ್ಯ ಕರಾಟೆ ಶಿಕ್ಷಕರ ಸಂಘದ 7ನೇ ಮಹಾಸಭೆ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಶಿಕ್ಷಕರ ಸಂಘದಿಂದ ಕೊಡಮಾಡುವ ಉತ್ತಮ ಜಿಲ್ಲಾ ಅಧ್ಯಕ್ಷ ಪ್ರಶಸ್ತಿಯನ್ನು ಸ್ಥಳೀಯ ಕರಾಟೆ ಶಿಕ್ಷಕ ಶಿವಕುಮಾರ ಶಾರದಳ್ಳಿಗೆ ಪ್ರದಾನ ಮಾಡಲಾಯಿತು.

ಶಾರದಳ್ಳಿ ಅವರು

ಕರಾಟೆ ಶಿಕ್ಷಕನಾಗಿ ಹಲವು ವರ್ಷಗಳ ಸೇವೆ ಸಲ್ಲಿಸುವದರ ಜೊತೆಗೆ ಸಾಮಾಜಿಕ, ಸಾಂಸ್ಕೃತಿಕ ಕ್ಷೇತ್ರ ಸೇರಿ ಇತರೆ ಕ್ಷೇತ್ರಗಳ ಇವರ ಪರಿಶ್ರಮದ ಸೇವೆಯನ್ನು ಗುರುತಿಸಿ ಸನ್ಮಾನಿಸಿ ಗೌರವಿಸಿದ್ದಾರೆ.



ಈ ಸಂದರ್ಭದಲ್ಲಿ. ಅಖಿಲ ಕರ್ನಾಟಕ ಸ್ಪೋರ್ಟ್ಸ್ ಕರಾಟೆ ಸಂಸ್ಥೆಯ ಅರುಣ್ ಮಾಚಯ್ಯ ರಾಜ್ಯಾಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿ ಭಾರ್ಗವ ರೆಡ್ಡಿ ಕರ್ನಾಟಕ ರಾಜ್ಯ ಕರಾಟೆ ಶಿಕ್ಷಕರ ಸಂಘ ರಾಜ್ಯಾಧ್ಯಕ್ಷರು ನದೀಮ್ ಪ್ರಧಾನ ಕಾರ್ಯದರ್ಶಿ ರವಿ ಸಾಲಿಯರ್ ಹಾಗೂ ಸ್ಥಳೀಯ ಕ್ರೀಡಾಧಿಕಾರಿಗಳು ವಿಜಯನಗರ ಜಿಲ್ಲಾ ಕರಾಟೆ ಶಿಕ್ಷಕರ ಸಂಘ ಅಧ್ಯಕ್ಷರು, ಉಪಾಧ್ಯಕ್ಷರು ಇತರೆ ಪದಾಧಿಕಾರಿಗಳು, ಪ್ರಮುಖರು ಉಪಸ್ಥಿತರಿದ್ದರು.




ಬಸವಕಲ್ಯಾಣ:– ಹುಲಸೂರು ತಾಲೂಕಿನ ಗೋರ್ಟಾ(ಬಿ) ಗ್ರಾಮದ ರುದ್ರೇಶ್ವರ ದೇವಸ್ಥಾನದಲ್ಲಿ ಸಂಗೀತ ರುದ್ರೇಶ್ವರ ಲಿಂ. ವೀರಮ್ಮ ವಿರೂಪಾಕ್ಷಯ್ಯ ಸ್ವಾಮಿ ಅವರ ಸ್ಮರಣೋತ್ಸವ ಹಾಗೂ ಕಲ್ಯಾಣ ಕರ್ನಾಟಕದ ಪ್ರಾಂತೀಯ ಆರನೆಯ ಸಂಗೀತ ಸಮ್ಮೇಳನ ಉದ್ಘಾಟನೆಯಲ್ಲಿ ಬೀದರ್ ವಿಶ್ವವಿದ್ಯಾಲಯದ ಕುಲಪತಿ ಜಿ.ಎಸ್ ಬಿರಾದಾರ ಅಕ್ಕಮಹಾದೇವಿ ಚೈತನ್ಯ ಪೀಠದ ಶ್ರೀ ಶ್ರೀಶೈಲದ ತಪೋ ರತ್ನ ಕರುಣಾದೇವಿ ಮಾತೆ ಸಂಗೀತ ರುದ್ರೇಶ್ವರ ಸಂಗೀತ ರುದ್ರೇಶ್ವರ ಮಹಾ ಸಂಸ್ಥಾನದ ಪೂಜ್ಯ ಶ್ರೀ ಡಾ. ರಾಜಶೇಖರ್ ಶಿವಾಚಾರ್ಯರು ಪ್ರಸಿದ್ಧ ಸಂಗೀತ ಕಲಾವಿದರಾದ ಸಿದ್ದರಾಮಯ್ಯಾ ಸ್ವಾಮಿ ಗೋರ್ಟಾ ರಾಮುಲು ಗಾದಗಿ ರಾಮಚಂದ್ರ ಗಣಾಪುರ ಶಿವಯ್ಯಾ ಸ್ವಾಮಿ ಡಿಗಂಬರ ಬಿರಾದಾರ ಸೇರಿದಂತೆ ಅನೇಕರು ಭಾಗವಹಿಸಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಬೇಸಿಗೆ ಶಿಬಿರಕ್ಕೆ ಅಕಸ್ಮಿಕ ಜಿಲ್ಲಾಧಿಕಾರಿ ಬೇಟಿ.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮೆ 21 ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು, ಬಾಲಕರ ಪ್ರೌಢಶಾಲಾ ವಿಭಾಗ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಅನಿರೀಕ್ಷಿತವಾಗಿ ಭೇಟಿ ನೀಡಿದರು.

ಬೇಸಿಗೆ ಶಿಬಿರ ಹಾಗೂ ಮೇ / ಜೂನ್–2025ರ ಎಸ್ಎಸ್ಎಲ್‌ಸಿ ಪರೀಕ್ಷೆ–2 ಗೆ ನೊಂದಣಿಯಾದ ಮಕ್ಕಳ ವಿಶೇಷ ತರಗತಿ ವೀಕ್ಷಣೆ ಮಾಡುತ್ತಾ ಬೇಸಿಗೆ ಶಿಬಿರದಲ್ಲಿ ಭಾಗವಹಿಸಿದ ಮಕ್ಕಳಿಗೆ ನ್ಯೂಟನ್ ಮೋದಲನೇ, ಎರಡನೇ ಮತ್ತು ಮೂರನೇ ನಿಯಮಗಳ ಕುರಿತು ಮಕ್ಕಳಿಗೆ ಪ್ರಶ್ನೆ ಕೇಳಿದರು . ಹಾಜರಿದ್ದ ವಿದ್ಯಾರ್ಥಿ ಉತ್ತರ ನೀಡಿದರು .ಮಕ್ಕಳು ಈ ಶಿಬಿರ ಮುಖಾಂತರ ಹೆಚ್ಚಿನ ಜ್ಞಾನವನ್ನು ಪಡೆದುಕೋಳ್ಳಬೇಕೆಂದು ನುಡಿದರು.. ತದನಂತರ ಪ್ರಾಯೋಗಿಕವಾಗಿ ಶಾಲೆಯ ಆವರಣದಲ್ಲಿ ವಿದ್ಯಾರ್ಥಿಯಿಂದ ರಾಕೇಟ್ ಹಾರಿಸುವುದನ್ನು ವೀಕ್ಷಿಸಿದರು.



ಸಹಾಯಕ ಆಯುಕ್ತರಾದ ಮುಕುಲ್ ಜೈನ್ ಮಕ್ಕಳು ತಯ್ಯಾರಿಸಿದ ರಾಕೇಟ್ ಗಳು , ಕೀರಿಟ್ ಗಳನ್ನು ವೀಕ್ಷಿಸಿದರು.

ಈ ಭೇಟೀಯಲ್ಲಿ. ಅಭಿವೃದ್ಧಿ ಮಂಡಳಿಯ ಆಯುಕ್ತರಾದ ಜಗನ್ನಾಥ ರೆಡ್ಡಿ, ತಹಸೀಲ್ದಾರರಾದ ಡಾ.ದತ್ತಾತ್ರೇ ಗಾದಾ , ನಗರ ಸಭೆಯ ಪೌರಾಯುಕ್ತರಾದ ರಾಜು ಬಣಕರ್, ಸರ್ಕಾರಿ ನೌಕರರ ಸಂಘದ ತಾಲೂಕಾ ಅಧ್ಯಕ್ಷರು ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರಾದ ದಿಲೀಪ ಕುಮಾರ ಉತ್ತಮ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸಿದ್ದವೀರಯ್ಯಾ ರುದನೂರ, ಕ್ಷೇತ್ರ ಸಮನ್ವಯಾಧಿಕಾರಿಗಳಾದ ಪ್ರಭಾಕರ ಕಳಮಾಸೆ, ನಗರ ವೈದ್ಯಾಧಿಕಾರಿಗಳಾದ ಡಾ.ಅಪರ್ಣಾ ,ಪ್ರಭಾರಿ ಉಪ ಪ್ರಾಂಶುಪಾಲರಾದ ಸಂಜೀವಕುಮಾರ ನಡುಕರ, ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಶಾಲಿವಾನ ಬಿರಾದಾರ, ಸಮೂಹ ಸಂಪನ್ಮೂಲ ವ್ಯಕ್ತಿ ಗಿರಿಧರ ಧನ್ನೂರೆ, ಅಜೀಂ ಪ್ರೇಮ್ ಜಿ ಫೌಂಡೇಶನ್ ಸಂಪನ್ಮೂಲ ವ್ಯಕ್ತಿ ಮಹೇಶ ಬೂವಿ, ಶಿಕ್ಷಕರಾದ ವಿರೇಶ ಹೆಗ್ಗೆ, ರಾಮ ಪಾಟೀಲ್, ಎಂಡಿ ಶರೀಫ್, ಪ್ರವೀಣ ಸೊಮವಂಶಿ, ವಿಜ್ಞಾನ ಸಹಾಯಕರಾದ ಮಹಾದೇವ ಅಲದೇಪ್ಪ , ದ್ವಿತೀಯ ದರ್ಜೆ ಸಹಾಯಕರಾದ ಮಂಗಲಾ, ಸುನೀತಾ ಕುಪ್ಪೆ ಹಾಗೂ ವಿವಿಧ ಶಾಲೆಗಳ ಮಕ್ಕಳು ಉಪಸ್ಥಿತರಿದ್ದರು.

## ತಾಲೂಕ ವಲಯ ಅರಣ್ಯ ಕಚೇರಿ ಉದ್ಘಾಟನೆ ಈ ಭಾಗದ ಅರಣ್ಯ ಸಂರಕ್ಷಣೆಗೆ ಶ್ರಮಿಸಿ:– ಮುಜಿಬೋದ್ದಿನ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ರಾಜ್ಯದಲ್ಲಿ ಹೊಸ ತಾಲೂಕ ರಚನೆಯಾದ ಮೇಲೆ ಅರಣ್ಯ ಇಲಾಖೆ ಹೊಸದಾಗಿ ಪ್ರಾದೇಶಿ ಕಚೇರಿಗಳು ಮಂಜೂರು ಮಾಡಿದ್ದಾರೆ. ಏಪ್ರಿಲ್ 1ರಿಂದ ಕಚೇರಿ ಕಾರ್ಯ ಆರಂಭವಾಗಿದೆ. ಮಂಗಳವಾರ ಪಟ್ಟಣದ ಪ್ರಿಯಾದರ್ಶನಿ ಕಾಲೋನಿಯ ಫಾತಿಮಾಪುರ ರಸ್ತೆಯಲ್ಲಿರುವ ಅರಣ್ಯ ವಸತಿ ಗೃಹದಲ್ಲಿ ತಾಲೂಕ ಕಚೇರಿ ಆರಂಭಗೊಂಡಿದೆ. ಪ್ರಾದೇಶಿಕ ವಲಯ ಅರಣ್ಯ ಸಹಾಯಕ ಸಂರಕ್ಷಣಾಧಿಕಾರಿ ಮುಜಿಬೋದ್ದಿನ ಕಛೇರಿ ಉದ್ಘಾಟಿಸಿ ಮಾತನಾಡಿದ ಅವರು, ಅರಣ್ಯ ಇಲಾಖೆ ಸಿಬ್ಬಂದಿ ವರ್ಗದವರು ಈ ಭಾಗದ ಅರಣ್ಯ ಸಂರಕ್ಷಣೆ ಹಾಗೂ ಹಸಿರು ಕರಣಕ್ಕೆ ಶ್ರಮಿಸಬೇಕೆಂದು ತಿಳಿಸಿದರು. ಬೀದರ ಸಹಾಯಕ ಸಂರಕ್ಷಣಾಧಿಕಾರಿ ರಮೇಶ ಕನಕಟ್ಟರ್, ಪುರಸಭೆ ಉಪಾಧ್ಯಕ್ಷ ಮುಜಾಫರ್ ಪಟೇಲ್, ಸದಸ್ಯರಾದ ನಸೀರ್



ಹಕ್ಕಿಮ್, ವಿಶಾಲ ಬೋರಳೆ, ರಾಜದೀಪ್ ಜಾಬಾ, ವಲಯ ಅರಣ್ಯಾಧಿಕಾರಿಗಳಾದ ಶ್ರೀಕಾಂತ ರಾಠೋಡ, ಶಿವಕುಮಾರ್ ರಾಠೋಡ, ಐಶ್ವರ್ಯ ಗೊಬ್ಬುರ್, ಮಹಿಂದ್ರ ಮೌರ್ಯ, ವಿಜಯಕುಮಾರ್ ಜಾಧವ್, ಪ್ರೇಮಶೇಖರ್, ಪ್ರಕಾಶ್ ನಿಪ್ಪಾಣಿ, ವೀರಯ್ಯಾ ಪೂಜಾರಿ, ಸಂತೋಷ್ ನೈ– ಕೋಡ್, ಸೈಯದ್ ಪಾಶಾ, ಸದಾನಂದ, ಮಹೇಶ್, ಮಾಳಪ್ಪ, ಪ್ರಮುಖರಾದ ಅಶೋಕ ಸ್ವಾಮಿ, ಭಾಸ್ಕರ್, ಶಾಮರಾವ ಭುತ್ತಾಳೆ, ಪ್ರಶಾಂತ ಜವಳಿ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಕೃಷಿ ಸಾಲ ಮರುಪಾವತಿ ಚಿಂತೆಯಿಂದ ರೈತ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ಉಡಬಾಳ ಗ್ರಾಮದ ರೈತ ಕೃಷ್ಣಾರೆಡ್ಡಿ ಭೀಮರೆಡ್ಡಿ 36 ವರ್ಷ ಸಾಲಭಾದೆ ತಾಳಲಾರದೆ ಗಿಡಕ್ಕೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಮೇ 20ರಂದು ಜರುಗಿದೆ. ತಾಲೂಕಿನ ಉಡಬಾಳ ಗ್ರಾಮದ ರೈತ ಕೃಷ್ಣಾರೆಡ್ಡಿ ಭೀಮರೆಡ್ಡಿ 36 ವರ್ಷ ಇವರು ಚಿಟಗುಪ್ಪ ಪಟ್ಟಣದ ಕೆನರ ಬ್ಯಾಂಕಿನಿಂದ ಕೃಷಿ ಸಾಲ 2ಲಕ್ಷ 50ಸಾವಿರ ಸಾಲ ಪಡೆದುಕೊಂಡಿದ್ದಾರೆ. ಮುಂಗಾರು ಹಂಗಾಮಿನ ಬೆಳೆಗಳು ಕೈ ಕೊಟ್ಟಿದರಿಂದ ಸಾಲ ಮರುಪಾವತಿ ಮಾಡುವ ಚಿಂತೆಯಿಂದ ಸಾಲದ ಭಾದೆ ತಾಳಲಾರದೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ



ಎಂದು ಮೃತರ ಪತ್ನಿ ಭವಾನಿ ಚಿಟಗುಪ್ಪ ಪೊಲೀಸ್ ಠಾಣೆಗೆ ದೂರು ನೀಡಿ, ನನ್ನ ಪತಿ ಸಾಲಭಾದೆ ತಾಳಲಾರದೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಯಾರ ಮೇಲೇನು ಸಂಶಯ ಇಲ್ಲಾ ಎಂದು ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಚಿಟಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ, ತನಿಖೆ ಮುಂದುವರಿದಿದೆ.

# ವಲಯ ಅರಣ್ಯ ಕಚೇರಿ ಆರಂಭಕ್ಕೆ; ಅಸ್ಲಾಂಮಿಯಾ ಹರ್ಷ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕ ಕೇಂದ್ರದಲ್ಲಿ ವಿವಿಧ ಇಲಾಖೆಯ ಕಚೇರಿಗಳು ಆರಂಭಗೊಂಡಗೊಂಡಿವೆ. ಏಪ್ರಿಲ್ 1ರಿಂದ ಇಲ್ಲಿಯ ಪ್ರಿಯಾದರ್ಶನಿ ಕಾಲೋನಿಯಲ್ಲಿ ಪ್ರಾದೇಶಿಕ ವಲಯ ಅರಣ್ಯ ಕಚೇರಿ ಆರಂಭಗೊಂಡಿದ್ದಕ್ಕೆ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ, ಪರಿಸರವಾದಿ ಶೈಲೇಂದ್ರ ಕಾವಡಿ ಹರ್ಷ ವ್ಯಕ್ತ ಪಡಿಸಿ, ಅರಣ್ಯ ಸಚಿವರಿಗೆ ಧನ್ಯವಾದ ಸಲ್ಲಿಸಿದ್ದಾರೆ. ಸಾಮಾಜಿಕ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಚಿಟಗುಪ್ಪ ವಲಯ ಅರಣ್ಯ ಅಧಿಕಾರಿ ಶ್ರೀಕಾಂತ ರಾಠೋಡ, ವೀರಯ್ಯಾ ಪೂಜಾರಿ ಸಂತೋಷ್ ಸೇರಿದಂತೆ ಸಿಬ್ಬಂದಿ ವರ್ಗದವರಿಗೆ ಸನ್ಮಾನಿಸಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಪತ್ರಕರ್ತ ರಾಜಕುಮಾರ ಆರ್. ಹಡಪದ, ಹಸನ್, ಬಸಯ್ಯಾ ಡಿಗ್ರಿ ಉಪಸ್ಥಿತರಿದ್ದರು.

## ಯರಗೋಳು ಕಾಲೇಜಿನ ಪ್ರಾಚಾರ್ಯರಾಗಿ ಅಧಿಕಾರ ಸ್ವೀಕರಿಸಿದ; ಓಂಕಾರರೆಡ್ಡಿ ಸಲಗರ್



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ನಿರ್ಣಾ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಓಂಕಾರ ರೆಡ್ಡಿ ಸಲಗರ್ ಅವರು ಮುಂಬಡ್ತಿ ಹೊಂದಿ ಯಾದಗಿರಿ ಜಿಲ್ಲೆಯ ಗುರುಮಿಟ್ಕಲ ತಾಲೂಕಿನ ಯರಗೋಳು ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾಗಿ ಬುಧವಾರ ಯಾದಗಿರಿ ಜಿಲ್ಲೆಯ ಉಪ ನಿರ್ದೇಶಕರಾದ ರುದ್ರಗೌಡ ಮಾಲಿ ಪಾಟೀಲ್ ಅವರ ನೇತೃತ್ವದ ಅಧಿಕಾರ ವಹಿಸಿಕೊಂಡರು. ಜಿಲ್ಲಾ ಉಪ ನಿರ್ದೇಶಕರು ಮತ್ತು ಸಿಬ್ಬಂದಿ ವರ್ಗದವರು ಆತ್ಮೀಯವಾಗಿ ಸನ್ಮಾನಿಸಿ ಸ್ವಾಗತಿಸಿಕೊಂಡರು.

## ಮಟಕಾ ನಂಬರ್ ಬರೆದುಕೊಳ್ಳುತ್ತಿದ್ದ ವ್ಯಕ್ತಿ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.21–ನಗರದ ಕಣ್ಣಿಮಾರ್ಕೆಟ್ ಹತ್ತಿರವಿರುವ ಸಾರ್ವಜನಿಕ ಶೌಚಾಲಯದ ಹತ್ತಿರ ಮಟಕಾ ಚೀಟಿ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ಮೃತ್ಯುಂಜಯ, ಶ್ರೀಶೈಲ, ಯಲ್ಲಪ್ಪ, ಅಶೋಕ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ ಓರ್ವನನ್ನು ಬಂಧಿಸಿದ್ದಾರೆ.

ನಬಿ ಕಾಲೋನಿಯ ಖಾದ್ರಿ



ಚೌಕ್ ನಿವಾಸಿ ಶಿವಕುಮಾರ ತಂದೆ ನಾಗೇಂದ್ರ ಮೇತ್ರೆ (30) ಎಂಬಾತನನ್ನು ಬಂಧಿಸಿ 8,600 ರೂ.ನಗದು, ಮಟಕಾ ಚೀಟಿ ಮತ್ತು ಒಂದು ಬಾಲ್ ಪೆನ್ ಜಪ್ತಿ ಮಾಡಿದ್ದಾರೆ. ಅಶೋಕನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### 2025ನೇ ಸಾಲಿನ ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮ

## ಸರಕಾರಿ ಶಾಲೆಗಳ ಸೌಲಭ್ಯ ಬಳಸಿಕೊಳ್ಳಿ : ಗೂಡಾಳ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿ ಸರಕಾರ ವಿಶೇಷ ಸೌಲಭ್ಯಗಳನ್ನು ಒದಗಿಸಿಕೊಡುತ್ತಿದೆ. ಹೀಗಾಗಿ ವಿಶೇಷ ಸೌಲಭ್ಯಗಳ ಸದುಪಯೋಗಪಡೆದುಕೊಳ್ಳಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಹೇಳಿದರು.

ಪಟ್ಟಣದ ಸರಕಾರಿ ಬಾಲಕರ ಪ್ರೌಢ ಶಾಲೆಯ ಸಭಾಂಗಣದಲ್ಲಿ ಶಿಕ್ಷಣ ಇಲಾಖೆ, ಪ್ರಧಾನ ಮಂತ್ರಿ ಪೋಷಣ ಶಕ್ತಿ ನಿರ್ಮಾಣ ಯೋಜನೆ, ತಾಲೂಕ ಪಂಚಾಯತ ವತಿಯಿಂದ ಆಯೋಜಿಸಿದ್ದ ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಸರಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಸರಕಾರ ಮಧ್ಯಾಹ್ನ ಬಿಸಿಯೂಟ, ಕ್ಷಿರಭಾಗ್ಯ ಸೇರಿ ಉಚಿತ ಪುಸ್ತಕ ಹಾಗೂ ಶೂ ಹೀಗೆ ನಾನಾ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಆದ್ದರಿಂದ ಶಾಲಾ ದಾಖಲಾತಿ ಹೆಚ್ಚಳಕ್ಕೆ ಶಿಕ್ಷಕ ವೃಂದದವರು ಮತ್ತು ಶಾಲೆ ವಿದ್ಯಾರ್ಥಿಗಳು, ಪಾಲಕ, ಪೋಷಕರು ಸಹಕಾರ ನೀಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಹಾವೀರ ಜಮಖಂಡಿ, ಡಾ. ಗೋವಿಂದ ನಿಂಗರಾಜ ಅರಸು, ಪ್ರೇಮಸಿಂಗ್ ಜಾಧವ, ಶರದಕುಮಾರ ನಾರಾಯಣಪೇಟ್ಕರ್, ಶೇಖ್ ಮಹೇಬೂಬ್ ಪಟೇಲ್, ಮುರಗೇಂದ್ರ ಸಜ್ಜನಶಟ್ಟಿ, ವೀರಾಂತರೆಡ್ಡಿ ಜಂಪಾ, ಭೀಮಣ್ಣ ದೇವಣಿ ಸೇರಿ ಅನೇಕರಿದ್ದರು.

# ವಾಯುಭಾರ ಕುಸಿತದಿಂದ ನಿರಂತರ ಮಳೆ: ಮುಂಜಾಗ್ರತೆ ವಹಿಸಲು ಅಧಿಕಾರಿ, ಸಿಬ್ಬಂದಿಗೆ ಜಿಲ್ಲಾಧಿಕಾರಿಗಳ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 21– ಹವಾಮಾನ ಇಲಾಖೆ ವರದಿಯಂತೆ ವಾಯುಭಾರ ಕುಸಿತದಿಂದ ರಾಯಚೂರು ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿದೆ. ಇನ್ನು ನಾಲ್ಕು ದಿನ ಮಳೆ ಮುಂದುವರೆಯುವ ಸಾಧ್ಯತೆ ಇದ್ದು ಅಧಿಕಾರಿಗಳು ಮತ್ತು ಸಿಬ್ಬಂದಿ ಮುಂಜಾಗ್ರತೆ ವಹಿಸಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಮಳೆ ಸುರಿಯುವ ವೇಳೆ ಜಿಲ್ಲೆಯ ಯಾವುದೇ ಕಡೆಗಳಲ್ಲಿ, ಯಾವುದೇ ಸಂದರ್ಭದಲ್ಲಿ

ಭಾರಿ ಮಳೆಯಾಗಿ ಪ್ರವಾಹ ಬರಬಹುದಾಗಿದೆ. ಆದ್ದರಿಂದ ಈ ಕುರಿತು ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

ಜಿಲ್ಲಾ, ತಾಲೂಕು, ಹೋಬಳಿ ಹಾಗೂ ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಗಳು ಕೇಂದ್ರಸ್ಥಾನದಲ್ಲಿದ್ದು, ಪ್ರವಾಹ ಅಥವಾ ಭಾರಿ ಮಳೆಯಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು., ಭಾರಿ ಮಳೆಯಿಂದ ಉಂಟಾಗುವ ನೆರೆ ಪರಿಸ್ಥಿತಿಯನ್ನು ನಿಭಾಯಿಸಲು ನಗರ ಮತ್ತು ಗ್ರಾಮೀಣ ಪ್ರದೇಶದ ತಗ್ಗು ಪ್ರದೇಶಗಳಲ್ಲಿರುವ ಜನರನ್ನು ಗುರುತಿಸಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಬೇಕು. ಅವಶ್ಯಕವೆನಿಸಿದರೆ ಕಾಳಜಿ ಕೇಂದ್ರಗಳನ್ನು ಪ್ರಾರಂಭಿಸಬೇಕು.

ನದಿ, ಹಳ್ಳ, ಕೆರೆ ದಡದಲ್ಲಿ ಬಟ್ಟೆ ತೊಳೆಯುವುದು, ಈಜಾಡುವುದು, ದನ ಹಾಗೂ ಕರುಗಳನ್ನು ಮೆಯಿಸುವುದು ಹಾಗೂ ಅಪಾಯವಿರುವ ಸೇತುವೆಗಳಲ್ಲಿ ಸಂಚರಿಸುವುದು ಮತ್ತು ಇತ–ರೆ ಚಟುವಟಿಕೆ ನಡೆಸದಂತೆ ಕ್ರಮವಹಿಸಬೇಕು. ನದಿ, ಹಳ್ಳ,



ಕೆರೆ ದಡದಲ್ಲಿರುವ ಗುಡಿ, ಮಸಿದಿ ಅಥವಾ ಚರ್ಚಗಳಲ್ಲಿ ಪೂಜೆ ಸಲ್ಲಿಸುವವರನ್ನು ಮನ ಒಲಿಸಿ ನದಿ, ಹಳ್ಳ, ಕೆರೆ ದಡದಲ್ಲಿ ತೆರಳದಂತೆ ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು.

ನಿರಂತರ ಮಳೆಯಿಂದ ಅಪಾಯವಿರುವ ಮನೆ, ಗೋಡೆ, ಶಾಲೆಗಳು ಹಾಗೂ ಇತರೆ ಕಟ್ಟಡಗಳು ಕುಸಿಯುವ ಸಾಧ್ಯತೆ ಇರುವುದರಿಂದ ಸಾವು ನೋವುಗಳು ಸಂಭವಿಸುವ ಸಂದರ್ಭವಿರುತ್ತದೆ. ಆದ್ದರಿಂದ ಸಾರ್ವಜನಿಕರಿಗೆ ಸುರಕ್ಷತೆ–ಯ ಮುನ್ನೆಚ್ಚರಿಕೆಯ ಕ್ರಮ ತೆಗೆದುಕೊಳ್ಳವುದು ಅಥವಾ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಜಾಗೃತಿ ಮೂಡಿಸಬೇಕು.

ನದಿ ದಡದ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರು ಅಪಾಯವಿರುವ ನದಿ ಅಥವಾ ಹಳ್ಳಗಳಲ್ಲಿ ಈಜಾಡುವುದು ಮತ್ತು ಪೋಟೋ ಅಥವಾ ಸೆಲ್ಫಿಗಳನ್ನು ತೆಗೆಯದಂತೆ ಕ್ರಮವಹಿಸಬೇಕು. ಭಾರಿ ಮಳೆ ಅಥವಾ ಪ್ರವಾಹದಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಪ್ರತಿ ಗ್ರಾಮಗಳಲ್ಲಿ ಡಂಗೂರ ಸಾರುವುದು ಹಾಗೂ ಮೈಕ್ ಮೂಲಕ ಜಾಗೃತಿ ಮೂಡಿಸಬೇಕು.

ಭಾರಿ ಮಳೆ ಅಥವಾ ಪ್ರವಾಹದಿಂದ ಹಾನಿಯಾದ ಬಗ್ಗೆ ಪ್ರಾಥಮಿಕ ವರದಿಯನ್ನು ಪ್ರತಿ ದಿನ ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು. ಪ್ರತಿ ಗ್ರಾಮ ಪಂಚಾಯತ್ ವಿಪತ್ತು ನಿರ್ವಹಣಾ ಸಮಿತಿಗಳು ಪ್ರತಿ ಗ್ರಾಮಗಳಲ್ಲಿ ರಾಜ್ಯ, ಜಿಲ್ಲಾಡಳಿತ, ತಾಲೂಕಾಡಳಿತ ದಿಂದ ನೀಡುವ ಹವಾಮಾನದ ಮುನ್ನೆಚ್ಚರಿಕೆಯ ಕ್ರಮಗಳನ್ನು ತೆಗೆದುಕೊಳ್ಳಬೇಕು.

ಜಿಲ್ಲೆಯಲ್ಲಿ ಅತಿಯಾಗಿ ಮಳೆ ಸುರಿಯುವ ಸಂಭವವಿರುವುದರಿಂದ ಸಾರ್ವಜನಿಕರು ಹಾಗೂ ಪ್ರವಾಸಿಗರು ನದಿಗಳ ಅಥವಾ ತೋಡುಗಳ ಮತ್ತು ವಿದ್ಯುತ್ ಕಂಬ ಹಾಗೂ ತಂತಿ ಸಮೀಪ ಹೋಗದಂತೆ ಎಚ್ಚರಿಕೆ ವಹಿಸಬೇಕು.

ಪ್ರಕೃತಿ ವಿಕೋಪದಿಂದ ಯಾವುದೇ ರೀತಿಯ ಘಟನೆಗಳು ಸಂಭವಿಸಿದಲ್ಲಿ ಅಥವಾ ಸಂಭವಿಸಬಹುದಾದ ಸೂಚನೆ ಇದ್ದಲ್ಲಿ ಸಾರ್ವಜನಿಕರು ಕೂಡಲೇ ಸಂಬಂಧಪಟ್ಟ ಪಂಚಾಯತ್, ನಗರ ಸ್ಥಳೀಯ ಸಂಸ್ಥೆಗಳಿಗೆ ಮಾಹಿತಿ ನೀಡಬೇಕು. ಜಿಲ್ಲೆಯ ಜಿಲ್ಲಾ, ತಾಲೂಕು ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಗೆ ಪ್ರವಾಹ ಅಥವಾ ಭಾರಿ ಮಳೆಯಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಮುನ್ನೆಚ್ಚರಿಕೆಯನ್ನು ತೆಗೆದುಕೊಳ್ಳಲು ಸೂಚಿಸಲಾಗಿದ್ದು, ಈ ವಿಷಯದಲ್ಲಿ ನಿರ್ಲಕ್ಷ್ಯವಹಿಸುವಂತಹ ಅಧಿಕಾರಿ ಹಾಗೂ ಸಿಬ್ಬಂದಿಗಳ ಮೇಲೆ ವಿಪತ್ತು ನಿರ್ವಹಣಾ ಕಾಯ್ದೆ–2005ರಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಸಿಎಂ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ರಾಯಚೂರು ಮೇ.21 : ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಹೊಸದಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶ ಬಯಸುವ ಪಿಯುಸಿ ಮತ್ತು ಪಿಯುಸಿ ಸಮನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲು ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಇಲಾಖೆಯ ವೆಬ್‌ಸೈಟ್ ವಿಳಾಸ: https://shp.karnataka.gov.in ನಲ್ಲಿ ಜೂನ್ 20ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಪ್ರವರ್ಗ–1, ಎಸ್.ಸಿ & ಎಸ್.ಟಿ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು 2.5 ಲಕ್ಷ ರೂ. ಹಾಗೂ ಪ್ರವರ್ಗ–2ಎ, 2ಬಿ, 3ಎ, 3ಬಿ ವರ್ಗಗಳ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು 1 ಲಕ್ಷ ರೂಪಾಯಿಗಳ ಒಳಗಿರಬೇಕು.

ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ ವಿಳಾಸ: https://shp.karnataka.gov.in ನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd-helpline@gmail.com ಇ–ಮೇಲ್ ಮುಖಾಂತರ ಅಥವಾ ಜಿಲ್ಲಾ ಅಥವಾ ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಿ.ಜಿ.ಕುಲ್ಕರ್ಣಿ ಆಸ್ಪತ್ರೆ ಹತ್ತಿರ ಅನಿರೀಕ್ಷಿತ ಮನೆ, ಅಜಾದ್ ನಗರ ಕಾಲೋನಿ ರಾಯಚೂರು ಅಥವಾ ದೂರವಾಣಿ ಸಂ–ಖ್ಯೆ: 08532–221072ಗೆ ಸಂಪರ್ಕ ಮಾಡಬಹುದಾಗಿದೆ ಎಂದು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಾದ ಮಲ್ಲಿಕಾರ್ಜುನ ರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಚೆ ಜೀವ ವಿಮೆ ಮಾರಾಟ ಮಾಡಲು ಪ್ರತಿನಿಧಿಗಳ ನಿಯುಕ್ತಿಗಾಗಿ ನೇರ ಸಂದರ್ಶನ ಮೇ.29ಕ್ಕೆ

ಮಲ್ಲಮ್ಮನುಡಿವಾರ್ತೆಬೀದರ :ಮೇ.21: ಅಂಚೆಅಧೀಕ್ಷಕರು, ಬೀದರ ವಿಭಾಗಇವರುಬೀದರ ವಿಭಾಗದಲ್ಲಿಅಂಚೆಜೀವವಿಮೆ ಹಾಗೂ ಗ್ರಾಮೀಣ ಅಂಚೆ ಜೀವವಿಮೆ ಉತ್ಪನ್ನಗಳನ್ನು ಮಾರಾಟಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಮೇ.29 ರಂದು ಬೆಳಿಗ್ಗೆ 11 ಗಂಟೆಗೆಬೀದರಅಂಚೆಅಧೀಕ್ಷಕರ ಕಾರ್ಯಾಲಯದಲ್ಲಿ ನೇರ ಸಂದರ್ಶನಆಯೋಜಿಸಲಾಗಿದೆ ಎಂದು ಬೀದರ ವಿಭಾಗದ ಅಂಚೆ ಅಧೀಕ್ಷಕರುಪ್ರಕಟಣೆಯಲ್ಲಿತಿಳಿಸಿದ್ದಾರೆ.ಅರ್ಹತಾನಿಯಮಗಳು: ಅಭ್ಯರ್ಥಿಗಳು10 ನೇ ತರಗತಿ ಉತ್ತೀರ್ಣರಾಗಿದ್ದು ಕಡ್ಡಾಯವಾಗಿ ವಯಸ್ಸು 18ವರ್ಷಗಳಾಗಿರಬೇಕು.ನಿರುದ್ಯೋಗಿ ಹಾಗೂಸ್ವಯಂಉದ್ಯೋಗನಿರ ಯುವಕರು,ವಿಮಾಕಂಪನಿಗಳ ಮಾಜಿಏಜೆಂಟರು ಹಾಗೂ ಸಲಹೆಗಾರರು,ಮಾಜಿಸೈನಿಕರು, ಅಂಗನವಾಡಿಕಾರ್ಯಕರ್ತೆಯರು, ಮಹಿಳಾಮಂಡಳದಕಾರ್ಯಕರ್ತೆಯರು, ನಿವೃತ್ತ ಪ್ರಧಾನ ಮತ್ತುಗ್ರಾಮ ಪಂಚಾಯತಿಯ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸವಂಜಸವೆಂದುಕಂಡುಬಂದ ಯಾವುದೇ ಅಭ್ಯರ್ಥಿಗಳಿಗೆ ಆಯ್ಕೆಯಾದ ಪಕ್ಷದಲ್ಲಿಅವಕಾಶ ನೀಡಲಾಗುವದು.ಆಯ್ಕೆಯಾದ ಅಭ್ಯರ್ಥಿಗಳು ರೂ.5000/–ಗಳನ್ನುರಾಷ್ಟ್ರೀಯ ಉಳಿತಾಯ ಪತ್ರಅಥವಾ ಕಿಸಾನ ವಿಕಾಸ ಪತ್ರದರೂಪದಲ್ಲಿ ಭದ್ರತಾಠೇವಣಿಯನ್ನುಇಡಬೇಕಾಗುತ್ತದೆ. ಆಯ್ಕೆಯಾದ ನೇರ ಪ್ರತಿನಿಧಿಗಳಿಗೆ ಅವರು ಮಾಡಿದ ವ್ಯವಹಾರಕ್ಕೆತಕ್ಕಂತೆ ಸೂಕ್ತಕಮೀಷನ್‌ನೀಡಲಾಗುವದು. ನಿಗದಿತವೇತನವುಇರುವದಿಲ್ಲ. ಅಭ್ಯಥಿಗಳು ವೇರೆಯಾವುದೇ ವಿಮಾಕಂಪನಿ/ಸಂಸ್ಥೆ/ಸಂಘಗಳ ಏಜೆಂಟ ಆಗಿರಬಾರದು. ನುರಿತ ಸಂವಹನ ಕಲೆ,ಹಾಗೂ ವಿಮಾ ಮಾರಾಟಕ್ಷೇತ್ರದಲ್ಲಿಪೂರ್ವಾನುಭವ ಹೊಂದಿರುವವರಿಗೆಅದ್ಯತೆ ನೀಡಲಾಗುವದು.ಆಸಕ್ತ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆಸ್ವ–ವಿವರ, ಶೈಕ್ಷಣಿಕ ಪ್ರಮಾಣಪತ್ರದ ನಕಲುಗಳೊಂದಿಗೆ ಸದರಿ ದಿನಾಂಕದಂದುನಡೆಯಲಿರುವನೇರ ಸಂದರ್ಶನಕ್ಕೆಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಶಂಕರಯ್ಯಾ ಸ್ವಾಮಿಗಳ ತಪೋನುಷ್ಠಾನ ಮೇ.27 ರಿಂದ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.21: ತಾಲೂಕಿನ ಮಾವಿನಹಳ್ಳಿ ಮಠದ ಶ್ರೀ ಶಂಕರಯ್ಯಾಸ್ವಾಮಿಗಳು,ತಾಲೂಕಿನ ಖಾನಾಪೂರ ಹತ್ತಿರದ ಶ್ರೀಕ್ಷೇತ್ರ ಗಾಯಮುಖ ಗುಪ್ತಲಿಂಗೇಶ್ವರ ದೇವಸ್ಥಾನದಲ್ಲಿ ಇದೇ ಮೇ. 27 ರಿಂದ 2025 ರ ಸೆ. 24 ರ ವರೆಗೆ 121ದಿಗಳ ಕಾಲ ಶ್ರೀಶೈಲ್ಯ ಜಗದ್ಗುರು ಮತ್ತು ಶ್ರೀ ಕಾಶಿ ಜಗದ್ಗುರುಗಳ ಸತ್ಯ ಸಂಕಲ್ಪದಮೇರೆಗೆತಪೋನುಷ್ಠಾನ ಕೈಗೊಳ್ಳಲಿದ್ದಾರೆ ಎಂದು ಶ್ರೀ ಶಂಕರಯ್ಯಾ ಸ್ವಾಮಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶ್ರೀ ಶಂಕರಯ್ಯಾಸ್ವಾಮಿಗಳು ಮುಕ್ತಿ ಮಂದಿರ ಧರ್ಮಕ್ಷೇತ್ರದ ಪಂಚಾಚಾರ್ಯರಸಮಾವೇಶದಲ್ಲಿ ಜಗದ್ಗುರುಗಳ ಆಶೀರ್ವಾದ ಪಡೆದು,ಅನುಷ್ಠಾನಕೈಗೊಳ್ಳಲು ತೀರ್ಮಾನಿಸಿದ್ದಾರೆ. ಹೀಗಾಗಿ ಇವರಅನುಷ್ಠಾನನಿರ್ವಿಘ್ನವಾಗಿ ನಡೆಯಲೆಂದು ನಾಡಿನ ರೇವಗ್ಗಿ ರೇವಣಾಸಿದ್ದೇಶ್ವರ ದೇವಸ್ಥಾನ, ಗೋರವನಹಳ್ಳಿಮಹಾಲಕ್ಷ್ಮಿ ?? ದೇವಸ್ಥಾನ ಸೇರಿದಂತೆ ಹಲವು ದೇವಸ್ಥಾನಗಳಲ್ಲಿ ಪೂಜೆ ಸಲ್ಲಿಸಲಾಗುತ್ತಿದೆ. ಪೂಜ್ಯರ ಅನುಷ್ಠಾನ ಮುಕ್ತಾಯ ಸಮಾರಂಭಕ್ಕೆಪಂಚಜಗದ್ಗುರುಗಳು ಆಗಮಿಸುವವರಿದ್ದಾರೆ ಎಂದು ತಿಳಿಸಿದ್ದಾರೆ.

# ಅಧಿಕಾರಿಗಳ ಸಮರ್ಪಕ ಕಾರ್ಯನಿರ್ವಹಣೆಯೇ ಲೋಕಾಯುಕ್ತ ಕಾಯಿದೆ ಉದ್ದೇಶ



ಭಾಲ್ಕಿ:ಮೇ.21: ಎಲ್ಲಾ ಇಲಾಖೆಗಳಲ್ಲಿಯ ಅಧಿಕಾರಿಗಳು ಸಮರ್ಪಕವಾಗಿಕೆಲಸಮಾಡುವುದೇ ಲೋಕಾಯುಕ್ತ ಕಾಯಿದೆಯ ಮೂಲಉದ್ದೇಶವಾಗಿದೆಎಂದು ಕಲಬುರಗಿ ಲೋಕಾಯುಕ್ತ ಎಸ್.ಪಿ, ಬಿ.ಕೆ.ಉಮೇಶ ಹೇಳಿದರು.

ಪಟ್ಟಣದ ತಾ.ಪಂ. ಸಭಾಂಗಣದಲ್ಲಿ ಬುಧವಾರ ಲೋಕಾಯುಕ್ತ ಕಚೇರಿಯ ವತಿಯಿಂದ ಆಯೋಜಿಸಿದ್ದ ಸಾರ್ವಜನಿಕರ ಕುಂದು ಕೊರತೆ ಮತ್ತು ಅಹವಾಲು ಸ್ವೀಕಾರ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. 2018ರ ತಿದ್ದುಪಡಿ ಅನುಸಾರ ಲೋಕಾಯುಕ್ತಕಾಯಿದೆಯಲ್ಲಿ ಸರ್ಕಾರಿ ನೌಕರರೂ ಲೋಕಾಯುಕ್ತರಿಗೆ ದೂರು ಸಲ್ಲಿಸಲು ಅವಕಾಶವಿದೆ. ಅಧಿಕಾರಿಗು ಸಮರ್ಪಕವಾಗಿ ಕೆಲಸ ನಿರ್ವಹಿಸುವ ನಿಟ್ಟಿನಲ್ಲಿ ಲೋಕಾಯುಕ್ತ ಕಾಯಿದೆ ರೂಪಿಸಲಾಗಿದೆ. ಅಧಿಕಾರಿಗಳು ಸರ್ಕಾರದ ಗೈಡ್‌ಲೈನ್ಸ್ ಪ್ರಕಾರ ನ್ಯಾಯಯುತ ಕಾರ್ಯ ನಿರ್ವಹಿಸಬೇಕು. ಹೆಚ್ಚಿನ ದೂರುಗಳು ಬುರುವುದಕ್ಕೆ ಅವಕಾಶಮಾಡಿಕೊಡಬಾರದರು. ದೂರುಗಳಅರ್ಜಿಗಳುಆದಸ್ಟುಬೇಗ ವಿಲೆವಾರಿಯಾಗಬೇಕು. ಅಂ–ದಾಗ ಮಾತ್ರ ಭ್ರಷ್ಟಾಚಾರ ನಿಯಮದ ಪ್ರಕಾರ ಕಾನೂನಿನ ರೀತಿಯಲ್ಲಿ ಕಾರ್ಯನಿರ್ವಸಲು ಸಾಧ್ಯವಾಗುತ್ತದೆ. ಅಧಿಕಾರಿಗಳು ತಮ್ಮ ತಮ್ಮ ಕಛೇರಿಗಳಲ್ಲಿ ಲೋಕಾಯುಕ್ತ ಫಲಕಗಳನ್ನು ಅಳವಡಿಸಿ ಕೊಳ್ಳಬೇಕು ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬೀದರ ಲೋಕಾಯುಕ್ತ ಕಛೇರಿಯ ಡಿವಾಯ್‌ಎಸ್‌ಪಿ ಹಣಮಂಥರಾಯ,ಲೋಕಾಯುಕ್ತ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಛೇರಿಗಳಿಗೆ ಭೇಟಿನೀಡುವುದು, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಕಾನೂನು ರೀತಿ ಕ್ರಮ ಕೈಗೊಳ್ಳಲು ಲೋಕಾಯುಕ್ತ ಅಧಿಕಾರಿಗಳ ಮುಖ್ಯ ಕಾರ್ಯವಾಗಿದೆ. ಅಪೂರ್ಣ ಮಾಹಿತಿ ಇದ್ದರೆ,ಅರ್ಜಿಗಳನ್ನು ಪರಿಶೀಲಿಸಿ ಅರ್ಜಿಗಳನ್ನು ತಿರಸ್ಕರಿಸುವ ಅಧಿಕಾರವೂ ಲೋಕಾಯುಕ್ತರಿಗಿದೆ. ಭ್ರಷ್ಟಾಚಾರ ನಿರ್ಮೂಲನೆಯೇ ನಮ್ಮ ಮೂಲ ಉದ್ದೇಶವಾಗಿದೆ ಎಂದು ಹೇಳಿದರು. ಇದೇವೇಳೆ ಸಾರ್ವಜನಿಕರಿಂದ5ದೂರುಗಳು ಬಂದಿದ್ದು, ದೂರುಗಳ ಬಗ್ಗೆ ಸಮರ್ಪಕವಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ರೈತರಿಗೆ ಸಮರ್ಪಕವಾಗಿ ಬೀಜ ವಿತರಿಸಿ

ಕೃಷಿ ಅಧಿಕಾರಿಗಳು ರೈತರಿಗೆ ಸಮರ್ಪಕವಾಗಿ ಬೀಜ ವಿತರಿಸಬೇಕು ಎಂದು ತಿಳಿಸಿದ ಲೋಕಾಯುಕ್ತರಿಗೆ, ಕೃಷಿ ಅಧಿಕಾರಿ ಪಿ.ಎಮ್.ಮಲ್ಲಿಕಾರ್ಜುನ ಬೀಜವಿತರಣೆಯ ಸಂಪೂರ್ಣ ಮಾಹಿತಿ ನೀಡಿದರು. ಪ್ರಸ್ತುತ ಸಾಲಿನಲ್ಲಿ ಒಂದು ವಾರ ಮುಂಚಿತವಾಗಿ ಮುಂಗಾರು ಪ್ರಾರಂಭವಾಗಿದೆ. ಹೀಗಾಗಿ ಪ್ರತಿವರ್ಷ ಜೂನ್ ನಲ್ಲಿ ವಿತರಿಸುತ್ತಿದ್ದ ಬೀಜಗಳನ್ನು ಈ ವರ್ಷ ಮೇ 26 ರಿಂದಲೇ ವಿತರಿಸಲಾಗುತ್ತಿದೆ. ಸೋಯಾ, ತೊಗರಿ, ಹೆಸರು ಮತ್ತು ಉದ್ದು ಈ ಭಾಗದ ಪ್ರಮುಖ ಬೆಳಗಳಾಗಿವೆ. ಕಳೆದ ಸಾಲಿನಲ್ಲಿ ಸೋಯಾ ಬೀಜಕ್ಕೆ ಹೆಚ್ಚಿನ ಬೇಡಿಕೆ ಇತ್ತು. ಹೀಗಾಗಿ ಈ ವರ್ಷ ಸೋಯಾ ಬೀಜಕ್ಕೆ ಹೆಚ್ಚಿಗೆ ಬೇಡಿಕೆ ಸಲ್ಲಿಸಲಾಗಿದೆ. ನಮ್ಮ ತಾಲೂಕಿನಲ್ಲಿ ಬೀಜದ ಕೊರತೆ ಇಲ್ಲ. ಕಳೆದ ಸಾಲಿನಲ್ಲಿ 28 ಸಾವಿರ ಕ್ವಿಂಟಾಲ್ ಸೋಯಾ ಬೀಜ ಮಾರಾಟ ಮಾಡಲಾಗಿದೆ. 6 ಹೊಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳಿವೆ. ರೈತರಿಗೆ ಸಬ್ಸಿಡಿ ದರದಲ್ಲಿ ಬೀಜ ವಿತರಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಆರೋಗ್ಯ ಇಲಾಖೆಯ ಡಾ. ರವಿ ಕಲಶೆಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಸತೀಶ ಸಂಗಣ್ಣನವರು ತಮ್ಮ ಇಲಾಖೆಯ ಕಾರ್ಯವೈಖರಿಗಳ ಬಗ್ಗೆ ಮಾಹಿತಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಲೋಕಾಯುಕ್ತಕಛೇರಿ ಬೀದರಿನ ಸಂತೋಷ ರಾಠೋಡ, ಬಾಬಾ ಸಾಹೆಬ ಪಾಟೀಲ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ, ತಹಸೀಲದಾರ ಮಲ್ಲಿಕಾರ್ಜುನ ವಡ್ಡನಕೇರಿ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜೆ. ಹಳ್ಳದ್, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಚಂದ್ರಶೇಖರಬನ್ನಾಳೆ,ಗ್ರೇ??2 ತಹಸಿಲ್ದಾರ ಪಲ್ಲವಿ ಬೆಳಕೇರಿ, ಗೋಪಾಲಹಿಪ್ಪರಗಿ,ಎಆರ್‌ಟಿಓ ಮಹಮದ್ ಜಾಫರ್ ಸಾಧಿಕ್, ತೋಟಗಾರಿಕೆಅಧಿಕಾರಿಮಾರುತಿ ಜಾಬನೂರ,ಎನ್‌ಈಕೆಆರ್‌ಟಿಸಿ ವ್ಯವಸ್ಥಾಪಕ ಭದ್ರಪ್ಪಾ ಹುಡಗೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು. ತಾ.ಪಂ. ಇ.ಓ ಸೂರ್ಯಕಾಂತ ಬಿರಾದಾರ ಸ್ವಾಗತಿಸಿದರು. ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ ವಂದಿಸಿದರು.

# ಸರ್ಕಾರಿ ಐಟಿಐ ಜೇವರ್ಗಿಯಲ್ಲಿ ಉನ್ನತ ಮಟ್ಟದ ತರಬೇತಿ: ಡಾ.ರುಬಿನಾ ಪರ್ವಿನ



ಮಲ್ಲಮ್ಮ ನುಡಿ ವಾರ್ತೆ

ಜೇವರ್ಗಿ:ಮೇ.21: ಪಟ್ಟಣದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 'ಕೌಶಲ್ಯದ ಅರಿವು ಕಾರ್ಯಕ್ರಮ'ವನ್ನು ಕಳೆದ ದಿನಾಂಕ: 16–05–2025 ರಂದು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನುಉದ್ದೇಶಿಸಿ ಪ್ರಾಸ್ತಾವಿಕವಾಗಿಸ.ಕೈ.ತ.ಸಂಸ್ಥೆಯ ಪ್ರಾಚಾರ್ಯರಾದ ಡಾ. ರುಬಿನಾ ಪರ್ವಿನ್ ಅವರು ಮಾತನಾಡಿ ಇಲ್ಲಿಯವರೆಗೆ ಸಂಸ್ಥೆಯು ಬೆಳೆದುಕೊಂಡು ಬಂದ ಹಾದಿಯ ಕುರಿತು ಸಂಕ್ಷೇಪವಾಗಿ ಮಾತನಾಡಿದರು. ಅದೇರೀತಿಯಾಗಿ ಇತ್ತೀಚಿನ ದಿನಗಳಲ್ಲಿ ಕೌಶಲ್ಯ ಆಧಾರಿತ ಕೋರ್ಸ್‌ಗಳ ದೇಶದಲ್ಲಿ ಹಾಗೂ ವಿದೇಶದಲ್ಲಿಯೂ ಹೆಚ್ಚಿನ ಪ್ರಾಮುಖ್ಯತೆ ಹೊಂದಿದ್ದು ಈ ನಿಟ್ಟಿನಲ್ಲಿ ಸರ್ಕಾರಿ ಐಟಿಐ ಜೇವರ್ಗಿಯಲ್ಲಿ ನೀಡಲಾಗುವ ಉನ್ನತ ಮಟ್ಟದ ತರಬೇತಿಯ ಜೋತೆಗೆ ವಿವಿಧ ವ್ಯಕ್ತಿಗಳಲ್ಲಿ ಹಲವಾರು ಕೌಶಲ್ಯ ಕಲಿಕೆಯ ಜೊತೆಗೆ ತರಬೇತಿದಾರರಿಂದ ಸರ್ಕಾರದಿಂದ ವಿಶೇಷ ಸವಲತ್ತುಗಳನ್ನು ಹಾಗೂ ವಿದ್ಯಾರ್ಥಿಗಳ ವೇತನಗಳನ್ನು ನೀಡಲಾಗುತ್ತಿದೆ ಎಂದು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡಿದರು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ ಡಾ.ಮೀನಾಕ್ಷಿ ಬಾಳಿಯವರು ಕೂಡ ಕಾರ್ಯಕ್ರಮವನ್ನುಉದ್ದೇಶಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಶ್ರೀಮತಿ ಅನ್ನಪೂರ್ಣ ಆರ್,ಸಂಗೋಳಗಿ, ಶ್ರೀಮತಿ ಕೆ.ನೀಲಾ ಮತ್ತು ಶ್ರೀಮತಿ ಲಲಿತ್ರಾವಸ್ತ್ರದ ಎಲ್ಲಾ ಗಣ್ಯರು ಉಪಸ್ಥಿತಿಯಲ್ಲಿ ಸಸಿಗೆ ನೀರು ಹಾಕುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಲಾಯಿತು.

ಇದೆ ಸಂದರ್ಭದಲ್ಲಿ ಸ್ವ–ಸಹಾಯಗುಂಪಿನ ಮಹಿಳೆಯರು, ಕಾರ್ಮಿಕ ವರ್ಗದವರು, ಸಂಸ್ಥೆಯ ಸಿಬ್ಬಂದಿಗಳು, ತರಬೇತಿದಾರರ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆ ಯಲ್ಲಿ ಬಡ ಮಕ್ಕಳಿಗೆ ಉಚಿತ ಶಿಕ್ಷಣ: ಬಿಇಒ ರಂಗೇಶ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.21: ಪಟ್ಟಣದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ ಆರಂಭಗೊಂಡಿದೆ. ತಾಲೂಕಿನ ಬಡ ಮಕ್ಕಳಿಗೆ ಉಚಿತ ಶಿಕ್ಷಣ ನೀಡಲಾಗುತ್ತದೆ, ಪಾಲಕರು ತಮ್ಮ ಮಕ್ಕಳಿಗೆ ಸೇರಿಸಿ ಎಂದು ಔರಾದ ತಾಲೂಕು ಕ್ಷೇತ್ರಶಿಕ್ಷಣಾಧಿಕಾರಿ ಬಿ.ಜೆ. ರಂಗೇಶ ಮಾಡಿದರು.

ಪಟ್ಟಣದ ಗ್ರಾಮ ಪಂಚಾಯತ ಸಂಭಾಗಣದಲ್ಲಿ ಆಯೋಜಸಿದ್ದ ಕೆಪಿಎಸ್ ಶಾಲೆ ಕುರಿತು ವಿಶೇಷ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿ, ಕಮಲನಗರ ವಿವಿಧ ಸಂಘಟನೆ, ಶಿಕ್ಷಣ ಪ್ರೇಮಿ, ಸಾಮಾಜಿಕ ಹೋರಾಟಗಾರ, ಕನ್ನಡಪರ ಸಂಘಟನೆ ಕಾರ್ಯಕರ್ತರ ಮತ್ತು ಪತ್ರಕರ್ತರ ಸತತ ಹೋರಾಟದಿಂದ ಪಟ್ಟಣದಲ್ಲಿ ಕರ್ನಾಟಕ ಪಬ್ಲಿಕ ಸ್ಕೂಲ ಆರಂಭವಾಗಿದೆ ಎಂದು ಹೇಳಿದರು. ಕರ್ನಾಟಕ ಪಬ್ಲಿಕ್ ಸ್ಕೂಲನಲ್ಲಿ ಕಲಿಕಾ ಸ್ನೇಹ ವಾತಾವರಣದ ಜೊತೆಗೆ ಗುಣಮಟ್ಟದ ಶಿಕ್ಷಣ ನೀಡಲು ಪ್ರಥಮ ಆದ್ಯತೆ ನೀಡಲಾಗುತ್ತಿದೆ. ಆದ್ದರಿಂದ ಪಾಲಕರು ಕರ್ನಾಟಕ ಪಬ್ಲಿಕ್ ಶಾಲೆಗೆ ಮಕ್ಕಳನ್ನು ಕಳುಹಿಸುವ ಮೂಲಕ ಶಿಕ್ಷಣ ಇಲಾಖೆಯೊಂದಿಗೆ ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.

ಶಾಲೆ ಅಭಿವೃದ್ಧಿಗೆ ಹಣದ ಕೊರತೆ ಇರುವುದಿಲ್ಲ. ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಯೋಜನೆಯಡಿಯಲ್ಲಿ ಶಾಲಾ ಅಭಿವೃದ್ಧಿಗೆ ಬೇಕಾಗುವ ಸಾಮಗ್ರಿಗಳನ್ನು ಖರೀದಿ ಮಾಡಲು ಭರಪೂರ ಅನುದಾನ ಬರಲಿಯಿದೆ. ಇದರಲ್ಲಿ ಯಾವುದೇ ಸಂದೇಶ ಇಲ್ಲ ಎಂದು ಹೇಳಿದರು.

ಹೊಳಸಮುದ್ರ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಸಂಜೀವಕುಮಾರ ಡೋಂಗರೆ ಅವರಿಗೆ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರಭಾರಿ ಮುಖ್ಯ ಗುರುನ್ನಾಗಿನೇಮಕಮಾಡಲಾಗಿದೆ. ಶಾಲೆ ಕ್ರಿಯಾ ಯೋಜನೆ ಮಾಡಿ ಕ್ಷೇತ್ರಶಿಕ್ಷಣಾಧಿಕಾರಿ ಮತ್ತು ಡಿಡಿಪಿಐವರಿಗೆ ಕಳಿಸಿ ಎಂದು ತಿಳಿಸಿದರು.ಪ್ರಭಾರಿ ಮುಖ್ಯಗುರು ಸಂಜಿವಕುಮಾರ ಡೋಂಗರೆ ಅವರು ಪ್ರಾಸ್ತಾವಿಕ ಮಾತನಾಡಿದರು. ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ರಾಜಕುಮಾರ ತಂಬಾಕೆ ಅವರು ಮಾತನಾಡಿ, ಮುಂಬರುವ ದಿನಗಳಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ ಉದ್ಘಾಟನೆ ಕಾರ್ಯಕ್ರಮಕ್ಕೆ ಸಹಕಾರ ನೀಡಲಾಗುತ್ತಿದೆ ಎಂದು ಭರವಸೆ ನೀಡಿದರು.

ಕಮಲನಗರ ತಾಲೂಕು ಕಸಾಪ ಅಧ್ಯಕ್ಷ ಪ್ರಶಾಂತ ಮಠಪತಿ ಮಾನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ಗ್ರಾಮ ಪಂಚಾಯತ ಅಧ್ಯ–ಕ್ಷೆ ಸುಶಿಲಾಬಾಯಿ ಸಜ್ಜನ ಕಾರ್ಯಕ್ರಮ ಅಧ್ಯಕ್ಷತೆ ವಹಸಿದರು.ತಾಲೂಕು ಸಮನ್ವಯ ಅಧಿಕಾರಿ ಪ್ರಕಾಶ ರಾಠೋಡ, ಸೇವಾ ನಿವೃತ ಮುಖ್ಯ ಗುರು ಶಿವಕಾಂತ ಹಣಮಶೆಟ್ಟಿ,ಅಧ್ಯಕ್ಷ ಸೂರ್ಯಕಾಂತ ಬಿರಾದಾರ, ಅಧ್ಯಕ್ಷ ಬಸವರಾಜ ಪಾಟೀಲ್, ಕಾರ್ಯದರ್ಶಿ ರಾಜಕುಮಾರ ಬಿರಾದಾರ, ಮಹಾದೇವ ಮಡಿವಾಳ, ಮುಖ್ಯ ಗುರು ಮಹೇಮೂದ,ಗ್ರಾಪಂ ಸದಸ್ಯ ಬಾಲಾಜಿ ತೆಲಂಗ ಸೇರಿದಂತೆ ಗ್ರಾಮದ ಮುಖಂಡರು ಇದ್ದರು.ಬಿಆರ್‌ಪಿ ಅಧಿಕಾರಿ ಶಶಿಕಾಂತ ಬಿಡವೆ ಸ್ವಾಗತಿಸಿದರು.

# ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 21 : ಸಮಾಜ ಕಲ್ಯಾಣ ಇಲಾಖೆ ಅಧೀನದ ಔರಾದ್ ಹಾಗೂ ಕಮಲನಗರ ತಾಲ್ಲೂಕಿನ ವಸತಿ ಶಾಲೆ ಹಾಗೂ ವಸತಿ ನಿಲಯಗಳಲ್ಲಿ 2025–26ನೇ ಸಾಲಿಗೆ ಹೊಸದಾಗಿ ಪ್ರವೇಶಕ್ಕೆ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಔರಾದ್, ಕಮಲನಗರ, ದಾಬಕಾದ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕರ,ಔರಾದ್‌ನ ಬಾಲಕಿಯರ ವಸತಿ ನಿಲಯ, ಸಂತಪುರ ಹಾಗೂ ಔರಾದ್‌ನ ಡಾ. ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ಹಾಗೂ ಕಮಲನಗರದ ಬಾಲಕಿಯರ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಔರಾದ್ ತಾಲ್ಲೂಕು ಸಹಾಯಕ ನಿರ್ದೇಶಕ ಅನಿಲಕುಮಾರ ಮೇಲ್ದೊಡ್ಡಿ ತಿಳಿಸಿದ್ದಾರೆ.

5 ರಿಂದ 10ನೇ ತರಗತಿ ವರೆಗಿನ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ವಿದ್ಯಾರ್ಥಿಗಳು ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ, ಪಿಯುಸಿ, ಪದವಿ, ವೃತ್ತಿಪರ ಕೋರ್ಸಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು

ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ sw.kar.nic.in ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಹೇಳಿದ್ದಾರೆ.

ಆನ್‌ಲೈನ್‌ನಲ್ಲಿ ಮಾಹಿತಿ ಅಪಲೋಡ್ ಮಾಡಿದ ನಂತರ ಅರ್ಜಿಯ ಮುದ್ರಿತ ಪ್ರತಿ ಪಡೆದು, ತೇರ್ಗಡೆಯಾದ ತರಗತಿಯ ಅಂಕಪಟ್ಟಿ, ಜಾತಿ, ಆದಾಯ ಪ್ರಮಾಣ ಪತ್ರ, ಎಸ್‌ಎಸ್‌ಪಿ ವಿದ್ಯಾರ್ಥಿ ಐಡಿ, ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ ವಿದ್ಯಾರ್ಥಿ ಐಡಿ/ಸ್ಯಾಟ್ ಐಡಿ ಝೆರಾ–ಕ್ಸ್ ಪ್ರತಿಗಳೊಂದಿಗೆ ಪ್ರವೇಶ ಪಡೆಯ ಬಯಸುವ ವಸತಿ ನಿಲಯಗಳ ಮೇಲ್ವಿಚಾರಕರಿಗೆ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

# ಜಿಲ್ಲಾಧಿಕಾರಿಗಳಿಂದ "ಭಾರತ ಸುಗಮ್ಯ ಯಾತ್ರಾ"ಗೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ


ಕಲಬುರಗಿ: ಮೇ.21: ಜಿಲ್ಲಾಡಳಿತ,ಜಿಲ್ಲಾ ಪಂಚಾಯತ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯನಾಗರಿಕರ ಸಬಲೀಕರಣ ಇಲಾಖೆ ಕಲಬುರಗಿ ವತಿಯಿಂದ ಹಮ್ಮಿಕೊಂಡಿರುವ ವಿಶೇಷ ವಿಕಲಚೇತನರಿಗೆ ಜಿಲ್ಲೆಯ ಎಲ್ಲಾ ಸರ್ಕಾರಿ ಕಟ್ಟಡಗಳು, ಸರ್ಕಾರಿ ಕಛೇರಿಗಳು, ಸಾರ್ವಜನಿಕ ಕಟ್ಟಡಗಳು, ಮನರಂಜನೆ ಸ್ಥಳಗಳು, ಉದ್ಯಾನವನಗಳು, ಗ್ರಂಥಾಲಯಗಳು, ಮಾರುಕಟ್ಟೆ, ಪ್ರವಾಸಿ ತಾಣಗಳು ಮತ್ತು ಸಾರ್ವಜನಿಕ ಶೌಚಾಲಯಗಳು ವಿಕಲಚೇತನ ವ್ಯಕ್ತಿಗಳು ಸ್ನೇಹಮಯಿಯಾಗಿರುವ ವಿಕಲಚೇತನ ವ್ಯಕ್ತಿಗಳ ಸ್ನೇಹಮಯಿಯಾಗಿ ಪರಿವರ್ತಿಸುವ ಬಗ್ಗೆ "ಭಾರತ ಸುಗಮ್ಯ ಯಾತ್ರಾ"–2025 ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಬುಧವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಚಾಲನೆ ನೀಡಿದರು.

ಈ ಕಾರ್ಯಕ್ರಮವು ಕೇವಲ ಫೋಟೋ ತೆಗೆದುಕೊಳ್ಳುವುದಕ್ಕೆ ಸಿಮಿತವಾಗಿರದೆ ಎಲ್ಲಾ ತಾಲ್ಲೂಕ ವಿವಿದ್ದೋದ್ದೇಶ ಪುನರ್ವಸತಿ, ಗ್ರಾಮೀಣ ಪುನರ್ವಸತಿ, ಹಾಗೂ ನಗರ ಪುನರ್ವಸತಿ ಕಾರ್ಯಕರ್ತರು ತಮ್ಮ ತಾಲೂಕು ಹಾಗೂ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಕಟ್ಟಡಗಳು, ಸರ್ಕಾರಿ ಕಛೇರಿಗಳು, ಸಾರ್ವಜನಿಕ ಕಟ್ಟಡಗಳು, ಮನರಂಜನೆ ಸ್ಥಳಗಳು, ಉದ್ಯಾನವನಗಳು, ಗ್ರಂಥಾಲಯಗಳು, ಮಾರುಕಟ್ಟೆ, ಶಾಲೆಗಳಿಗೆ ಭೇಟಿ ನೀಡಿ ಈ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸುವಂತಹ ಕೆಲಸವನ್ನು ಮಾಡಬೇಕೆಂದು ಅವರು ಹೇಳಿದರು.

ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು ಮೊಬೈಲನ ಗೂಗಲ ಪ್ಲೇಸ್ಟೋರನಲ್ಲಿ ಜಇಖ ಖಿಔ ಂಅಅಇಖಖ ಆ್ಯಪ ಡೌನಲೋಡ ಮಾಡುವ ಮುಖಾಂತರ ವಿಕಲಚೇತನರ ಸ್ನೇಹಿ ಜೀವಿಗಳಿಗೆ ಸುಲಭ ವಾತಾವರಣ ಕಲ್ಪಿಸಲು ಸರಕಾರಿ ಕಟ್ಟಡಗಳಲ್ಲಿ, ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ, ಶಾಲಾ ಕಾಲೇಜುಗಳಲ್ಲಿ ಖಚಿಟಠಿ ಚಿಟಿಜ ಖಿಚುಟುಟಿರ, ಆ–ಚಿಛಟಜ ಈಡುಜಟಿಜಟಥಿ ಣರುಟಜಣ,ಘುಜಜಟಭಿಚಿಡಿನ್ನು ಅಳವಡಿಸುವ ಬಗ್ಗೆ ಜಾಗೃತಿಯನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸಾಧಿಕ್ ಹುಸೇನ್ ಖಾನ, ಇಲಾಖಾ ಯೋಜನಾ ಸಹಾಯಕ ಬಿ.ಯಲ್ಲಾಲಿಂಗ್, ಗ್ರಾಮೀಣ ಪುನರ್ ವಸತಿ ಯೋಜನೆ ಜಿಲ್ಲಾ ಸಂಯೋಜಕ ಸಂತೋಷ ಪಟ್ಟೇದಾರ, ಜಿಲ್ಲಾ ಅಂಗವಿಕಲ ಪುನರ್ ವಸತಿ ಕೇಂದ್ರ ನೋಡಲ್ ಅಧಿಕಾರಿ ಪ್ರಕಾಶ ದ್ಯಾಬೇರಿ, ಮಾಹಿತಿ ಸಲಹೆಗಾರರು ಪ್ರಕಾಶ ಜಾಧವ, ಮತ್ತು ಕಛೇರಿಯ ಸಿಬ್ಬಂದಿ ವರ್ಗ ಕಲಬುರಗಿ ಂಕಆ ಸಂಸ್ಥೆ, ವಿಕಲಚೇತನ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಸ್ವಯಂ ಸೇವಾ ಸಂಸ್ಥೆಗಳು ಭಾಗವಹಿಸಿದ್ದರು.

# ಕಲ್ಲೂರ ಗ್ರಾ. ಪಂ. ನೂತನ ಅಧ್ಯಕ್ಷರಾಗಿ ಶ್ರೀಮತಿ ಮಂಜುಳಾ ದೊಡ್ಡಿ ಆಯ್ಕೆ.




ಮಲ್ಲಮ್ಮ ನುಡಿ ವಾರ್ತೆ

ಹುಮ್ನಾಬಾದ.ಮೆ.21:ತಾಲ್ಲೂಕಿನ ಕಲ್ಲೂರ ಗ್ರಾಮ ಪಂಚಾಯತ ನೂತನ ಅಧ್ಯಕ್ಷರಾಗಿ ಶ್ರೀಮತಿ ಮಂಜುಳಾ ಗಂಡ ಕಲ್ಲಪ್ಪಾ ದೂಡ್ಡಿ ಕಠೂಳಿ ಅವರು ಆಯ್ಕೆ ಹಿನ್ನೆಲೆ ಬುಧವಾರ ಅಧಿಕಾರ ಪದಗ್ರಹಣ ಸ್ವೀಕರಿಸಿದರು . ನಂತರ ಮಾತನಾಡಿ ಪಂಚಾಯತ ಅಭಿವೃದ್ಧಿಗಾಗಿ ಸರ್ವ ಸದಸ್ಯರು ನನಗೆ ಸಲಹೆ ಸಹಕಾರ ನೀಡಿ ಎಂದು ಮನವಿ ಮಾಡಿಕೊಂಡರು. ಈ ಸಂದರ್ಭದಲ್ಲಿ ಪಿ.ಡಿ.ಓ.ಶ್ರೀ ಮಾಧವರಾವ ದೇಶಪಾಂಡೆ ಅವರು ನೂತನ ಅಧ್ಯಕ್ಷರಾದ ಶ್ರೀಮತಿ ಮಂಜುಳಾ ದೊಡ್ಡಿ ಅವರಿಗೆ ಶಾಲು ಹಾರು ಹಾಕಿ ಸನ್ಮಾನಿಸಿ. ಸ್ವಾಗತಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷರಾದ ಶ್ರೀಮತಿ ಮಲ್ಲಮ ಶಿವಶರಣಪ್ಪಾ. ಸದಸ್ಯರಗಳಾದ ಶಂಕರ.ಪಾರ್ವತಿ. ಶಿವರಾಜ.ಸಂಜೀವಕುಮಾರ ಕಟ್ಟಿಮನಿ.ಮಹನಂದಾ.ತೇಜಮ ಹಲಗಿ.ಅನೀಲಕುಮಾರ. ರೇವಣಸಿದ್ದಪ್ಪಾ.ವೀರಭದ್ರಪ್ಪಾ. ಅಂಮ್ರತ.ಪಾರಮ್ಮಾ.ಪ್ರೀಯಂಕಾ. ರಾಜಶ್ರೀ ಸೇರಿದಂತೆ ಸದಸ್ಯರು ಹಾಜರಿದ್ದರು.ಕಾರ್ಯದರ್ಶಿ ಚಂದ್ರಕಾಂತ ಧುಮ್ಮನಸೂರ ಸಿಬ್ಬಂದಿಗಳಾದ ಪ್ರಭುರಾವ ಸೀರ್ಗೆಕರ.ಹಾಗೂ ಯುವ ಮುಖಂಡರಾದ ಕಲ್ಲಪ್ಪ ದೊಡ್ಡಿ ಹಾಜರಿದ್ದರು.

# ಜೇವರ್ಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ' ಕೌಶಲ್ಯ ಅರಿವು ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.21-ಜೇವರ್ಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ"ಹಮ್ಮಿಕೊಳ್ಳಲಾದ ಕೌಶಲ್ಯದಅರಿವುಕಾರ್ಯಕ್ರಮ"ವನ್ನು ಜನವಾದಿ ಮಹಿಳಾ ಸಂಘಟನೆಯ ಅಧ್ಯಕ್ಷರು ಹಾಗೂ ಕಲಬುರಗಿ ವಿ.ಜಿ.ಮಹಿಳಾ ಮಹಾವಿದ್ಯಾಲಯದ ನಿವೃತ್ತ ಪ್ರೊಫೇಸರ್‌ರಾದ ಡಾ. ಮೀನಾಕ್ಷಿ ಬಾಳಿ ಅವರು ಇತ್ತೀಚೆಗೆ ಉದ್ಘಾಟಿಸಿದರು.

ನಂತರ ಅವರು ಮಾತನಾಡಿ, ಜೇವರ್ಗಿ ತಾಲೂಕಿನ ಸರ್ಕಾರಿ ಐ.ಟಿ.ಐ. ಸಂಸ್ಥೆಯಲ್ಲಿ ಎಲ್ಲಾ ಯಂತ್ರೋಪಕರಣಗಳ ಸೌಕರ್ಯಗಳು ಇದ್ದು, ವಿದ್ಯಾರ್ಥಿಗಳು ಇದರ ಸದುಪಯೋಗಪಡಿಸಿಕೊಳ್ಳಬೇಕು.ಈ ತರಬೇತಿ ಸಂಸ್ಥೆಯ ಪ್ರಾಚಾರ್ಯರು ವಿಶೇಷ ಕಾಳಜಿಯೊಂದಿಗೆ ಉತ್ತಮ ಶಿಕ್ಷಕರ ತಂಡವನ್ನು ಕಟ್ಟಿಕೊಂಡು ಸಂಸ್ಥೆಯ ಉನ್ನತ ದರ್ಜೆಗೆ ಕೊಂಡೊಯ್ಯುತ್ತಿದ್ದಾರೆ. ಈ ಸಂಸ್ಥೆಯಲ್ಲಿ ತರಬೇತಿ ಪಡೆದ ವಿದ್ಯಾರ್ಥಿಗಳು ಸರ್ಕಾರಿ/ಅರೆ-ಸರ್ಕಾರಿ/ಬೃಹತ್ ಉದ್ದಿಮೆಗಳಲ್ಲಿ ಹಾಗೂ ವಿದೇಶಗಳಲ್ಲಿಯೂ ಸಹ ಕಾರ್ಯನಿರ್ವಹಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಸ್ತಾವಿಕವಾಗಿ ಸಂಸ್ಥೆಯ ಪ್ರಾಚಾರ್ಯರಾದ ಡಾ. ರುಬಿನಾ ಪರ್ವಿನ್ ಅವರು ಮಾತನಾಡಿ, ಸಂಸ್ಥೆಯು ಬೆಳೆದು ಬಂದ ಹಾದಿ ಕುರಿತು ಸಂಕ್ಷಿಪ್ತವಾಗಿ ಹೇಳುತ್ತಾ, ಇತ್ತೀಚಿನ ದಿನಗಳಲ್ಲಿ ಕೌಶಲ್ಯಾಧಾರಿತ ಕೋರ್ಸುಗಳು ದೇಶ ಮತ್ತು ವಿದೇಶದಲ್ಲಿಯೂ ಹೆಚ್ಚಿನ ಪ್ರಾಮುಖ್ಯತೆ ಹೊಂದಿದ್ದು, ಆ ನಿಟ್ಟಿನಲ್ಲಿ ಜೇವರ್ಗಿ ಸರ್ಕಾರಿ ಐ.ಟಿ.ಐ.ಸಂಸ್ಥೆಯಲ್ಲಿ ನೀಡಲಾಗುವ ಉನ್ನತ ಮಟ್ಟದ ತರಬೇತಿಯ ಜೊತೆಗೆ ವಿವಿಧ ವೃತ್ತಿಗಳಲ್ಲಿ ಹಲವಾರು ಕೌಶಲ್ಯಕಲಿಕೆಯ ಜೊತೆಗೆ ಪ.ಜಾ./ಪ.ಪಂ. ತರಬೇತಿದಾರರಿಗೆ ಸರ್ಕಾರದಿಂದ ವಿಶೇಷ ಸವಲತ್ತುಗಳಾದ ಟೂಲ್ ಕಿಟ್, ಲ್ಯಾಪ್‌ಟಾಪ್, ಸ್ಟೇಷನರಿ ಕಿಟ್, ಸಮವಸ್ತ್ರ ಹಾಗೂ ವಿದ್ಯಾರ್ಥಿ ವೇತನಗಳನ್ನು ನೀಡಲಾಗುತ್ತಿದೆ. ಜೇವರ್ಗಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಸಿ.ಟಿ.ಎಸ್. ಯೋಜನೆಯಡಿ 05 ವಿವಿಧ ಕೋರ್ಸುಗಳನ್ನು ಹಾಗೂ ಸರ್ಕಾರದ ಉದ್ಯೋಗ ಯೋಜನೆಯಡಿಯಲ್ಲಿ ಟಾಟಾ ಕಂಪನಿಯವರ ಒಡಂಬಡಿಕೆಯೊಂದಿಗೆ ಹೊಸ 06 ಕೋರ್ಸುಗಳನ್ನು ಪ್ರಾರಂಭಿಸಿ ಇಂಡಸ್ಟ್ರಿ 4.0 ಮಾದರಿಯ ಉನ್ನತ ತಂತ್ರಜ್ಞಾನವನ್ನು ನೀಡಲಾಗುತ್ತಿದೆ. ಜೊತೆಗೆ ಸಂಸ್ಥೆಯಲ್ಲಿ ತರಬೇತಿಯನ್ನು ಪಡೆದ ವಿದ್ಯಾರ್ಥಿಗಳಿಗೆ ಕ್ಯಾಂಪಸ್ ಸಂದರ್ಶನದ ಮೂಲಕ ಶಿಶುಕ್ಷು ತರಬೇತಿ ಹಾಗೂ ಉದ್ಯೋಗ ಪಡೆಯಲು ನೆರವು ನೀಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಜನವಾದಿ ಮಹಿಳಾ ಸಂಘಟನೆಯ ಉಪಾಧ್ಯಕ್ಷೆ ಕೆ.ನೀಲಾ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಪುರಸ್ಕೃತ ಅನ್ನಪೂರ್ಣ ಆರ್. ಸಂಗೋಳಗಿ ಅವರು ಮಾತನಾಡಿದರು.

ಡೆಮಾಕ್ರೆಟಿಕ್ ಯುತ್ ಫೆಡರೇಷನ್ ಆಫ್ ಇಂಡಿಯಾದ ರಾಜ್ಯಾಧ್ಯಕ್ಷೆ ಲಲಿತಾ ವಸ್ತ್ರದ ಅವರು ಮಾತನಾಡಿ, ಯುವಕರು ತಮ್ಮ ಸಮಯವನ್ನು ಮೊಬೈಲ್‌ದಲ್ಲಿ ಸಾಮಾಜಿಕ ಜಾಲತಾಣದಲ್ಲಿ ಕಾಲಹರಣ ಮಾಡದೇ ಚೆನ್ನಾಗಿ ಅಭ್ಯಾಸ ಮಾಡಿ ತಮ್ಮ ಜೀವನ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸ್ವ-ಸಹಾಯ ಗುಂಪಿನ ಮಹಿಳೆಯರು, ಕಾರ್ಮಿಕ ವರ್ಗ, ಸಿಬ್ಬಂದಿಗಳು, ತರಬೇತಿದಾರರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಿರಿಯ ತರಬೇತಿ ಅಧಿಕಾರಿ ಶಿವಶರಣಪ್ಪ ಅವರು ಸ್ವಾಗತಿಸಿದರು. ಕಿರಿಯ ತರಬೇತಿ ಅಧಿಕಾರಿ ಸುಧಾಕರ ಎಸ್.ಚಿಕ್ಕಯ್ಯನವರ್‌ಮಠ ವಂದಿಸಿದರು. ಕಿರಿಯ ತರಬೇತಿ ಅಧಿಕಾರಿ ಬಸನಗೌಡ ಪಾಟೀಲ ಕಾರ್ಯಕ್ರಮ ನಿರೂಪಿಸಿದರು.

# ಸೇಡಂ: ಕಮ್ಯುನಿಟಿ ಮೊಬಿಲೈಜರ್ ಹುದ್ದೆಯ ನೇಮಕಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.21.-ಸೇಡಂ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0ರ ಅಡಿಯಲ್ಲಿ ಐ.ಇ.ಸಿ. ಚಟುವಟಿಕೆಗಳನ್ನು ಕೈಗೊಳ್ಳಲು ಸ್ವಸಹಾಯ ಗುಂಪು (ಓಗಐಒ ಖಊಊಉ) ಸದಸ್ಯರನ್ನು ಕಮ್ಯುನಿಟಿ ಮೊಬಿಲೈಜರ್ (ಅಂಟಟಟಣಟಿಣಥಿ ಒಂಭುಟುದಜಡಿ) ಹುದ್ದೆಗೆ ನೇಮಕಾತಿಗಾಗಿ ಆಸಕ್ತಿಯುಳ್ಳ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸೇಡಂ ಪುರಸಭೆಯ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಮೂರು ವರ್ಷಗಳವರೆಗೆ ಸೇಡಂ ಪುರಸಭೆ ವ್ಯಾಪ್ತಿಯ ಐ.ಇ.ಸಿ. ಚಟುವಟಿಕೆಗಳನ್ನು ಕೈಗೊಳ್ಳಲು ಆಸಕ್ತಿಯನ್ನು ಹೊಂದಿರುವ ನಲ್ಮ್-ಡೇ ಅಡಿಯಲ್ಲಿ ನೋಂದಾಯಿತ ಖಊಊಉ ಸದಸ್ಯರಿಂದ ಕಮ್ಯುನಿಟಿ ಮೊಬಿಲೈಜರ್ ಹುದ್ದೆಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಇದರ ಖಿಂಖ, ಆಯ್ಕೆ ಪ್ರಕ್ರಿಯೆ ಮತ್ತು ಗೌರವಧನಕ್ಕೆ ಸಂಬಂಧಿಸಿದ ಇತರೆ ವಿವರಗಳಿಗಾಗಿ ಸೇಡಂ ಪುರಸಭೆ ಮುಖ್ಯಾಧಿಕಾರಿಗಳನ್ನು ಸಂಪರ್ಕಿಸಬೇಕು.

ಆಸಕ್ತಿಯುಳ್ಳ ನಲ್ಮ್-ಡೇ ಅಡಿಯಲ್ಲಿ ನೋಂದಾಯಿಸಿಕೊಂಡ ಆಸಕ್ತ ಖಊಊಉ ಸದಸ್ಯರು ತಮ್ಮ ಇಚ್ಛಾನುಸಾರ ನಲ್ಮ್-ಡೇ ಹಿಂಬರಹದೊಂದಿಗೆ ಸೇಡಂ ಪುರಸಭೆ ಮುಖ್ಯಾಧಿಕಾರಿಗಳ ಕಾರ್ಯಾಲಯಕ್ಕೆ ಭೇಟಿ ನೀಡಿ ನಿಗದಿತ ನಮೂನೆಯನ್ನು ಪಡೆದು ಭರ್ತಿ ಮಾಡಿ ಅವಶ್ಯಕ ದಾಖಲೆಗಳಾದ ಗುರುತಿನ ಪುರಾವೆ, ನಲ್ಮ್-ಡೇ ಅಡಿ ಖಊಊಉ ನೋಂದಾಯಿಸಿಕೊಂಡಿರುವುದಕ್ಕೆ (ಎಂಪೆನಾಲ್) ದಾಖಲೆಗಳು. ವಿಳಾಸದ ಪುರಾವೆ, ಶೈಕ್ಷಣಿಕಾ ಅರ್ಹತೆ ದಾಖಲಾತಿಗಳು ಹಾಗೂ ಡೇ-ನಲ್ಮ್ ರಿಂದ ಹಿಂಬರಹದ ನಮೂನೆಗಳನ್ನು ಲಗತ್ತಿಸಿ 2025ರ ಮೇ 29 ರ ಸಂಜೆ 5 ಗಂಟೆಯೊಳಗಾಗಿ ಖುದ್ದಾಗಿ ಸೇಡಂ ಪುರಸಭೆ ಮುಖ್ಯಾಧಿಕಾರಿಗಳ ಕಾರ್ಯಾಲಯದಲ್ಲಿ ಅರ್ಜಿ ಸಲ್ಲಿಸಬೇಕು.

ಅಭ್ಯರ್ಥಿಗಳಿಗೆ ಈ ವಿಷಯದ ಕುರಿತು ಅವರಿಗೆ ಇರುವ ಆಸಕ್ತಿ, ಜ್ಞಾನ ಕೌಶಲ್ಯ, / ಮಾಹಿತಿಯ ಕುರಿತು ನಿರ್ಣಯಿಸಲು ಸಂದರ್ಶನವನ್ನು ಆಯೋಜಿಸಿ ಆಯ್ಕೆ ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ಕರ್ನಾಟಕ ಆಡಳಿತ ಸುಧಾರಣಾ ಆಯೋಗದ ಎಂಟನೇ ವರದಿ ಬಿಡುಗಡೆ ಕುರಿತು ಪತ್ರಿಕಾಗೋಷ್ಠಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮೇ21,-ಕರ್ನಾಟಕ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರಾದ ಆರ್.ವಿ.ದೇಶಪಾಂಡೆ ಅವರು ಕರ್ನಾಟಕ ಆಡಳಿತ ಸುಧಾರಣಾ ಆಯೋಗದ ಎಂಟನೇ ವರದಿ ಬಿಡುಗಡೆ ಬಗ್ಗೆ ಪತ್ರಿಕಾ ಗೋಷ್ಠಿಯನ್ನು 2025ನೇ ಮೇ 22 ರಂದು ಬೆಳಿಗ್ಗೆ 11.30 ಗಂಟೆಗೆ ವಿಕಾಸಸೌದಧ ಮೊದಲನೇ ಮಹಡಿಯ ಕೊಠಡಿ ಸಂಖ್ಯೆ 123 ರಲ್ಲಿ ನಡೆಸಲಿದ್ದಾರೆ ಎಂದು ಆಯೋಗದ ಅಧ್ಯಕ್ಷರ ವಿಶೇಷ ಕಾರ್ಯದರ್ಶಿ ರಮೇಶ್ ದೇಸಾಯಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರ್ಥಿಕ ಭದ್ರತೆಗೆ ಜೀವ ವಿಮೆ ಮಾಡಿಸಿ: ರಾಘವೇಂದ್ರ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್:ಮೇ.21: ಪ್ರತಿಯೊಬ್ಬರು ಆರೋಗ್ಯದ ರಕ್ಷಣೆ ಮತ್ತು ಆರ್ಥಿಕ ಭದ್ರತೆಗೆ ಜೀವ ವಿಮೆಯನ್ನು ಮಾಡಿಸಬೇಕು ಎಂದು ಗುರುಮಠಕಲ್ ತಾಲೂಕು ಸಂಯೋಜಕ ರಾಘವೇಂದ್ರ ಹೇಳಿದರು.

ಗುರುಮಠಕಲ್ ತಾಲೂಕಿನ ಯಲೇರಿ ಗ್ರಾಮ ಪಂಚಾಯಿತಿಯಲ್ಲಿ ಹಾಗೂ ಕಂದಕೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಚಿಂತನಹಳ್ಳಿ ಗ್ರಾಮದಲ್ಲಿ ದುಡಿಯೋಣ ಬಾ ಅಭಿಯಾನ ಉದ್ದೇಶ ಅವರು ಮಾತನಾಡಿದರು. ಆಕಸ್ಮಿಕವಾಗಿ ಅಪಘಾತ ಸಂಭವಿಸಿದಾಗ ಕೈಕಾಲು ಮುರಿತಕ್ಕೆ ಒಳಗಾದರೆ ಚಿಕಿತ್ಸೆ ಪಡೆದುಕೊಳ್ಳಲು ಹಣಕಾಸಿನ ನೆರವು ಸಿಗುತ್ತದೆ. ಸಾವು ಸಂಭವಿಸಿದರೆ ನಿಮ್ಮ ಕುಟುಂಬಕ್ಕೆ ಹಣಕಾಸಿನ ನೆರವನ್ನು ಜೀವ ವಿಮೆಗಳು ಒದಗಿಸುತ್ತವೆ ಎಂದು ತಿಳಿಸಿದರು. ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ ಕಿಎಎಃಜ ವಿಮಾ ವಿವರ:

ವರ್ಷಕ್ಕೆ 436 ರೂಪಾಯಿ ವಿಮಾ ಮೊತ್ತ. 18-50 ವರ್ಷದವರು ಈ ವಿಮೆ ಮಾಡಿಸಬಹುದು.

ಆಕಸ್ಮಿಕ ಸಾವಿನ ಸಂದರ್ಭದಲ್ಲಿ 2 ಲಕ್ಷ ರೂಪಾಯಿ ಕುಟುಂಬಕ್ಕೆ ನೀಡಲಾಗುತ್ತದೆ ಎಂದರು.ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆ ಕಿಖಃಜ: ವಿಮಾ ಮೊತ್ತ ವರ್ಷಕ್ಕೆ 20 ರೂಪಾಯಿ.

18 ರಿಂದ 70 ವರ್ಷದವರು ಈ ವಿಮೆಗೆ ಅರ್ಹರು.

ಅಪಘಾತ ಸಾವಿನಲ್ಲಿ 2 ಲಕ್ಷ ರೂಪಾಯಿ.

ಅಪಘಾತದಿಂದ ಅಂಗವೈಕಲ್ಯ ಉಂಟಾದಲ್ಲಿ 1 ಲಕ್ಷ ರೂಪಾಯಿ ವಿಮಾ ಪರಿಹಾರ ನೀಡಲಾಗುತ್ತದೆ.

ಆಧಾರ ಕಾರ್ಡ್, ಬ್ಯಾಂಕ್ ಖಾತೆಯ ಪ್ರತಿ ಮತ್ತು ನಾಮನಿರ್ದೇಶಿತರ (ನಾಮಿನಿ) ಆಧಾರ ಕಾರ್ಡ್, ಪಾಸ್ ಪೋರ್ಟ್ ಸೈಜ್ ಫೋ-ಟೋ, ಇವು ವಿಮೆಗೆ ಅಗತ್ಯ ದಾಖಲೆಗಳಾಗಿವೆ ಎಂದು ವಿವರಿಸಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಮೇ 1 ರಿಂದ 31 ರ ವರೆಗೆ ಒಂದು ತಿಂಗಳು ದುಡಿಯೋಣ ಬಾ ಅಭಿಯಾನ ಹಮ್ಮಿಕೊಂಡಿದ್ದು, ಮಹಾನಗರಗಳಿಗೆ ವಲಸೆ ಹೋಗುವುದನ್ನು ನಿಲ್ಲಿಸಿ ನಿಮ್ಮ ಊರಲ್ಲಿ ಕೆಲಸ ಮಾಡಿ, ನಿಮ್ಮ ಮನೆಯ ನೆರೆಹೊರೆಯವರಿಗೆ ಕೆಲಸಕ್ಕೆ ಕರೆದುಕೊಂಡು ಬನ್ನಿ. ಜಾಬ್ ಕಾರ್ಡ್ ಇಲ್ಲದವರು ಜಾಬ್ ಕಾರ್ಡ್ ಮಾಡಿಸಿ ಅಂಗವಿಕಲರು ಕೂಡ ಕೆಲಸಕ್ಕೆ ಕರೆದುಕೊಂಡು ಬರುವಂತೆ ತಿಳಿಸಲಾಯಿತು. ಅರ್ಜಿ ಸಂಖ್ಯೆ 6 ರಲ್ಲಿ ಕೆಲಸಕ್ಕಾಗಿ ಕೂಲಿ ಬೇಡಿಕೆ ಸಲ್ಲಿಸಿರಿ. ಕೂಲಿ ಸಲ್ಲಿಸಿದ 15 ದಿನಗಳ ಒಳಗೆ ಕೆಲಸ ಕೊಡದಿದ್ದರೆ ನಿರುದ್ಯೋಗ ಭತ್ಯೆ ಕೊಡಲಾಗುತ್ತದೆ. ಗಂಡು ಹೆಣ್ಣಿಗೂ ಸಮಾನ ಕೂಲಿದರ 370 ರೂಪಾಯಿಗಳು, ಎಲ್ಲರೂ ಪ್ರತಿನಿತ್ಯ ಕೆಲಸಕ್ಕೆ ಬನ್ನಿ ಎಂದು ವಿನಂತಿಸಲಾಯಿತು. ಈ ಸಂದರ್ಭದಲ್ಲಿ ಕಂದಕೂರ ಗ್ರಾಮ ಪಂಚಾಯಿತಿಯ ಪಿಡಿಓ ರಾಧಿಕಾ, ಡಿಇಓ ಶಂಕರ್ ಕೊತ್ವಾಲ್, ಸಿಎಚ್ ಓ ಸಂತೋಷ್, ಯಲ್ಲೇರಿ ಗ್ರಾಮ ಪಂಚಾಯತಿಯ ಪಿಡಿಓ ಶೋಭಾ ಪಾಟೀಲ್, ಕರ ವಸೂಲಿಗಾರ ಅಯ್ಯಣ್ಣ, ಸಿಎಚ್ ಓ ಜೋಸ್ಲಿನ್ ಜೂಲಿ, ಎಎನ್ ಎಮ್ ವಿಜಯಲಕ್ಷ್ಮಿ, ತಾಂತ್ರಿಕ ಸಹಾಯಕ ವಿಜಯ್ ಪತ್ತಾರ್ ಬಿಎಫ್ಟಿ ಬಸಲಿಂಗಪ್ಪ, ಮೇಟಿಗಳು ಸೇರಿದಂತೆ ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಗ್ರಾಮಸ್ಥರು, ಕೂಲಿಕಾರರು ಇದ್ದರು.

ಭಯೋತ್ಪಾದನಾ ವಿರೋಧಿ ದಿನದ ಪ್ರಯುಕ್ತ

# ಕೇಂದ್ರ ಕಾರಾಗೃಹದಲ್ಲಿ ಪ್ರಮಾಣ ವಚನ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.21.-ಭಯೋತ್ಪಾದನಾ ದಿನದ ಪ್ರಯುಕ್ತ ಸರ್ಕಾರ ಹಾಗೂ ಪ್ರಧಾನ ಕಛೇರಿಯ ಆದೇಶದಂತೆ ಕಲಬುರಗಿ ಕೇಂದ್ರ ಕಾರಾಗೃಹದ ಒಳಾವರಣದಲ್ಲಿ ಸಂಸ್ಥೆಯ ಮುಖ್ಯಸ್ಥರಾದ ಡಾ॥ ಅನಿತಾ ಆರ್. ಅವರು ಬುಧವಾರ ಕಾರಾಗೃಹದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ಭಯೋತ್ಪಾದನಾ ವಿರೋಧಿ ದಿನದ ಪ್ರಮಾಣ ವಚನವನ್ನು ಬೋಧಿಸಿದರು.

ಈ ಸಂದರ್ಭದಲ್ಲಿ ಕಚೇರಿ ಸಹಾಯಕ ಅಧೀಕ್ಷಕರಾದ ಚನ್ನಪ್ಪ, ಸಂಸ್ಥೆಯ ವೈದ್ಯಾಧಿಕಾರಿಗಳಾದ ಡಾ॥ ರವೀಂದ್ರ ಬನ್ನೇರ್, ಜೈಲರ್‌ಗಳಾದ ಸಾಗರ ಪಾಟೀಲ್, ಶ್ರೀಮಂತಗೌಡ ಪಾಟೀಲ್ ಹಾಗೂ ಕಛೇರಿ ಅಧೀಕ್ಷಕರಾದ ಗುರುಶೇಶ್ವರ ಶಾಸ್ತ್ರಿ, ಸಂಸ್ಥೆಯ ಶಿಕ್ಷಕರಾದ ನಾಗರಾಜ ಮುಲಗೆ ಹಾಗೂ ಸಂಸ್ಥೆಯ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಭಾಗವಹಿಸಿದರು.


# ಮೇ 23 ರಂದು ಗ್ರಾಹಕರ ಕುಂದುಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.21-ಕಲಬುರಗಿ ವೃತ್ತದ ವ್ಯಾಪ್ತಿಯಲ್ಲಿ ಬರುವ ಕಲಬುರಗಿ ಗ್ರಾಮೀಣ ವಿಭಾಗ-2 ರಡಿಯಲ್ಲಿ ಬರುವ ಕಾಳಗಿ ಉಪವಿಭಾಗಕ್ಕೆ ಸಂಬಂಧಿಸಿದಂತೆ ಇದೇ ಮೇ 23 ರಂದು ಬೆಳಿಗ್ಗೆ 9.30 ಗಂಟೆಗೆ ಕಾಳಗಿ ಜೆಸ್ಕಾಂ ಉಪ-ವಿಭಾಗದ ಕಚೇರಿಯಲ್ಲಿ ಗ್ರಾಹಕರ ಕುಂದುಕೊರತೆ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ.

ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತ ಅಧೀಕ್ಷಕ ಅಭಿಯಂತರರ ಅಧ್ಯಕ್ಷತೆಯಲ್ಲಿ ಈ ಸಭೆ ನಡೆಯಲಿದ್ದು, ಕಾಳಗಿ ಉಪವಿಭಾಗಕ್ಕೆ ಸಂಬಂಧಿಸಿದ ಎಲ್ಲಾ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ. .

# ಗ್ಯಾರಂಟಿ ಸರ್ಕಾರಕ್ಕೆ ಎರಡು ವರ್ಷದ ಸಂಭ್ರಮ: ಬಡವರ ಬಾಳಿಗೆ ಬೆಳಕಾದ "ಗೃಹ ಜ್ಯೋತಿ"




"ಉಚಿತ ಬೆಳಕು, ಸುಸ್ಥಿತ ಬದುಕು" ಎಂಬ ಘೋಷ್ಯವಾಕ್ಯದೊಂದಿಗೆ ರಾಜ್ಯದಲ್ಲಿ ಪ್ರತಿ ಮನೆಗೆ 200 ಯೂನಿಟ್ ವರೆಗೆ ಉಚಿತ ವಿದ್ಯುತ್ ನೀಡುವ "ಗೃಹ ಜ್ಯೋತಿ" ಯೋಜನೆ ಜಾರಿಗೆ ತಂದಿದ್ದು, ನಾಡಿನ ಬಡಜನರ ಪಾಲಿಗೆ ಇದು ಬೆಳಕಾಗಿ ಪರಿಣಮಿಸಿದೆ.

ಅಧುನಿಕ ಜೀವನದಲ್ಲಿ ವಿದ್ಯುತ್ ಇಲ್ಲದೆ ದಿನಚರಿ ಶುರುವಾಗುವುದಿಲ್ಲ. ದುಬಾರಿ ದುನಿಯಾದಲ್ಲಿ ಬೆಲೆ ಏರಿಕೆಯಿಂದ ಬಡ ಮತ್ತು ಮಧ್ಯಮ ವರ್ಗ ದೊಡ್ಡ ಆರ್ಥಿಕ ಪೆಟ್ಟು ತಿಂದಿದೆ. ಆರ್ಥಿಕ ಮುಗ್ಗಟ್ಟಿನಿಂದ ಕಷ್ಟದಲ್ಲಿರುವ ಬಡ ಜನರ ಕಣ್ಣೀರ ಒರೆಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು 200 ಯೂನಿಟ್ ವರೆಗೆ ಉಚಿತ ವಿದ್ಯುತ್ ನೀಡುವ "ಗೃಹ ಜ್ಯೋತಿ ಯೋಜನೆ" ಜಾರಿಗೆ ತಂದಿದ್ದು, ಸೂರ್ಯ ನಗರಿ ಕಲಬುರಗಿಯಲ್ಲಿಯೇ ಇದಕ್ಕೆ ಚಾಲನೆ ನೀಡಿದ್ದು ವಿಶೇಷ.

ಗೃಹ ಜ್ಯೋತಿ ಯೋಜನೆ ಪರಿಣಾಮ ವಿದ್ಯುತ್ ಕಾಣದ ಅನೇಕ ಕುಗ್ರಾಮ, ಜೋಪಡಿಗಳು ವಿದ್ಯುತ್ ಕಾಣುವಂತಾಗಿದೆ. ಬೆಳಕನ್ನೆ ಕಾಣದ ಮನೆಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಯಿತು. ಬಹುಸಂಖ್ಯಾತರಿಗೆ ಕಿತ್ತು ತಿನ್ನುವ ಬಡತನವೇ ಅವರ ಬಾಳಿಗೆ ಕತ್ತಲಾಗಿದ್ದು, ಇದನ್ನು ಹೋಗಲಾಡಿಸಿ ಅವರನ್ನು ಆರ್ಥಿಕ ಸಶಕ್ತರನ್ನಾಗಿ ಮಾಡಬೇಕೆಂಬ ನಿಟ್ಟಿನಲ್ಲಿ ಜಾರಿಗೊಳಿಸಿದ "ಗೃಹ ಜ್ಯೋತಿ" ಸೇರಿದಂತೆ ಪಂಚ ಗ್ಯಾರಂಟಿ ಯೋಜನೆಗಳು ಜನರ ಸುಸ್ಥಿರ ಬದುಕಿಗೆ ಕಾರಣವಾಗಿದಲ್ಲದೆ ಅವರಲ್ಲಿ ಭರವಸೆಯ ಬೆಳಕಾಗಿ ಪ್ರಜ್ವಲಿಸುತ್ತಿವೆ.

5.42 ಲಕ್ಷ ಕುಟುಂಬಕ್ಕೆ ಉಚಿತ ಬೆಳಕು: ಗೃಹಜ್ಯೋತಿ ಯೋಜನೆಯಡಿ ಕಲಬುರಗಿ ಜಿಲ್ಲೆಯಲ್ಲಿ ಕಳೆದ ಎರಡು ವರ್ಷದ ಅವಧಿಯಲ್ಲಿ ಏಪ್ರಿಲ್-2025 ಮಾಸಾಂತ್ಯಕ್ಕೆ 5,42,950 ಕುಟುಂಬಗಳು 200 ಯೂನಿಟ್ ವರೆಗೆ ಉಚಿತ ವಿದ್ಯುತ್ ಲಾಭ ಪಡೆದಿದ್ದು, ಇದಕ್ಕಾಗಿ ಸರ್ಕಾರ 507.98 ಕೋಟಿ ರೂ. ಹಣ ಜೆಸ್ಕಾಂಗೆ ಪಾವತಿಸಿದೆ. ಅಫಜಲಪೂರ ತಾಲೂಕಿನಲ್ಲಿ 42,043, ಆಳಂದ-56,836, ಕಮಲಾಪೂರ-23,781, ಕಲಬುರಗಿ-2,01,661, ಕಾಳಗಿ-17,593, ಚಿಂಚೋಳಿ-43,682, ಚಿತ್ತಾಪುರ-23,191, ಜೇವರ್ಗಿ-35,149, ಯಡ್ರಾಮಿ-18,959, ಶಹಾಬಾದ-36,052 ಹಾಗೂ ಸೇಡಂ ತಾಲೂಕಿನಲ್ಲಿ 44,003 ಗ್ರಾಹಕರು ನೊಂದಾಯಿಸಿಕೊಂಡು ಯೋಜನೆಯ ಲಾಭ ಪಡೆ-ಯುತ್ತಿದ್ದಾರೆ.

ಕರೆಂಟ್ ಫ್ರೀ, ಹಣ ಉಳಿತಾಯ: ರಾಜ್ಯ ಸರ್ಕಾರ 200 ಯೂನಿಟ್ ವರೆಗೆ ಉಚಿತ ವಿದ್ಯುತ್ ಯೋಜನೆಯ ಲಾಭ ಪಡೆದಿರುವ ಆಳಂದ ತಾಲೂಕಿನ ಬೋಧನ ಗ್ರಾಮದ ಮಲ್ಲಿಕಾರ್ಜುನ ಕಾಂದೆ ಅವರು ಈ ಯೋಜನೆಯಡಿ ಉಚಿತ ವಿದ್ಯುತ್‌ನಿಂದ ಮಾಸಿಕ 1,100 ರೂ. ತಮಗೆ ಉಳಿತಾಯವಾಗುತ್ತಿದೆ. ಉಳಿತಾಯದ ಈ ಹಣ ಮನೆಯ ಇತರೆ ಖರ್ಚಿಗೆ ಬಳಸುತ್ತಿರುವೆ ಎಂದು ಸಂತಸದಿಂದ ನುಡಿಯುತ್ತಾರೆ.

2-3 ಸಾವಿರ ರೂ. ಉಳಿತಾಯ: ಗೃಹ ಜ್ಯೋತಿ ಯೋಜನೆಯ ಪರಿಣಾಮ ತಮ್ಮ ಕುಟುಂಬಕ್ಕೆ ವಾರ್ಷಿಕ 2-3 ಸಾವಿರ ರೂ. ಉಳಿತಾಯವಾಗುತ್ತಿದೆ. ಈ ಹಣವನ್ನು ತರಕಾರಿ, ಆಹಾರ ಪದಾರ್ಥಗಳ ಖರೀದಿಗೆ, ಮಕ್ಕಳ ವಿದ್ಯಾಭ್ಯಾಸಕ್ಕೆ ಬಳಸಿಕೊಳ್ಳಲಾಗುತ್ತಿದೆ. ಸರ್ಕಾರದ ಉತ್ತಮ ಯೋಜನೆ ಇದಾಗಿದ್ದು, ಬಡ ಕುಟುಂಬಗಳಿಗೆ ಆರ್ಥಿಕವಾಗಿ ಸಬಲರಾಗಲು ಕಾರಣವಾಗಿದೆ ಎನ್ನುತ್ತಾರೆ ಜೇವರ್ಗಿ ತಾಲೂಕಿನ ಕಲ್ಲಹಂಗರಗಾ ಗ್ರಾಮದ ಸುನೀಲ ಗೋಳಾ.

**-ರವಿ ಮಿರಸ್ಕರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕಲಬುರಗಿ**

# ಆರೋಗ್ಯ ತಪಾಸಣೆ ಮಾಡಿಕೊಳ್ಳುವುದ ರಿಂದ ಮುಂದೆ ಬರುವಂತಹ ರೋಗಗಳನ್ನು ತಪ್ಪಿಸಲು ಸಾಧ್ಯ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಆರೋಗ್ಯ ತಪಾಸಣೆ ಮಾಡಿಕೊಳ್ಳುವುದ ರಿಂದ ಮುಂದೆ ಬರುವಂತಹ ರೋಗಗಳನ್ನು ತಪ್ಪಿಸಲು ಸಾಧ್ಯವಾಗುತ್ತದೆ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಮೇಶ ಸುಲ್ಫಿ ಹೇಳಿದರು.

ತಾಲ್ಲೂಕಿನ ಕಿಟ್ಟಾ ಗ್ರಾಮ ಪಂಚಾಯತ್ ವ್ಯಾಪ್ತಿಯ ಗೋಕುಳ ಗ್ರಾಮದಲ್ಲಿ ದುಡಿಯೋಣ ಬಾ, ಕಾಯಕ ಮಾಸಾಚರಣೆ ಹಾಗೂ ನರೇಗಾ ಕೂಲಿ ಕಾರ್ಮಿಕರಿಗೆ ಹಮ್ಮಿಕೊಂಡ ಆರೋಗ್ಯ ತಪಾಸಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ನಮ್ಮ ಬದಲಾದ ಜೀವನ ಶೈಲಿಯಿಂದ ನಾವು ಸಾಕಷ್ಟು ಮುನ್ನೆಚ್ಚರಿಕೆ ವಹಿಸಿಕೊಳ್ಳಬೇಕಾಗಿದೆ. ಆದ್ದರಿಂದ ಪ್ರತಿಯೊಬ್ಬರು ಆರೋಗ್ಯ ತಪಾಸಣೆ ಮಾಡಿಕೊಳ್ಳುವ ನಾವು ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಡಾ. ಆನಂದ ಅವರು ಮಾತನಾಡಿ, ಬಿಪಿ ಹಾಗೂ ಶುಗರ್ ಕಡ್ಡಾಯವಾಗಿ ಚಿಕಿತ್ಸೆ ಮಾಡಿಕೊಳ್ಳಬೇಕು ಮತ್ತು ನಮ್ಮ ದೇಹದಲ್ಲಿ ರಕ್ತ ಚನ್ನಾಗಿ ಸಂಚಲನ ವಾಗಬೇಕಾದರೆ ಬೆಲ್ಲ ಹಾಗೂ ಶೆಂಗಾ ತಿನ್ನಬೇಕು ಜೊತೆಗೆ ಕ್ಯಾಲ್ಸಿಯಂ ಕಡಿಮೆ ಆಗುವುದರಿಂದ ನಾನಾ ರೋಗಕ್ಕೆ ತುತ್ತಾಗಬಹುದು. ಆದ್ದರಿಂದ ಮಾತ್ರಗಳನ್ನು ಸೇವನೆ ಮಾಡಬೇಕು ಎಂದರು. ಇತ್ತಿಚಿನ ದಿನಗಳಲ್ಲಿ ಕ್ಯಾನ್ಸ್ ರೋಗ ಹೆಚ್ಚಾಗಿ ಕಾಣುತ್ತಿವೆ. ಹೀಗಾಗಿ ಕಾರ್ಮಿಕರು ಚಿಕಿತ್ಸೆ ಮಾಡಿಕೊಳ್ಳಲು ನಿವೇಲ್ಲರು ಸಿದ್ದರಾಗಿದ್ದರೆ ಉಚಿತ ಕ್ಯಾನ್ಸರ್ ತಪಾಸಣೆ ಹಮ್ಮಿಕೊಳ್ಳಲಾಗುವುದು ಎಂದರು.

ನಂತರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಗ್ರಾಮ ಪಂಚಾಯತ್ ಅಧ್ಯಕ್ಷ ಸಂಜುರೆಡ್ಡಿ ಕುದಗೆ ಅವರು ಮಾತನಾಡಿ, ಕಾರ್ಮಿಕರು ಮಕ್ಕಳಿಗೆ ಉತ್ತಮ ವಾದ ಶಿಕ್ಷಣ ನೀಡಿ, ಉನ್ನತ ಹುದ್ದೆಯಲ್ಲಿ ಆಯ್ಕೆ ಆಗುವಂತೆ ಶಿಕ್ಷಣ ನೀಡಬೇಕು ಎಂದು ಸಲಹೆ ನೀಡಿದರು. ನಂತರ ಗ್ರಾಮ ಪಂಚಾಯತ್ ಸದಸ್ಯ ವಿಲಾಸರೆಡ್ಡಿ ಮಾತನಾಡಿದರು.

ಈ ಸಂದರ್ಭದಲ್ಲಿ ಪಿಡಿಒ ಪ್ರಭು ಬಿರಾದಾರ್, ಸುರೇಶ ಗೋಕುಳ, ಗ್ರಾ.ಪಂ. ಕಾ.ದ.ಮಹಿಬೂಬ್, ಬೇಳಮಗಿ, ಡಿಇಒ ಸುರೇಶ, ಕಾಯಕ ಮಿತ್ರ ಜಗದೇವಿ ತೊಗರ ಖೇಡೆ ಸೇರಿದಂತೆ ಮತ್ತಿತರರು ಇದ್ದರು.

## ಅಂಚೆ ಇಲಾಖೆ: ಜೂ.04 ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 21-ಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರಪ್ರತಿನಿಧಿ ಮತ್ತು ಮತ್ತು ಫೀಲ್ಡ್ ಆಫೀಸರ್‌ಗಳ ನೇಮಕಕ್ಕಾಗಿ ಜೂನ್ 04 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ, ನಗರದ ಕೋಟೆ ಆವರಣದ ಅಂಚೆ ಅಧೀಕ್ಷಕರ ಕಾರ್ಯಾಲಯದಲ್ಲಿ ನೇರ ಸಂದರ್ಶನ ಏರ್ಪಡಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರ ಹಾಗೂ ಶೈಕ್ಷಣಿಕ ಪ್ರಮಾಣ ಪತ್ರದ ನಕಲುಗಳೊಂದಿಗೆ ಅಂದು ನಡೆಯಲಿರುವ ನೇರ ಸಂದರ್ಶನಕ್ಕೆ ಹಾಜರಾಗಬಹುದು.

ಅರ್ಹತೆ:

ಐದು ಸಾವಿರಕ್ಕಿಂತ ಕಡಿಮೆ ಜನಸಂಖ್ಯೆಹೊಂದಿರುವಪ್ರದೇಶದಲ್ಲಿ ವಾಸಿಸುತ್ತಿದ್ದರೆ 10ನೇ ತರಗತಿ ಉತ್ತೀರ್ಣರಾಗಿರಬೇಕು. ಐದು ಸಾವಿರ ಹಾಗೂ ಅದಕ್ಕಿಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ಇತರೆ ಪ್ರದೇಶಗಳಿಗೆ 12ನೇ ತರಗತಿ ಉತ್ತೀರ್ಣರಾಗಿರಬೇಕು.

ವಯೋಮಿತಿ 18 ವರ್ಷ, ಗರಿಷ್ಠ ವಯಸ್ಸಿನ ಮಿತಿ ಇರುವುದಿಲ್ಲ.

ನೇರಪ್ರತಿನಿಧಿಗಳು:

ನಿರುದ್ಯೋಗಿ ಹಾಗೂ ಸ್ವಯಂ ಉದ್ಯೋಗ ನಿರತ ಯುವಕರು, ಮಾಜಿ ವಿಮಾ ಕಂಪನಿಗಳ ಸಲಹೆಗಾರರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳಿಯ ಕಾರ್ಯಕರ್ತೆಯರು, ಮಾಜಿ ಗ್ರಾಮ ಪಂಚಾಯಿತಿಯ ಸದಸ್ಯರು ಅರ್ಹರಾಗಿರುತ್ತಾರೆ.

ಫೀಲ್ಡ್ ಆಫೀಸರ್:

ನಿವೃತ್ತ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನೌಕರರು, ನಿವೃತ್ತ ಗ್ರಾಮೀಣ ಅಂಚೆ ಸೇವಕರು (ಜಿಡಿಎಸ್) ಅರ್ಹರಾಗಿರುತ್ತಾರೆ. ವಿಮಾ ಉತ್ಪನ್ನಗಳನ್ನು ಮಾರಾಟ ಮಾಡುವ ಅನುಭವ, ಕಂಪ್ಯೂಟರ್ ಜ್ಞಾನ ಅಥವಾ ಸ್ಥಳೀಯ ಪ್ರದೇಶದ ಜ್ಞಾನವಿರಬೇಕು.

ಆಯ್ಕೆಯಾದ ಅಭ್ಯರ್ಥಿಗಳು ರೂ.5000/- (ಐದು ಸಾವಿರ ಮಾತ್ರ) ಗಳನ್ನು ರಾಷ್ಟ್ರೀಯ ಉಳಿತಾಯ ಪತ್ರ ಅಥವಾ ಕಿಸಾನ್ ವಿಕಾಸ ಪತ್ರದ ರೂಪದಲ್ಲಿ ಭದ್ರತಾ ಠೇವಣಿ ಇಡಬೇಕಾಗುತ್ತದೆ.

ಆಯ್ಕೆಯಾದ ನೇರಪ್ರತಿನಿಧಿ ಮತ್ತು ಫೀಲ್ಡ್ ಆಫೀಸರ್‌ಗಳಿಗೆ ಅವರು ಮಾಡಿದ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮಿಷನ್ ನೀಡಲಾಗುವುದು. ಇದರ ಹೊರತಾಗಿ ಬೇರೆ ಯಾವುದೇ ನಿಗದಿತ ವೇತನ ಇರುವುದಿಲ್ಲ. ಅಭ್ಯರ್ಥಿಗಳು ಬೇರೆ ಯಾವುದೇ ವಿಮಾ ಕಂಪನಿ, ಸಂಸ್ಥೆ, ಸಂಘಗಳ ಏಜೆಂಟ್ ಆಗಿರಬಾರದು.

ಹೆಚ್ಚಿನ ಮಾಹಿತಿಗಾಗಿ ಡೆವಲಪ್‌ಮೆಂಟ್ ಆಫೀಸರ್ ಮಾರುತಿ.ವಿ (ಮೊ.9481694420) ಹಾಗೂ ಅಂಚೆ ಅಧೀಕ್ಷಕರ ಕಾರ್ಯಾಲಯ, ಹತ್ತಿರದ ಅಂಚೆ ಕಚೇರಿ ಅಥವಾ ದೂ.08392-266037 ಗೆ ಸಂಪರ್ಕಿಸಬಹುದು ಎಂದು ಬಳ್ಳಾರಿ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹದಗೆಟ್ಟು ಹಳ್ಳ ಹಿಡಿದು ಹಾಳಗಿರುವ ಭಾಗ್ಯನಗರದ ರಸ್ತೆಗಳು : ಶರಣಬಸಪ್ಪ ದಾನಕೈ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲೂಕಿನ ಭಾಗ್ಯನಗರದ ರಸ್ತೆಗಳು ಹದೆಗೆಟ್ಟು ಹಳ್ಳ ಹಿಡಿದಿವೆ, ಮಳೆಯಿಂದ ರಸ್ತೆಗಳು ತಗ್ಗು ಗುಂಡಿಗಳಿಂದ ಕೆರೆಗಳಂತೆ ನಿರ್ಮಾಣವಾಗಿವೆ ಮತ್ತು ಕೃಷಿ ಹೊಂಡಗಳಾಗಿ ರಾರಾಜಿಸುತ್ತಿವೆ ಇದರಿಂದ ದ್ವಿ ಚಕ್ರ ವಾಹನ ಸವಾರರು, ಪಾದಚಾರಿಗಳಿಗೆ ,ಆಟೋ ಚಾಲಕರಿಗೆ, ಇತರ ವಾಹನ ಸವಾರರು ಇವರಿಗೆ , ರೈತ ವರ್ಗದವರಿಗೆ, ಪ್ರಯಾಣಿಕರಿಗೆ ತೊಂದರೆಯಾಗುತ್ತದೆ ಸಂಬಂಧಿಸಿದ ಅಧಿಕಾರಿಗಳು, ಜನಪ್ರತಿನಿಧಿಗಳು ಸುಗಮ ರಸ್ತೆಗಳಿಗೆ ಸ್ಪಂದಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರು ಸೇನೆ ವಾಸುದೇವ ಮೇಟಿ ಬಣದ ಯಲಬುರ್ಗಾ ತಾಲೂಕು ಅಧ್ಯಕ್ಷ ಶರಣಬಸಪ್ಪ ದಾನಕೈ ಅವರು ಸಮಸ್ಯೆಗೆ ಸ್ಪಂದಿಸುವ ಕಾರ್ಯ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಭಾಗ್ಯನಗರದ ತಾಯಮ್ಮ ದೇವಸ್ಥಾನ ಹಾಗು ಸಾಯಿಬಾಬ ಮಂದಿರ ಮುಂದೆ ಇರುವ ರೈಲು ಬ್ರೀಜ್ ಮುಂಭಾಗದಲ್ಕಿ ದೊಡ್ಡದಾದ ಕಂದಕಗಳು ನಿರ್ಮಾಣವಾಗಿವೆ ,ಈ ಮಾರ್ಗವಾಗಿ ವಿವಿಧ ಕಲ್ಯಾಣ ಮಂಟಪಗಳು, ದೇವಸ್ಥಾನಗಳು ಇರುವದರಿಂದ ಜನದಟ್ಟನೆ ಪ್ರಯಾಣ ಹೆಚ್ಚಿನ ಪ್ರಮಾಣದಲ್ಲಿ ಇರುತ್ತದೆ, ಹಗಲಿನಲ್ಲಿ ರಸ್ತೆಗಳ ಮೇಲೆ ನೀರು ನಿಂತರೆ ಕಾಣುವುದಿಲ್ಲ ಆದರೆ ರಾತ್ರಿಯಾದರೆ ಮರಣ ಮೃದಂಗ ಸಂಭವಿಸಬಹುದು ಆದಷ್ಟೂ ಬೇಗ ಕಾರ್ಯಪ್ರವೃತರಾಗಬೇಕು ಎಂದು ರೈತ ಮುಖಂಡ ಶರಣಬಸಪ್ಪ ದಾನಕ್ಕೈ ಒತ್ತಾಯಿಸಿದ್ದಾರೆ.

## ಮೇ 24 ರಂದು ಶ್ರೀ ಶಿವದಾಸಿಮಯ್ಯ ಜಯಂತಿ : ವೀರೇಶಕುಮಾರ್




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನೂತನ ಕೊಪ್ಪಳ ಜಿಲ್ಲಾ ಶಿವಶಂಪಿ ಸಮಾಜದ ಉದ್ಘಾಟನಾ ಸಮಾರಂಭ ಹಾಗೂ ಶ್ರೀ ಶಿವದಾಸಿಮಯ್ಯನವರ ಜಯಂತೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ವೀರೇಶಕುಮಾರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧುವಾರ ಕೊಪ್ಪಳ ಜಿಲ್ಲಾ ಶಿವಸಿಂಪಿ ಸಮಾಜದ ಜಿಲ್ಲಾ ಅಧ್ಯಕ್ಷರಾದ ವೀರೇಶಕುಮಾರ ಬೆಟಿಗೇರಿ ಮಾತನಾಡಿ,70 ವರ್ಷಗಳಿಂದ ಕೊಪ್ಪಳ ಜಿಲ್ಲೆಯಲ್ಲಿ ಶಿವಸಿಂಪಿ ಸಮಾಜ ಬೆಳಕಿಗೆ ಬಂದಿರುವುದಿಲ್ಲ. ಇದೇ ಮೊದಲ ಬಾರಿಗೆ ಕೊಪ್ಪಳ ನಗರದ ಶ್ರೀ ಮಹಾಂತಯ್ಯನಮಠ ಕಲ್ಯಾಣ ಮಂಟಪದಲ್ಲಿ ಮೇ 24ರಂದು ಶನಿವಾರ ಅದ್ದೂರಿ ಜಿಲ್ಲಾ ಘಟಕ ಉದ್ಘಾಟನೆ ಹಾಗೂ

ಶ್ರೀ ಶಿವದಾಸಿಮಯ್ಯನವರ ಜಯಂತೋತ್ಸವ ಕಾರ್ಯಕ್ರಮ ಅದ್ದೂರಿಯಾಗಿ ಜರಗಲಿದೆ. ಅದೇ ದಿನ ಬೆಳಗ್ಗೆ 7 ಗಂ-ಟೆಗೆ ಗವಿಮಠದಿಂದ ಬಸವೇಶ್ವರ ವೃತ್ತದ ಮೂಲಕ ಕಲ್ಯಾಣ ಮಂಟಪದವರೆಗೆ ಶ್ರೀ

ಶಿವದಾಸಿಮಯ್ಯನವರ ಭಾವಚಿತ್ರ ಹಾಗೂ ಕುಂಭ, ಮೆರವಣಿಗೆ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಕೊಪ್ಪಳ ಗವಿಮಠದ ಅಭಿನವ ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಗಳು ವಹಿಸಿಕೊಳ್ಳಲಿದ್ದಾರೆ. ಉದ್ಘಾಟನೆ ಮಾಜಿ ಶಾಸಕರಾದ ಕೆ ಬಸವರಾಜ್ ಹಿಟ್ನಾಳ್, ಶ್ರೀ ಶಿವದಾಸಿಮಯ್ಯನವರ ಭಾವಚಿತ್ರಕ್ಕೆ ಪುಷ್ಪಾರ್ಪಣೆಯನ್ನು ಮಾಜಿ ಸಂಸದರಾದ ಸಂಗಣ್ಣ ಕರಡಿ ನೆರವೇರಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆ ಜಿಲ್ಲಾಧ್ಯಕ್ಷರು ವಹಿಸಿಕೊಳ್ಳಲಿದ್ದು, ಗುರುತಿನ ಚೀಟಿ ಪುಸ್ತಕ ಬಿಡುಗಡೆಯನ್ನು ಜೆಡಿಎಸ್ ಪಕ್ಷದ ರಾಜ್ಯ ಕಮೀಟಿ ಸದಸ್ಯರಾದ ಸಿ.ವಿ ಚಂದ್ರಶೇಖರ್ ರವರು ಬಿಡುಗಡೆ ಮಾಡಲಿದ್ದಾರೆ. ಕಾರ್ಯಕ್ರಮಕ್ಕೆ ಗಣ್ಯರು, ಪೊಲೀಸ್ ಇಲಾಖೆ ಅಧಿಕಾರಿಗಳು, ಹಾಗೂ ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಯಶಸ್ವಿಗಾಗಿ ಸಹಕರಿಸಿದ ದಾನಿಗಳಿಗೆ ಹಾಗೂ ಸಮಾಜದ ಹಿರಿಯರಿಗೆ ವಿಶೇಷ ಸೇವೆ ಮಾಡಿದ ಸಮಾಜದ ಸೇವಕರಿಗೆ, ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಶೇಕಡ 90ರಷ್ಟು ಅಂಕ ಪಡೆದ ಸಮಾಜದ ಪ್ರತಿಭಾವಂತ ಮಕ್ಕಳಿಗೆ ಸನ್ಮಾನ ಮಾಡಲಾಗುವುದು. ಈ ಕಾರ್ಯಕ್ರಮದ ನಿರೂಪಣೆಯನ್ನು ವಿರುಪಾಕ್ಷಪ್ಪ ಶಿವಸಿಂಪರ್ ಶಿಕ್ಷಕರು, ಚಂದ್ರಮ್ಮ ವಿ. ಜವಳಿ ಶಿಕ್ಷಕರು ಗಂಗಾವತಿ, ಪ್ರಕಾಶ್ ವೀರಣ್ಣ ಶಿಕ್ಷಕರು ಮಂಗಳೂರು, ಸುಮಂಗಲಾ ಬಿ ಸಿಂಪಿ ಸಮಾಜ ಸೇವಕರು ಶ್ರೀ ರಾಮನಗರ, ವಿವರಗಳಿಂದ ಕಾರ್ಯಕ್ರಮದ ನಿರೂಪಣೆ. ಈ ಕಾರ್ಯಕ್ರಮದಲ್ಲಿ 12 ನೂರಕ್ಕೂ ಹೆಚ್ಚು ಸಮಾಜದ ಜನರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು. ಪತ್ರಿಕಾಗೋಷ್ಠಿ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಶಿವಸಿಂಪಿ ಸಮಾಜದ ಜಿಲ್ಲಾ ಗೌರವಾಧ್ಯಕ್ಷರಾದ ಶಿವಪುತ್ರಪ್ಪ ಯಮನೂರಪ್ಪ ಸಿಂಪಿ ಮಂಗಳೂರು, ಜಿಲ್ಲಾ ಸಂಘಟನಾ ಕಾರ್ಯದರ್ಶಿಗಳಾದ ಬಸವರಾಜ ವೀರಸಂಗಪ್ಪ ಅಂಗಡಿ, ಇತರರು ಉಪಸ್ಥಿತರಿದ್ದರು.

## ಭಾರತೀಯತೆಯ ಬೆಸುಗೆಗೆ ಬೂಕರ್ ಮನ್ನಣೆ
### ಭಾನು ಮುಷ್ತಾಕ್ ನಮ್ಮ ನೆಲದ ಹೆಮ್ಮೆ : ಕೆ.ವಿ.ಪ್ರಭಾಕರ್ ಸಂತಸ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು ಮೇ 21,-ಬೂಕರ್ ವೇದಿಕೆಯಲ್ಲಿ ಕನ್ನಡದ ಸಾಹಿತ್ಯದ ಹಿರಿಮೆಯನ್ನು ಎತ್ತಿ ಹಿಡಿದ ಲೇಖಕಿ, ಪತ್ರಕರ್ತೆ, ಕತೆ-ಗಾರ್ತಿ ಭಾನು ಮುಷ್ತಾಕ್ ಅವರಿಗೆ ಅಂತಾರಾಷ್ಟ್ರೀಯ ಭೂಕರ್ ಪ್ರಶಸ್ತಿ ಲಭಿಸಿರುವುದು ಅವರ ಕತೆಗಳಲ್ಲಿ ಬೆಸೆದಿರುವ ಭಾರತೀಯತೆಯ ಬೆಸುಗೆಗೆ ಸಿಕ್ಕಿರುವ ಅಂತಾರಾಷ್ಟ್ರೀಯ ಮನ್ನಣೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಸಂತಸ ವ್ಯಕ್ತಪಡಿಸಿದ್ದಾರೆ.

ತಮ್ಮ ಲೇಖನ, ಭಾಷಣ ಮತ್ತು ಕತೆಗಳಲ್ಲಿ ನಮ್ಮ ನೆಲದ ಮೂಲ ಸತ್ವ ಮತ್ತು ಮೂಲ ತತ್ವ ಆಗಿರುವ ಸರ್ವ ಜನಾಂಗದ ಶಾಂತಿಯ ತೋಟ ಎನ್ನುವ ಮೌಲ್ಯವನ್ನು ಮತ್ತು ಜಾತ್ಯತೀತತೆಯನ್ನು ಬೆಸೆಯುವ ಕಾರ್ಯ ಮಾಡುತ್ತಲೇ ಬರುತ್ತಿದ್ದಾರೆ. ಇವರಿಗೆ ಬೂಕರ್ ಪ್ರಶಸ್ತಿ ಬಂದಿರುವುದು ಕನ್ನಡ ಸಾಹಿತ್ಯ ಮತ್ತು ಕನ್ನಡತನದ ಹಿರಿಮೆಯನ್ನು ಹೆಚ್ಚಿಸಿದ್ದು ಪ್ರತಿಯೊಬ್ಬ ಕನ್ನಡಿಗನೂ ಹೆಮ್ಮೆ ಪಡಬೇಕಾದ ಸಂದರ್ಭ ಇದಾಗಿದೆ. ವಿಶ್ವ ಮಾನವತೆಯ ಸದಾಶಯವನ್ನು ಎತ್ತಿ ಹಿಡಿಯುವ ಭಾನು ಮುಷ್ತಾಕ್ ಅವರ ಕತೆಗಳು ವಿಶ್ವದ ಎಲ್ಲಾ ಭಾಷೆಗಳಿಗೂ ಅನುವಾದಗೊಳ್ಳಬೇಕು ಎನ್ನುವುದು ನನ್ನ ಆಶಯ.

## ಬಳ್ಳಾರಿ ಮಹಾನಗರ ಪಾಲಿಕೆ: ವಸತಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 21-ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಸತಿ ಸೌಲಭ್ಯ ಪಡೆಯಲು ಇಚ್ಛಿಸುವ ಸ್ವಂತ ಮನೆ ಇಲ್ಲದೇ ಇರುವ ವಸತಿ ರಹಿತರಿಂದ ವಸತಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಕೇಂದ್ರ ಸರ್ಕಾರದ ಪಿಎಂಎವೈ, ಹೆಚ್‌ಎಫ್‌ಎ ಹಾಗೂ ಇತರೆ ಯೋಜನೆಯಡಿ ಬಳ್ಳಾರಿ ನಗರದ ಮುಂಡರಗಿ ಆಶ್ರಯ ಬಡಾವಣೆಯಲ್ಲಿ ಜಿ+2 ಮಾದರಿಯ 5616 ಮನೆಗಳ ನಿರ್ಮಾಣ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ.

ಫಲಾನುಭವಿಗಳಾಗಲು ವಸತಿ ರಹಿತರಾಗಿರಬೇಕು. ಬಳ್ಳಾರಿ ನಗರದ ನಿವಾಸಿಗಳಾಗಿರಬೇಕು. ವಾರ್ಷಿಕ ಆದಾಯ ರೂ.3 ಲಕ್ಷ ಮೀರಿರಬಾರದು. ಫಲಾನುಭವಿ ವಂತಿಕೆ ಪಾವತಿಸುವುದು ಹಾಗೂ ಬ್ಯಾಂಕ್ ಸಾಲ ಮರುಪಾವತಿ ಮಾಡಲು ಬದ್ಧರಾಗಿರಬೇಕು.

ಫಲಾನುಭವಿಯು ಭರಿಸಬೇಕಾದ ವಂತಿಕೆ ಮೊತ್ತದ ವಿವರ:

**ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ:** ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಾಯಧನ-3,30,000 ರೂ., ಫಲಾನುಭವಿಯು ಪ್ರಸುತ್ತ ಪಾವತಿಸಬೇಕಾದ ವಂತಿಕೆ ಮೊತ್ತ-42,000 ರೂ., ಫಲಾನುಭವಿಯು ಮನೆ ಸ್ವಾಧೀನ ಸಂದರ್ಭದಲ್ಲಿ ಪಾವತಿಸಬೇಕಾದ ವಂತಿಕೆ ಮೊತ್ತ-2,90,000 ರೂ., ಒಟ್ಟು ಘಟಕ ವೆಚ್ಚ (ಪರಿಷ್ಕೃತ)- 6,62,000 ರೂ.

**ಅಲ್ಪ ಸಂಖ್ಯಾತ ಮತ್ತು ಇತರೆ:** ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಾಯಧನ-2,70,000 ರೂ., ಫಲಾನುಭವಿಯು ಪ್ರಸುತ್ತ ಪಾವತಿಸಬೇಕಾದ ವಂತಿಕೆ ಮೊತ್ತ-1,02,000 ರೂ., ಫಲಾನುಭವಿಯು ಮನೆ ಸ್ವಾಧೀನ ಸಂದರ್ಭದಲ್ಲಿ ಪಾವತಿಸಬೇಕಾದ ವಂತಿಕೆ ಮೊತ್ತ-2,90,000 ರೂ., ಒಟ್ಟು ಘಟಕ ವೆಚ್ಚ (ಪರಿಷ್ಕೃತ)- 6,62,000 ರೂ. ಪಾವತಿಸಬೇಕು.

ಈ ಮೇಲ್ಕಂಡ ಅರ್ಹತೆಯ ಮಾನದಂಡ ಹಾಗೂ ಫಲಾನುಭವಿ ವಂತಿಕೆ ಪಾವತಿಸಲು ಶಕ್ತರಾಗಿರುವ ಹಾಗೂ ಆಸಕ್ತಿ ಹೊಂದಿರುವ ಕುಟುಂಬಗಳು ಕೂಡಲೇ ನಿಗಧಿತ ನಮೂನೆಯ ಅರ್ಜಿ ಪಡೆದು ಅವಶ್ಯಕ ಹಾಗೂ ಅಗತ್ಯ ದಾಖಲೆಗಳೊಂದಿಗೆ ಮಹಾನಗರ ಪಾಲಿಕೆಯ ಹಳೆಯ ಕಚೇರಿಯ ಆಶ್ರಯ ಶಾಖೆಗೆ ಭೇಟಿ ನೀಡಬಹುದು ಎಂದು ಮಹಾನಗರ ಪಾಲಿಕೆ ಕಚೇರಿಯು ಪ್ರಕಟಣೆಯಲ್ಲಿ ತಿಳಿಸಿದೆ.

## ಪೌರರಕ್ಷಣಾ ದಳ: ಸ್ವಯಂ ಸೇವಕ ಸದಸ್ಯರಾಗಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 21-ಪೌರರಕ್ಷಣಾ ದಳದಲ್ಲಿ ಸ್ವಯಂ ಸೇವಕರಾಗಿ ಸದಸತ್ವಪಡೆಯಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರಕೃತಿ ವಿಕೋಪ, ವಿಪತ್ತು ನಿರ್ವಹಣೆ ಮತ್ತು ಮಾನವ ನಿರ್ಮಿತ ವಿಕೋಪಗಳ ಸಮಯದಲ್ಲಿ ಸಾರ್ವಜನಿಕರ ಆಸ್ತಿ ಮತ್ತು ಪ್ರಾಣ ಕಾಪಾಡುವ ಉದ್ದೇಶವಾಗಿದೆ. ಇಂತಹ ಸಾಮಾಜಿಕ ಕಾರ್ಯ ಮಾಡಲು ಇಚ್ಛಿಸುವ ಬಳ್ಳಾರಿ ನಗರ ಮತ್ತು ಗ್ರಾಮೀಣ ಪ್ರದೇಶದ ಸಾರ್ವಜನಿಕರು ಮತ್ತು ಕಾಲೇಜು ವಿದ್ಯಾರ್ಥಿಗಳು ಸದಸ್ಯರಾಗುವ ಮೂಲಕ ಸೇವೆ ಸಲ್ಲಿಸಬಹುದು.

ಪೌರರಕ್ಷಣಾ ವಿಭಾಗದ ಸದಸ್ಯನಾಗಲು ಯಾವುದೇ ವಿದ್ಯಾರ್ಹತೆ ಇರುವುದಿಲ್ಲ. ಮಾಜಿ ಯೋಧರು ಮತ್ತು ನಿವೃತ್ತ ಸರ್ಕಾರಿ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮುನ್ನೆಡೆಸಬಹುದು. ಈ ಸದಸ್ಯರು ಸಮಾಜ ಸೇವೆಯ ಭಾವನೆಯಿಂದ ಬರಬೇಕೆ ಹೊರತು ಅನ್ಯ ಭಾವನೆಗಳಿಂದ ಕೂಡಿರುವುದಿಲ್ಲ. ಸ್ವ-ಇಚ್ಛೆಯಿಂದ ಸ್ವಯಂ ಸೇವಕರಾಗಿ ಕರ್ತವ್ಯ ನಿರ್ವಹಿಸಬೇಕು. ಸರ್ಕಾರದ ಯಾವುದೇ ಧನಸಹಾಯ ಇರುವುದಿಲ್ಲ. ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ರಸ್ತೆಯ ಜಿಲ್ಲಾ ಪೌರರಕ್ಷಣಾ ಕಚೇರಿಯಲ್ಲಿ ಜೂನ್ 05 ರವರೆಗೆ ಅರ್ಜಿ ವಿತರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂ.08392 276421 ಗೆ ಸಂಪರ್ಕಿಸಬಹುದು ಎಂದು ಪೌರರಕ್ಷಣಾ ದಳದ ಮುಖ್ಯ ವಾರ್ಡನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರ್ಮಿಕ ಇಲಾಖೆಯಿಂದಲೆ ಕಾರ್ಮಿಕರಿಗೆ ಯೋಜನೆಗಳ ಮರೀಚಿಕೆ -ಪ್ರದೀಪ ಅಣಿಬಿ.



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,ಕಾರ್ಮಿಕ ಇಲಾಖೆಯಿಂದ ಜಾರಿಯಲ್ಲಿರುವ ಹಲವಾರು ಸರ್ಕಾರಿ ಯೋಜನೆಗಳು ಬಡವರಿಗೆ ದುರ್ಭಲರಿಗೆ ತಲುಪದೆ ಉಳ್ಳವರ ಪಾಲಾಗುತ್ತಿವೆ, ಕಾರ್ಮಿಕರ ಮಕ್ಕಳಿಗೆ ಮದುವೆ ಸಾಹಾಯಧನ, ಕಾರ್ಮಿಕರಿಗೆ ವೃತ್ತಿ ತರಬೇತಿಗಳು, ಮತ್ತು ಸಾಮಾನುಗಳ ವಿತರಣೆ, ಕಾರ್ಮಿಕರಿಗೆ ವಿಮಾ ಯೋಜನೆ, ಮತ್ತು ಕಾರ್ಮಿಕ ವಯೋವೃದ್ದರಿಗೆ ಮಾಹಾಶಾಸನ, ಆರೋಗ್ಯ ಸಾಹಾಯಧನ, ಕಾರ್ಮಿಕರು ಮೃತಪಟ್ಟಲ್ಲಿ ಅವರಿಗೆ ಕಾರ್ಮಿಕ ಇಲಾಖೆಯಿಂದ ಸಾಹಾಯಧನ ಮಂಜೂರಿ ಹೀಗೆ ಹಲವಾರು ಯೋಜನೆಗಳು ಜಾರಿಯಲ್ಲಿದ್ದರೂ ಇಂದು ಕಚೇರಿಯಲ್ಲೆ ಕರ್ತವ್ಯ ನಿರ್ವಹಣೆ ಮಾಡುವ ಅಧಿಕಾರಿಗಳ ಪಾಲಾಗುತ್ತಿವೆ, ಹಲವಾರು ಯೊಜನೆಗಳು ಗೊತ್ತಾಗದೆ ಕಾರ್ಮಿಕರು ದುರ್ಭಲರು, ಅಫಘಾತಗಳಲ್ಲಿ ಶಾಶ್ವತ ಅಂಗವೀಕಲರಾಗಿದ್ದವರು ಗೋಳಾಡುತ್ತಿದ್ದಾರೆ, ಮದುವೆಗೆಂದು ಸಾಹಾಯಧನ ಅರ್ಜಿ ಸಲ್ಲಿಸಿದರೂ ವರ್ಷನುಗಟ್ಟಲೆ ಕಚೇರಿಗೆ ಸುತ್ತಾಡಿದರೂ ಕೆಲಸ ಮಾಡದೆ ಅಧಿಕಾರಿಗಳು ಸತಾಹಿಸುತ್ತಿದ್ದಾರೆ, ಎಂದು ಆರೋಪಿಸಿದ ಸರ್,ಎಮ್, ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷರಾದ ಪ್ರದೀಪ ಅಣಿಬಿ ನೇತೃತ್ವದಲ್ಲಿ ಕಾರ್ಮಿಕ ಮಂತ್ರಿ ಸಂತೋಷ ಲಾಡ ರವರಿಗೆ ತಹಿಸಿಲ್ದಾರವರ ಮುಖಾಂತರ ಮನವಿ ಸಲ್ಲಿಸಲಾಯಿತು, ಈ ಸಂಧರ್ಭದಲ್ಲಿ ರಾಜಪ್ಪ ಗುತೆ-ದಾರ, ಮೌನೇಶ ಜಾರಕಿಹೊಳಿ, ಬೋಜಪ್ಪ ಮುಂಡಾಸ್. ಅಂಬ್ರೇಶ ಕಟ್ಟಿಮನಿ, ಮಲ್ಲು ದರಿಯಾಪುರ, ಮೌನೇಶ ಬೇವಿನಳ್ಳಿ, ಆಂಜನೇಯ ಹಳಿಸಗರ ಏರಿದಂತೆ ಹಲವಾರು ಜನರು ಹಾಜರಿದ್ದರು,.

### ನಂದರ್ಗಾ ಗ್ರಾಂ. ಪಂಚಾಯತಿಯಲ್ಲಿ ಧರ್ಮು ಸಾಹುಕಾರ ದರ್ಪ.ಪತ್ನಿಯ
## ಹೆಸರಲ್ಲಿ ಧರ್ಮುವಿನ ದರ್ಬಾರ್ - ಅಭಿಷೇಕ್ ಬಿರಾದಾರ್



ಮಲ್ಲಮ್ಮ ನುಡಿ ವಾರ್ತೆ

ಅಫಜಲಪೂರ :ನಂದರ್ಗಾ ಗ್ರಾಂ ಪಂಚಾಯತನಲ್ಲಿ ಪತ್ನಿಯ ಹೆಸರಲ್ಲಿ ಪತಿಯು ಅಧಿಕಾರ ಚಲಾಯಿಸುತ್ತಿರುವ ಆರೋಪ ಬಲವಾಗಿ ಕೇಳಿಬರುತ್ತಿದೆ, ಈ ಕುರಿತು ಜೇವರ್ಗಿ ಬಿ ಗ್ರಾಮದ ಯುವ ಮುಖಂಡ ಅಭಿಲಾಷ್ ಬಿರಾದಾರ ಗಂಭೀರ ಆರೋಪ ಮಾಡಿದ್ದಾರೆ.ಜೇವರ್ಗಿ ಬಿ ಗ್ರಾಮದಲ್ಲಿ ಪ್ರತಿಯೊಂದು ಕಾಮಗಾರಿ ಮಾಡಬೇಕಾದರೆ ಗ್ರಾಂ ಪಂಚಾಯತ ಅಧ್ಯಕ್ಷರ ಹೆಸರಲ್ಲಿ ಅವರ ಪತಿ ಧರ್ಮು ಸಾಹುಕಾರ ಎಂಬುವವರು ಅಧಿಕಾರ ಚಲಾಯಿಸುತ್ತಾರೆ. ಜೊತೆಗೆ ಪಂಚಾಯತ ಸಾಮಾನ್ಯ ಸಭೆಗಳಲ್ಲೂ ಕೂಡ ಇವರ ಹಸ್ತಕ್ಷೇಪ ತೀವ್ರವಾಗಿರುತ್ತದೆ, ಇದಕ್ಕೆ ಹಿಂದಿನ ಪಂಚಾಯತ ಅಭಿವೃದ್ಧಿ ಅಧಿಕಾರಿ ಸಾವಿತ್ರಿ ಮೇತ್ರೆ ಕೂಡ ಕಾರಣರಾಗಿದ್ದು ಪ್ರತಿಯೊಂದುಕ್ಕೂ ನೇರವಾಗಿ ಅಧ್ಯಕ್ಷರ ಪತಿಗೆ ಕರೆ ಮಾಡಿ ಸಾಧಕ ಬಾದಕಗಳ ಬಗ್ಗೆ ಚರ್ಚೆ ಮಾಡುತ್ತಾರೆ ಎಂದು ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.ಮತ್ತು ನಂದರ್ಗಾ ಗ್ರಾಂ ಪಂಚಾಯತದಲ್ಲಿ ಹಲವಾರು ಸಮಸ್ಯೆಗಳಿದ್ದು ತ್ಯಾಜ್ಯ ವಿಲೇವಾರಿ ವಾಹನ ಇಲ್ಲಿಯವರೆಗೆ ಒಂದು ದಿನ ಕೂಡ ಬಳಕೆಯಾಗಿಲ್ಲ, ಸುಮಾರು ಅಂದಾಜು 30 ಲಕ್ಷಕ್ಕಿಂತ ಅಧಿಕ ಅನುದಾನವಿರುವ ತ್ಯಾಜ್ಯ ವಿಲೇವಾರಿ ಘಟಕ ಸಂಪೂರ್ಣ ಕಳಪೆ ಕಾಮಗಾರಿಯಾಗಿದ್ದು ಅದರಲ್ಲೂ ಅಧ್ಯಕ್ಷರ ಪತಿ ಹಣವನ್ನು ಲೂಟಿ ಮಾಡಿದ್ದಾರೆ ಎಂದರು. ಜೊತೆಗೆ ತ್ಯಾಜ್ಯ ವಿಲೇವಾರಿ ಘಟಕ ಇಲ್ಲಿಯವರೆಗೆ ಪೂರ್ಣಗೊಂಡಿಲ್ಲ ಮತ್ತು ಬಳಕೆಗೆ ಉಪಯೋಗಿಸಿಲ್ಲ. ಇನ್ನು ಜಲ ಜೀವನ ಮಿಷನ್ ಕಾಮಗಾರಿ ಕೂಡ ಸಂಪೂರ್ಣ ಕಳಪೆಯಾಗಿದ್ದು ಹಳೆ ನೀರಿನ ಟ್ಯಾಂಕ್ ಗೆ ಸುಣ್ಣ ಬಣ್ಣ ಮಾಡಿ ಹೊಸ ಟ್ಯಾಂಕ್ ಎಂದು ಬಿಂಬಿಸಿ ಬಿಲ್ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು. ನಮ್ಮ ಜೇವರ್ಗಿ ಗ್ರಾಮದಲ್ಲಿ ನರೇಗಾ ಯೋಜನೆಯಡಿ ಇಲ್ಲಿಯವರೆಗೆ ಒಂದು ಕಾಮಗಾರಿ ಕೂಡ ನಡೆದಿಲ್ಲ, ಕೇವಲ ನಂದರ್ಗ ಗ್ರಾಮಕ್ಕೆ ಮಾತ್ರ ಸೀಮಿತವಾಗಿದೆ ಎಂದರು. ಈ ಕೂಡಲೇ ಅಧ್ಯಕ್ಷರ ಹೆಸರಲ್ಲಿ ದರ್ಪ ತೋರುತ್ತಿರುವ ಅಧ್ಯಕ್ಷರ ಪತಿ ಧರ್ಮು ಸಾಹುಕಾರ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು ಎಂದು ಆಗ್ರಸಿದರು.

## ಕುರುಗೋಡು: ಮೇ 26 ರಂದು ಕುಂದು ಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 21-ಕುರುಗೋಡು ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಜನಾಂಗದವರ ಕುಂದು ಕೊರತೆ ಸಮಸ್ಯೆಗಳನ್ನು ಆಲಿಸಿ ಬಗೆಹರಿಸಲು ಮೇ 26 ರಂದು ಬೆಳಿಗ್ಗೆ 11 ಗಂಟೆundefinedಗೆ ಕುರುಗೋಡು ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಕಚೇರಿಯಲ್ಲಿ ತಾಲ್ಲೂಕು ಮಟ್ಟದ ಕುಂದು ಕೊರತೆ ಸಭೆಯನ್ನು ಏರ್ಪಡಿಸಲಾಗಿದ್ದು, ತಾಲ್ಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ಸಂಘದ ಪದಾಧಿಕಾರಿಗಳು, ದಲಿತ ಮುಖಂಡರುಗಳು ಹಾಗೂ ಸಮುದಾಯದ ಸಾರ್ವಜನಿಕರು ಸಭೆಗೆ ಹಾಜರಾಗಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ: ಮೆಟ್ರಿಕ್
## ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 21-ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ-ಪರಿಶಿಷ್ಟ ವರ್ಗದ ಪಿಯುಸಿ, ಐಟಿಐ ಮತ್ತು ಡಿಪ್ಲೋಮೋ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಆಸಕ್ತ ವಿದ್ಯಾರ್ಥಿಗಳು https://shp.karnataka.gov.in ಗೆ ಭೇಟಿ ನೀಡಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜೂನ್ 20 ಕೊನೆಯ ದಿನವಾಗಿದೆ.

ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in ನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಸಹಾಯವಾಣಿ ಸಂಖ್ಯೆ 8050770005 ಮತ್ತು 8050770004 ಅಥವಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಅಧಿಕಾರಿಗಳ ಕಚೇರಿಗೆ ಅಗತ್ಯ ದಾಖಲೆಗಳೊಂದಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಳ್ಳಾರಿ: ಸರ್ಕಾರಿ ಐಟಿಐ ಕಾಲೇಜು ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 21-ನಗರದ ರೇಡಿಯೋ ಪಾರ್ಕ್ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಪ್ರಸಕ್ತ ಸಾಲಿಗೆ ವಿವಿಧ ವೃತ್ತಿಗಳಿಗೆ ಪ್ರವೇಶಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯರಾದ ಪಂಡಿತಾರಾಧ್ಯ ಅವರು ತಿಳಿಸಿದ್ದಾರೆ.

10 ನೇ ತರಗತಿ ಪಾಸ್/ಫೇಲ್ ಆದ ಅಭ್ಯರ್ಥಿಗಳು ವೆಬ್ ಸೈಟ್ ವಿಳಾಸ www.cite.karnataka.gov.in ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದ್ದು, ಇಲ್ಲವೇ ನೇರವಾಗಿ ಸಂಸ್ಥೆಗೆ ಭೇಟಿ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಮೇ 28 ಕೊನೆಯ ದಿನವಾಗಿದೆ. ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿದ ಸಂಸ್ಥೆಯಲ್ಲಿ ಮಾತ್ರ ದಾಖಲೆ ಪರಿಶೀಲನೆಗೆ ಕಡ್ಡಾಯವಾಗಿ ಹಾಜರಾಗಬೇಕು.

ವಿಶೇಷ ಸೂಚನೆ:

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ನೀಡುವ ಮೊಬೈಲ್ ಸಂಖ್ಯೆ ಹಾಗೂ ಇ-ಮೇಲ್ ವಿಳಾಸವನ್ನು ಪ್ರವೇಶಾತಿ ಮತ್ತು ಪರೀಕ್ಷೆ ಮುಗಿಯುವವರೆಗೂ ಬದಲಾವಣೆ ಮಾಡುವಂತಿಲ್ಲ.

ಹೆಚ್ಚಿನ ಮಾಹಿತಿಗಾಗಿ ಮೊ.9916300462 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೇವರ್ಗಿ ಗ್ರಾಮದ ಮೂಲಭೂತ ಸೌಕರ್ಯಗಳ ಕೊರತೆಗೆ- ಡೋಂಟ್ ಕೇರ್ ಎಂದ ಗ್ರಾಮಪಂಚಾಯಿತಿ ಪಿಡಿಯೋ



ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ: ತಾಲೂಕಿನ ಜೇವರ್ಗಿ ಗ್ರಾಮದಲ್ಲಿ ಮೂಲಭೂತ ಸೌಕರ್ಯಗಳ ಸಮಸ್ಯೆ ಬಗ್ಗೆ ಮಾತನಾಡಿ ಪ್ರಕಾಶ ಕುಂಬಾರ ಹಲವು ಕಡೆ ಜೆಜಿಎಂ ಕೆಲಸ ವಿಳಂಬವಾಗಿದ್ದು ನೀರಿನ ಸಮಸ್ಯೆ ತುಂಬಾನೇ ಇದೆ ಎರಡು ದಿನಕ್ಕೊಮ್ಮೆ 3 ದಿನಕೊಮ್ಮೆ ನೀರು ಬರುತ್ತೆ ಮೂರು ವರ್ಷದಿಂದ ನರೇಗಾ ಯೋಜನೆ ಅಡಿಯಲ್ಲಿ ಯಾವುದೇ ನಮ್ಮೂರಿನಲ್ಲಿ ಕೆಲಸ ಆಗಿಲ್ಲ ಗ್ರಾಮ ಸಭೆಯಲ್ಲಿ ಏನಾದ್ರೂ ಕೇಳಲು ಹೋದರೆ ಪಿಡಿಓ ಕೇಳು ಕೇಳದಂಗೆ ಎದ್ದು ಹೋಗುತ್ತಾರೆ.

ನಮ್ಮ ಮಾತಿಗೆ ಬೆಲೆ ಕೊಡದೆ ಹೋಗತಾರೆ ದನ ಕರುಗಳಿಗಿ ನೀರಿಲ್ಲದೆ ಸಾಯುತ್ತಿವೆ ಇದಕ್ಕೆ ನೇರ್ ಗ್ರಾಮ ಪಂಚಾಯತಿ ಹೊಣೆ ಆಗ್ತಾರೆ ಎಂದರು.

ನಂತರ ಮಾತನಾಡಿದ ಶರಣಪ್ಪ ಭಾಸ್ಕರ್ ಎಸ್ಸಿ ವಾರ್ಡ್ ನಂ2ರಲ್ಲಿ 14 ಲಕ್ಷ ವೆಚ್ಚದಲ್ಲಿ ಅಂಬೇಡ್ಕರ್ ಭವನ್ ಎರಡು ವರ್ಷ ಹಿಂದಿನೇ ಲ್ಯಾಂಡರ್ಮಿ ಯೋಜನೆಯಲ್ಲಿ ತಳಪಾಯ ಮಾತ್ರ ನಿರ್ಮಾಣ ಮಾಡಿ ಮೂರು ವರ್ಷವಾದರೂ ಕೆಲಸ ನಿಂತಿರುವದಾಗಿ ಶಾಸಕರ ಗಮನದಲ್ಲೂ ತಂದಿದ್ದೇವೆ ಆದರೂ ಏನು ಪ್ರಯೋಜನವೆಯಾಗಿಲ್ಲ ನಾಲ್ಕು ವರ್ಷ ಹಿಂದಿಯ ನಮ್ಮೂರಿನ ಬಸ್ ಸ್ಟ್ಯಾಂಡ್ ಕಟ್ಟಡ ನಿರ್ಮಾಣವಾಗಿದೆ ಪ್ಲಾಸ್ಟರ್ ಇಲ್ಲ ಕೊಡಲು ಯವಸ್ಥೆಯು ಇಲ್ಲ ಚರಂಡಿ ಸ್ವಚ್ಛತೆ ಇಲ್ಲ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕೂಡಾ ಇಲ್ಲ ಪ್ರತಿ ವರ್ಷ ಶುದ್ಧ ಕುಡಿಯುವ ನೀರಿನ ಯಂತ್ರದ ಬಿಲ್ಲುಗಳು ಎತ್ತುತ್ತಾರೆ ಇಲ್ಲಿವರೆಗೆ ಆ ಯಂತ್ರ ಕಾರ್ಯನಿರ್ಸುತ್ತಿಲ್ಲ ಸರ್ಕಾರಿ ಕೆಲಸ ಗ್ರಾಮ ಪಂಚಾಯಿತಿಗೆ ಅಷ್ಟೇ ಬರ್ತಾ ಇದೆ ಗ್ರಾಮಕ್ಕಿಲ್ಲ ಮೂರು ದಿನಗಳಿಗೊಮ್ಮೆ ಬಿಡುವ ನೀರಿಗಾಗಿ ಹೊಲಾ ಹೊಲಾ ಪರದಾಡುವಂತ ಆಗಿದೆ ಎಂದರು.

## ಭಯೋತ್ಪಾದನೆ ವಿರುದ್ಧ ಹೋರಾಟದ ಪ್ರತಿಜ್ಞೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.21- ಭಯೋತ್ಪಾದನಾ ವಿರೋಧಿ ದಿನದ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅವರ ನೇತೃತ್ವದಲ್ಲಿ ಭಯೋತ್ಪಾದನೆಯ ವಿರುದ್ಧ ಹೋರಾಡುವ ಪ್ರತಿಜ್ಞೆ ಸ್ವೀಕಾರ ಮಾಡಲಾಯಿತು.

ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಅಹಿಂಸೆ ಹಾಗೂ ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯಲ್ಲಿ ದೃಢ ವಿಶ್ವಾಸವುಳ್ಳ, ಭಾರತದ ಪ್ರಜೆಗಳಾದ ನಾವು ಎಲ್ಲ ಬಗೆಯ ಭಯೋತ್ಪಾದನೆ ಮತ್ತು ಹಿಂಸೆಯನ್ನು ನಮ್ಮೆಲ್ಲ ಶಕ್ತಿ ಸಾಮರ್ಥ್ಯದಿಂದ ಎದುರಿಸುತ್ತೇವೆ ಎಂದು ಪ್ರತಿಜ್ಞೆ ಬೋಧಿಸಿದರು.

ನಮ್ಮ ಸಹಬಾಂಧವರಲ್ಲಿ ಶಾಂತಿ, ಸಾಮಾಜಿಕ ಸೌಹಾರ್ದತೆ ಮತ್ತು ಪರಸ್ಪರ ಅರಿವನ್ನು ಸಾಧಿಸಲು ಹಾಗೂ ಉತ್ತೇಜಿಸಲು ಮತ್ತು ಮಾನವ ಜೀವಕ್ಕೆ ಹಾಗೂ ಮೌಲ್ಯಗಳಿಗೆ ಬೆದರಿಕೆ ಒಡ್ಡುತ್ತಿರುವ ವಿಚ್ಛಿದ್ರಕಾರಿ ಶಕ್ತಿಗಳ ವಿರುದ್ಧ ಹೋರಾಡಲು ನಾವು ಪಣ ತೊಡುವುದಾಗಿ ಪ್ರತಿಜ್ಞೆಗೈಯಲಾಯಿತು.

## ಗ್ರಾಪಂ ಸದಸ್ಯನ ಮೇಲೆ ಹಲ್ಲೆ- ಪೋಲಿಸರ ವಿರುದ್ಧ ಕ್ರಮಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.21-ಜಿಲ್ಲೆಯ ಬಾದಾಮಿ ತಾಲೂಕಿನ ಬೆಳ್ಳಿಖಂಡಿ ಗ್ರಾಮದ ಗ್ರಾಮ ಪಂಚಾಯತ ಸದಸ್ಯನ ಮೇಲೆ ಹಲ್ಲೆ ನಡೆಸಿರುವ ಕೆರೂರ ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಲ್ ಇಂಡಿಯಾ ಬಿಎಸ್‌ಪಿ ರಾಜ್ಯ ಉಪಾಧ್ಯಕ್ಷ ವೈ.ಸಿ.ಕಾಂಬಳೆ ಆಗ್ರಹಿಸಿದ್ದಾರೆ.

ಬುಧವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳ್ಳಿಖಂಡಿ ಗ್ರಾಮದಲ್ಲಿ ವಿವಾದಿತ ಜಾಗೆಯ ಸಮಸ್ಯೆ ಬಗೆಹರಿಸಲು ರಾಜಿ ಸಂಧಾನಕ್ಕಾಗಿ ಭೀಮಪ್ಪ ತಿಪ್ಪಣ್ಣ ಮೇಟಿ ಅವರನ್ನು ಪೊಲೀಸರು ಠಾಣೆಗೆ ಕರೆಸಿಕೊಂಡಿದ್ದರು. ಈ ವೇಳೆ ಅನಗತ್ಯವಾಗಿ ಮೇಟಿ ಅವರ ಮೇಲೆ ಪೊಲೀಸರು ಹಲ್ಲೆ ನಡೆಸಿದ್ದು ಈ ಕುರಿತು ಕೂಡಲೇ ದೂರು ದಾಖಲಿಸಬೇಕು ಎಂದು ಅವರು ಆಗ್ರಹಿಸಿದರು.

ಘಟನೆಗೆ ಸಂಬಂಧಿಸಿದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ವಿವರಣೆ ನೀಡಲಾಗಿದ್ದು ಇದುವರೆಗೂ ದೂರು ದಾಖಲಾಗಿಲ್ಲ. ಕೂಡಲೇ ದೂರು ದಾಖಲಿಸಿಕೊಂಡು ನ್ಯಾಯ ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

ಪೊಲೀಸ ಇಲಾಖೆ ಘಟನೆಗೆ ಸಂಬಂಧಿಸದಿಂತೆ ಯಾವುದೇ ಕ್ರಮ ಕೈಗೊಳ್ಳದೇ ಹೋದಲ್ಲಿ ಮುಂದಿನ ದಿನಗಳಲ್ಲಿ ಪ್ರತಿಭಟನೆ ಕೈಗೊಳ್ಳಲಾಗುವುದು ಎಂದರು. ಈ ವೇಳೆ ಹಲ್ಲೆಗೊಳಗಾದ ಭೀಮಪ್ಪ ಮೇಟಿ ಕೂಡಾ ಘಟನೆ ಕುರಿತು ವಿವರಿಸಿ ಕ್ರಮಕ್ಕೆ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಅಶೋಕ ರಾಜಾಪೂರ, ಗುರುಶಾಂತಪ್ಪ ಮದಿನಕರ, ಸಂಗಪ್ಪ ಮುರನಾಳ, ಶಂಕರ ಚಂದಾವರಿ ಮತ್ತಿತರರು ಇದ್ದರು.

## ವಿಜಯಪುರದಲ್ಲಿ ರಾಜ್ಯಮಟ್ಟದ ಮಕ್ಕಳ ಸಾಹಿತ್ಯ ಸಮ್ಮೇಳನ: ಬಬಲೇಶ್ವರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.21- ಶೀಘ್ರದಲ್ಲಿಯೇ ವಿಜಯಪುರದಲ್ಲಿ ರಾಜ್ಯಮಟ್ಟದ ಮಕ್ಕಳ ಸಾಹಿತ್ಯ ಸಮ್ಮೇಳನ ಆಯೋಜಿಸಲಾಗುವುದು ಎಂದು ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು.

ಜಿಲ್ಲೆಯ ಹುನಗುಂದ ಆಗಮಿಸಿದ್ದ ವೇಳೆ ಅವರನ್ನು ಸಾಹಿತ್ಯ ಹಾಗೂ ಶಿಕ್ಷಕ ಸಂಘಟನೆಯ ಪ್ರಮುಖರು ಸನ್ಮಾನಿಸಿದ ಸಂದರ್ಭದಲ್ಲಿ ಮಾತನಾಡಿ, ಸಮ್ಮೇಳನ ನಡೆಸುವ ಕುರಿತಂತೆ ಈಗಾಗಲೇ ಹಿರಿಯ ಮಕ್ಕಳ ಸಾಹಿತಿ ಸಿಂದಗಿಯ ಹ.ಮ.ಪೂಜಾರ ಹಾಗೂ ಇತರ ಸಾಹಿತಿಗಳೊಂದಿಗೆ ಚರ್ಚಿಸಲಾಗಿದೆ ಎಂದರು.

ಸಮ್ಮೇಳನ ನಡೆಸುವ ಕುರಿತು ಒಂದು ಹಂತದ ಚರ್ಚೆ ಮುಕ್ತಾಯಗೊಂಡಿದ್ದು, ಬಾಲ ವಿಕಾಸ ಅಕಾಡೆಮಿ ಹಾಗೂ ಇತರ ಸಂಘಟನೆಗಳ ಸಹಕಾರದಿಂದ ದೊಡ್ಡ ಪ್ರಮಾಣದಲ್ಲಿ ಸಮ್ಮೇಳನ ನಡೆಸಲಾಗುವುದು. ವಿವಿಧ ಗೋಷ್ಠಿಗಳು, ಪುಸ್ತಕ ಬಿಡುಗಡೆ, ಸಾಧಕ ಮಕ್ಕಳು ಹಾಗೂ ಶಿಕ್ಷಕರಿಗೆ ಗೌರವ ಸಮರ್ಪಣೆ, ಉಪನ್ಯಾಸ, ಸಂವಾದ ಗೋಷ್ಠಿಗಳು ನಡೆಯಲಿವೆ ಎಂದು ಹೇಳಿದರು.

ಮಕ್ಕಳ ಸರ್ವತೋಮುಖ ಅಭಿವೃದ್ಧಿಯ ಗುರಿಯೊಂದಿಗೆ ಬಾಲ ವಿಕಾಸ ಅಕಾಡೆಮಿ ಕಾರ್ಯೋನ್ಮುಖವಾಗಿದೆ. ಆ ನಿಟ್ಟಿನಲ್ಲಿ ಪ್ರತಿಭಾವಂತ ಮಕ್ಕಳನ್ನು ಸಾಮಾಜಿಕ ಜಾಲತಾಣಗಳ ಮೂಲಕ ನಾಡಿಗೆ ಪರಿಚಯಿಸಲು ಅಕಾಡೆಮಿ ಸ್ಟುಡಿಯೋವೊಂದನ್ನು ನಿರ್ಮಿಸುತ್ತಿದೆ. ಅಲ್ಲಿ ಮಕ್ಕಳ ಸಾಧನೆಯನ್ನು ಬಿಂಬಿಸುವ ನೃತ್ಯ, ಗಾಯನ, ಸಂಗೀತ, ಕ್ರೀಡೆ, ಸಾಹಸ ಮೊದಲಾದ ಚಟುವಟಿಕೆಗಳು ಹಾಗೂ ಹಿರಿಯ ವಿಜ್ಞಾನಿಗಳು, ಸಾಧಕರು, ವಿದ್ವಾಂಸರ ಚರ್ಚೆ, ಸಂವಾದ, ಭಾಷಣ, ಅಭಿಪ್ರಾಯಗಳನ್ನು ಪ್ರಸಾರ ಮಾಡುವ ಮೂಲಕ ಮಕ್ಕಳ ಜ್ಞಾನ ವಿಕಾಸಕ್ಕೆ ವೇದಿಕೆ ನಿರ್ಮಿಸಲಾಗುವುದು ಎಂದು ಬಬಲೇಶ್ವರ ಹೇಳಿದರು.

ಸರಕಾರಿ ಶಾಲಾ ಮಕ್ಕಳ ಶೈಕ್ಷಣಿಕ ಗುಣಮಟ್ಟದ ಕುರಿತು ಶಿಕ್ಷಕರೊಂದಿಗೆ ಸಂವಾದಿಸಿದ ಸಂಗಮೇಶ ಬಬಲೇಶ್ವರ, ಶಾಲಾ ಶಿಕ್ಷಣ ಇಲಾಖೆ ಟಿಇಟಿ ಮತ್ತು ಸಿಇಟಿಯ ಮೂಲಕ ಪ್ರತಿಭಾವಂತ ಶಿಕ್ಷಕರನ್ನು ನೇಮಿಸಿಕೊಳ್ಳುತ್ತಿದೆ. ಅವರನ್ನು ಬೋಧನೆಯ ಜೊತೆಗೆ ಇತರೆ ಕೆಲಸದ ಒತ್ತಡದಿಂದ ಮುಕ್ತಗೊಳಿಸಿ ತರಗತಿ ಕೊಠಡಿಯಲ್ಲಿ ಹೆಚ್ಚು ಸಮಯ ಕಳೆಯುವಂತೆ ಮಾಡಬೇಕಾಗಿದೆ. ಮಕ್ಕಳ ಕಲಿಕೆಯ ಬುನಾದಿ ಹಂತವಾದ ಪ್ರಾಥಮಿಕ ಶಾಲೆಯಲ್ಲಿ ಉತ್ತಮ ಕಲಿಕೆಯು ಉಂಟಾದರೆ ಎಸ್‌ಎಸ್‌ಎಲ್‌ಸಿಯಲ್ಲಿ ಸೂಕ್ತ ಫಲಿತಾಂಶ ಗಳಿಸುವಲ್ಲಿ ಸಹಕಾರಿಯಾಗುತ್ತದೆ ಎಂದರು.

ಹುನಗುಂದ ತಾಲೂಕು ಶಿಕ್ಷಕರ ಸಂಘಟನೆಯ ಪ್ರಧಾನ ಕಾರ್ಯದರ್ಶಿ ಡಿ.ಎಂ.ಬಾಗವಾನ, ಮಾಜಿ ಅಧ್ಯಕ್ಷ ಸಿದ್ದು ಶೀಲವಂತರ, ರಾಜ್ಯ ಸರಕಾರಿ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷ ಸಂಗಣ್ಣ ಹಂಡಿ, ಮಕ್ಕಳ ಸಾಹಿತಿ ಅಶೋಕ ಬಳ್ಳಾ, ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಪ್ರಭು ಮಾಲಗಿತ್ತಿ, ಜಿಪಿಟಿ ಶಿಕ್ಷಕರ ಸಂಘದ ಅಧ್ಯಕ್ಷ ಅಂದಾನಯ್ಯ ವಸ್ತ್ರದ, ಸಂಗಮೇಶ ಹೊದ್ಲೂರ, ಸಂಗಪ್ಪ ಸಂಗಮ, ಸುಭಾಷ ಕಣಗಿ, ಸಂಗಣ್ಣ ಶಿರೂರ ಉಪಸ್ಥಿತರಿದ್ದರು.

## ಬಿಸಿಎಂ ಕಚೇರಿ ಹೊಸ ಡಿಸಿ ಕಚೇರಿಗೆ ಸ್ಥಳಾಂತರ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.21- ಇಲ್ಲಿನ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಚೇರಿಯನ್ನು ನಗರದ ನೂತನ ಜಿಲ್ಲಾಡಳಿತ ಭವನಕ್ಕೆ ಸ್ಥಳಾಂತರ ಮಾಡಲಾಗಿದ್ದು, ಇಲಾಖೆಯ ವಿವಿಧ ಸೌಲಭ್ಯಗಳು ಹಾಗೂ ಯೋಜನಗಳ ಕುರಿತು ಮಾಹಿತಿಗಾಗಿ ನೂತನ ಜಿಲ್ಲಾಡಳಿತ ಭವನದ ಮೊದಲನೇಯ ಮಹಡಿ (ಬಿ.2, ಬಿ.3)ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರ್ಮಿಕ ವಿರೋಧಿ ನೀತಿ ವಿರುದ್ಧ ಆಶಾ ಕಾರ್ಯಕರ್ತರ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.21-ಕೇಂದ್ರ ಸರ್ಕಾರ ಕಾರ್ಮಿಕ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಆರೋಪಿಸಿ ಆಲ್ ಇಂಡಿಯಾ ಯುನೈಟೆಡ್ ಟ್ರೇಡ್ ಯೂನಿಯನ್ ಸೆಂಟರ್ ನೇತೃತ್ವದಲ್ಲಿ ಆಶಾ ಕಾರ್ಯಾಕರ್ತೆಯರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ಪ್ರತಿಭಟನಾ ಮರವಣಿಗೆ ಮೂಲಕ ಜಿಲ್ಲಾಡಳಿತ ಭವನಕ್ಕೆ ಆಗಮಿಸಿದ ಆಶಾ ಕಾರ್ಯಕರ್ತೆಯರು ಸರ್ಕಾರಗಳ ವಿರುದ್ಧ ಘೋಷಣೆ ಕೂಗಿದರು. ಬಳಿಕ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಬರೆದ ಮನವಿ ಪತ್ರವನ್ನು ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಅವರಿಗೆ ಸಲ್ಲಿಸಿದರು.

ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಕೂಡಲೇ ರದ್ದುಗೊಳಿಸಬೇಕು. ಅಸಂಘಟಿತ ವಲಯದ ಕಾರ್ಮಿಕರು, ಗುತ್ತಿಗೆ ಕಾರ್ಮಿಕರು, ಸ್ಕೀಮ್ ಕಾರ್ಮಿಕರು ಸೇರಿದಂತೆ ಎಲ್ಲ ರಾಷ್ಟ್ರೀಯ ಕನಿಷ್ಠ ವೇತನ 26000 ರೂ. ವರೆಗೆ ಪ್ರತಿ ತಿಂಗಳು ನೀಡಬೇಕು, ವಿವಿಧ ಯೋಜನೆಗಳ ಅಡಿಯಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರನ್ನು ಕ್ಯಾಶುವಲ್ ಮಾಡಬಾರದು. ಗುತ್ತಿಗೆ ಕಾರ್ಮಿಕರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ತಕ್ಷಣ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಅಸಂಘಟಿತ ಕಾರ್ಮಿಕರು, ಕೃಷಿ ಕಾರ್ಮಿಕರು ಸೇರಿದಂತೆ ಎಲ್ಲ ವರ್ಗದ ಕಾರ್ಮಿಕರಿಗೆ ಕನಿಷ್ಠ 9 ಸಾವಿರ ರೂ. ಪಿಂಚಣಿ, ಸಾಮಾಜಿಕ ಭದ್ರತೆ ಒದಗಿಸಬೇಕು, ಮನೆ ಆಧಾರಿತ ಕಾರ್ಮಿಕರು, ವ್ಯಾಪರಿಗಳು, ಚಿಂದಿ ಆಯುವವರು, ಗೃಹ ಕಾರ್ಮಿಕರು, ವಲಸೆ ಕಾರ್ಮಿಕರು, ವ್ಯಾಪಾರಿಗಳು ಸೇರಿದಂತೆ ಎಲ್ಲ ಕಾರ್ಮಿಕರನ್ನು ಒಂದೇ ಸೂರಿನಡಿ ಪೋರ್ಟಬಿಲಿಟಿ ಮಾಡಬೇಕು. ಹಳೇ ಪಿಂಚಣಿ ಯೋಜನೆಯನ್ನು ಮರು ಸ್ಥಾಪಿಸಿ ಎನ್‌ಪಿಎಸ್, ಯುಪಿಎಸ್ ರದ್ದುಗೊಳಿಸಿ ಬೋನಸ್, ಭವಿಷ್ಯ ನಿಧಿ ಪಾವತಿ ಮತ್ತು ಅರ್ಹತೆಯ ಮೇಲಿನ ಎಲ್ಲ ಮಿತಿಗಳನ್ನು ತೆಗೆದು ಹಾಕಬೇಕು, ಗ್ರ್ಯಾಚ್ಯುಟಿ ಪ್ರಮಾಣ ಪತ್ರ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

ಸಂಘಟನೆಯ ಮುಖಂಡರಾದ ರಮೇಶ ಗೌಡರ, ಕಮಲಾ ತೇಲಿ, ಶೋಭಾ ಪಾಟೀಲ, ಅಂಜನಾ ಕುಂಬಾರ, ಶೀಲಾ ಮೆಳ್ಳಿಗೇರಿ, ಮಂಜುಳಾ ಬಕ್ರಿ, ಮಹಾದೇವಿ ಸಾಲಿಮಠ, ನಂದಾ ಕಾಂಬಳೆ ಇತರರು ಇದ್ದರು.

## ಸಮಸ್ಯೆಗಳ ಪರಿಹಾರಕ್ಕೆ ಕರವೇ ಹೋರಾಟಕ್ಕೆ ಸಿದ್ಧ-ಗಣಪತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.21-ಜನ ಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸಿ ಅದಕ್ಕೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕರ್ನಾಟಕ ರಕ್ಷಣಾ ವೇದಿಕೆ(ನಾರಾಯಣಗೌಡಬಣ)ಸದಾ ಹೋರಾಟಕ್ಕೆ ಸಿದ್ಧವಾಗಿರುತ್ತದೆ ಎಂದು ವೇದಿಕೆಯ ನೂತನ ಜಿಲ್ಲಾಧ್ಯಕ್ಷ ಗಣಪತಿ ಭೋವಿ ಹೇಳಿದರು. ಬುಧವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತವನಾಡಿದ ಅವರು, ಜಿಲ್ಲೆಯಲ್ಲಿ ಅನೇಕ ಸಮಸ್ಯೆಗಳಿದ್ದು ಅವುಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಯಾವುದೇ ಸಂದರ್ಭದಲ್ಲೂ ಹೋರಾಟಕ್ಕೆ ಇಳಿಯುವುದಾಗಿ ತಿಳಿಸಿದರು.

ಈಗಾಗಲೇ ರಾಜ್ಯದ ಎಲ್ಲ ಜಿಲ್ಲಾ, ತಾಲೂಕು, ನಗರ ಸೇರಿ ಪ್ರತಿಯೊಂದು ಗ್ರಾಮಗಳಲ್ಲಿ ಕರವೇ ಕಾರ್ಯನಿರ್ವಹಿಸುತ್ತಿದ್ದು, ನೆಲ, ಜಲ, ಭಾಷೆ ಸಮಸ್ಯೆಗಳು ಸೇರಿದಂತೆ ಎಲ್ಲ ಜನಪರ ಸಮಸ್ಯೆಗಳನ್ನು ಎತ್ತಿ ಜನರಿಗೆ ಸಹಾಯ ಮಾಡುವ ಕೆಲಸ ಕರವೇ ಕಾರ್ಯಕರ್ತರು ಮಾಡುತ್ತಿದ್ದಾರೆ. ರೈತರ ಪರವಾಗಿ ಧ್ವನಿ ಎತ್ತುವ ಹಾಗೂ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ-ಕ್ಕೆ ಸದಾ ಕರವೇ ಸಿದ್ಧವಾಗಿದೆ ಎಂದು ಗಣಪತಿ ತಿಳಿಸಿದರು. ಮುಧೋಳ ತಾಲೂಕಾ ಕರವೇ ಅಧ್ಯಕ್ಷನಾಗಿ 17 ವರ್ಷಗಳ ಕಾಲ ಸೇವೆಯನ್ನು ಸಲ್ಲಿಸಿದ್ದು ಇದನ್ನು ಗಣನೆಗೆ ತೆಗೆದುಕೊಂಡು ರಾಜ್ಯಾಧ್ಯಕ್ಷ ಟಿ.ನಾರಾಯಣಗೌಡರು ನನ್ನನ್ನು ಬಾಗಲಕೋಟೆ ಜಿಲ್ಲಾಧ್ಯಕ್ಷನಾಗಿ ನೇಮಕ ಮಾಡಿದ್ದಾರೆಂದು ಹೇಳಿದರು.

ಉಪಾಧ್ಯಕ್ಷ ರಮಜಾನ್ ನದಾಫ ಮಾತನಾಡಿ, ರಾಜ್ಯದಲ್ಲಿ ಕಳೆದ ಹಲವು ವರ್ಷಗಳಿಂದ ಕರವೇ ರಾಜ್ಯದ ನೆಲ,ಜಲ ರಕ್ಷಣೆಗಾಗಿ ಹೋರಾಟ ಮಾಡುತ್ತಾ ಬಂದಿದ್ದು, ಮುಂದೆಯೂ ನಮ್ಮ ಸಂಘಟನೆ ಜನಪರ ಕೆಲಸ ಮಾಡಲಿದೆ ಎಂದರು. ಉಪಾಧ್ಯಕ್ಷ ಮಲ್ಲು ಕಟ್ಟಿಮನಿ, ರಾಮಜೀ ಘೋರ್ಪಡೆ, ಸಂಗಮೇಶ ಅಂಬಿಗೇರ, ಈರಣ್ಣ ಬಡಿಗೇರ ಇದ್ದರು.

## ಆಪರೇಷನ್ ಸಿಂಧೂರ್: ಸಮಾನತೆ ಕಪ್ ಕ್ರಿಕೆಟ್ ಪಂದ್ಯಾವಳಿ



ಮಲ್ಲಮ್ಮ ನುಡಿ ವಾರ್ತೆ

ಹನೂರು ಮೇ 21:- ತಾಲೂಕಿನ ಕಣ್ಣೂರು ಗ್ರಾಮದಲ್ಲಿ ಭೀಮ ಬಳಗ ಯುವಕರ ತಂಡದ ವತಿಯಿಂದ ಆಪರೇಷನ್ ಸಿಂಧೂರ್ ಹೆಸರಿನಲ್ಲಿ ಸಮಾನತೆ ಕಪ್ ಕ್ರಿಕೆಟ್ ಪಂದ್ಯಾವಳಿ ಆಯೋಜನೆ ಮಾಡಲಾಗಿತ್ತು. ಕ್ರಿಕೆಟ್ ಕ್ರೀಡೆಯಲ್ಲಿ ವಿಜೇತರಾದ ತಂಡಗಳಿಗೆ ಟ್ರೋಫಿ ವಿತರಿಸಲಾಯಿತು.

ಹನೂರು ಬಿಜೆಪಿ ಮಂಡಲ ಅಧ್ಯಕ್ಷ ಕೆ.ಪಿ ವೃಷಭೇಂದ್ರ ಸ್ವಾಮಿ ಮಾತನಾಡಿ ನಮ್ಮ ದೇಶದ ನೆಚ್ಚಿನ ಪ್ರಧಾನ ಮಂತ್ರಿಗಳು ನರೇಂದ್ರ ಮೋದಿಯವರ ದೇಶದ ರಕ್ಷಣೆಗಾಗಿ ಒಳ್ಳೆಯ ನಿರ್ಧಾರ ತೆಗೆದುಕೊಳ್ಳುವ ಮೂಲಕ ಅಪರೇಷನ್ ಸಿಂಧೂರ್ ಹೆಸರಿನಲ್ಲಿ ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸಿದ್ದಾರೆ.

ಇಂತಹ ಒಂದು ಸುಸಂದರ್ಭದಲ್ಲಿ ನಮ್ಮ ಗ್ರಾಮದ ಯುವಕರು ಅಪರೇಷನ್ ಸಿಂಧೂರ್ ಹೆಸರಿನಲ್ಲಿ ಸಮಾನತಾ ಕ್ರಿಕೆಟ್ ಪಂದ್ಯಾವಳಿಯನ್ನು ಆಯೋಜನೆ ದೇಶಾಭಿಮಾನ ಮೂಡಿಸುವ ಕಾರ್ಯಕ್ರಮ ನಡೆಸಿರುವುದು ಸಂತಸದ ವಿಷಯ ಎಂದು ಹೇಳಿದರು. ಕ್ರಿಕೆಟ್ ಆಟಗಾರರಿಗೆ ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಬೂತ್ ಅಧ್ಯಕ್ಷ ಮಲ್ಲೇಶ್, ಗ್ರಾಮ ಪಂ. ಸದಸ್ಯರಾದ ನಟರಾಜು ಸೋಮಣ್ಣ ಬಸವಣ್ಣ, ಶಿವಕುಮಾರ್, ಮಹೇಶ್, ಕಿರಣ್, ಗುರುಲಿಂಗ, ಸ್ವಾಮಿ, ರಾಜು ಸೇರಿದಂತೆ ಯುವಕರು ಹಾಜರಿದ್ದರು.

## ಅವಧಿಗಿಂತ ಮುನ್ನ ಮುಂಗಾರು



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮೇ.21-ರೈತರಿಗೆ ಶುಭ ಸುದ್ದಿ ನೀಡುತ್ತಾ, ಈ ವರ್ಷ ನೈಋತ್ಯ ಮುಂಗಾರು ಸ್ವಲ್ಪ ಮುಂಚಿತವಾಗಿ ಆಗಮಿಸಲಿದೆ ಎಂದು ಕೇಂದ್ರ ಹವಾಮಾನ ಇಲಾಖೆ ತಿಳಿಸಿದೆ.16 ವರ್ಷದಲ್ಲೇ ಮೊದಲ ಬಾರಿಗೆ ಅವಧಿಗೂ ಮುನ್ನ ಮುಂಗಾರು ಮಳೆ ರಾಜ್ಯವನ್ನು ಪ್ರವೇಶಿಸಲಿದೆ ಎನ್ನಲಾಗಿದೆ.

ಕೇಂದ್ರ ಹವಾಮಾನ ಇಲಾಖೆ ಮಾಹಿತಿ ನೀಡಿದ್ದು, ವಾಡಿಕೆಯಂತೆ ಕೇರಳಕ್ಕೆ ಜೂನ್ 1ರಂದು ಮಳೆ ಕಾಲಿಡುತ್ತದೆ.ಆದರೆ ಈ ಬಾರಿ ಮುಂಗಾರು ಮಾರುತಗಳು 4 ದಿನ ಮುಂಚಿತವಾಗಿ ಕೇರಳ ಪ್ರವೇಶಿಸಲಿದೆ ಎಂದು ಹೇಳಲಾಗಿದೆ.


ನೈಋತ್ಯ ಮಾನ್ಸೂನ್ ಮೇ 27 ರಂದು ಕೇರಳಕ್ಕೆ ಆಗಮಿಸುವ ಸಾಧ್ಯತೆಯಿದೆ, ಇದು ಜೂನ್ 1 ರ ಸಾಮಾನ್ಯ ದಿನಾಂಕಕ್ಕಿಂತ ಮೊದಲೇ ಆಗಬಹುದು ಎಂದು ಭಾರತ ಹವಾಮಾನ ಇಲಾಖೆ ತಿಳಿಸಿದೆ.

ಇದಕ್ಕೂ ಮೊದಲು, ಭಾರತ ಹವಾಮಾನ ಇಲಾಖೆ ಏಪ್ರಿಲ್‌ನಲ್ಲಿ 2025 ರ ಮಾನ್ಸೂನ್ ಋತುವಿನಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಮಳೆಯಾಗುವ ಮುನ್ಸೂಚನೆ ನೀಡಿತ್ತು, ಎಲ್ ನಿನೊ ಪರಿಸ್ಥಿತಿಗಳು ಭಾರತೀಯ ಉಪಖಂಡದಲ್ಲಿ ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗುವ ಸಾಧ್ಯತೆಯನ್ನು ತಳ್ಳಿಹಾಕಿದೆ.

ಐಎಂಡಿ ದತ್ತಾಂಶದ ಪ್ರಕಾರ, ಮಾನ್ಸೂನ್ ನಿರೀಕ್ಷೆಯಂತೆ ಕೇರಳವನ್ನು ತಲುಪಿದ್ದರೂ, ಮೇ 23, 2009 ರ ನಂತರ ಮಾನ್ಸೂನ್ ಭಾರತದ ಮುಖ್ಯ ಭೂಭಾಗವನ್ನು ನಿಗದಿತ ಸಮಯಕ್ಕಿಂತ ಮುಂಚಿತವಾಗಿ ಪ್ರವೇಶಿಸುತ್ತಿರುವುದು ಇದೇ ಮೊದಲು.

ಸಾಮಾನ್ಯವಾಗಿ ನೈಋತ್ಯ ಮಾನ್ಸೂನ್ ಜೂನ್ 1 ರ ವೇಳೆಗೆ ಕೇರಳದಲ್ಲಿ ಆರಂಭವಾಗುತ್ತದೆ ಮತ್ತು ನಂತರ ಜುಲೈ 8 ರ ವೇಳೆಗೆ ಇಡೀ ದೇಶವನ್ನು ಆವರಿಸುತ್ತದೆ. ಇದು ಸೆಪ್ಟೆಂಬರ್ 17 ರ ಸುಮಾರಿಗೆ ವಾಯುವ್ಯ ಭಾರತದಿಂದ ಹಿಮ್ಮೆಟ್ಟಲು ಪ್ರಾರಂಭಿಸಿ ಅಕ್ಟೋಬರ್ 15 ರ ವೇಳೆಗೆ ಸಂಪೂರ್ಣವಾಗಿ ಹಿಮ್ಮೆಟ್ಟುತ್ತದೆ ಎಂದು ಹವಾಮಾನ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

## ಓದು-ಬರಹ ಬಾರದ ಸಿದ್ದಪ್ಪನ ಸಾಧನೆ ಮಾದರಿ-ಶಾಸಕ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.21-ಓದು, ಬರಹ ಬಾರದ ಜಾನಪದ ಆಶು ಕವಿ ಸಿದ್ದಪ್ಪ ಬಿದರಿ 25 ಕೃತಿಗಳನ್ನು ರಚಿಸುವ ಮೂಲಕ ಸಾಹಿತ್ಯ ವಲಯಕ್ಕೆ ಮಾದರಿಯಾಗಿದ್ದಾರೆ ಎಂದು ಬೀಳಗಿ ಶಾಸಕ ಜೆ.ಟಿ.ಪಾಟೀಲ ಹೇಳಿದರು.

ಜಿಲ್ಲೆಯ ಬೀಳಗಿ ತಾಲೂಕಿನ ಅನಗವಾಡಿ ಗ್ರಾಮದಲ್ಲಿ ಕನ್ನಡ ಜಾನಪದ ಪರಿಷತ್ ಬಾಗಲಕೋಟೆ ಜಿಲ್ಲಾ ಘಟಕದ ವತಿಯಿಂದ ಆಯೋಜಿಸಿದ್ದ ಬಾಗಲಕೋಟೆ ಜಿಲ್ಲಾ ದ್ವಿತೀಯ ಕನ್ನಡ ಜಾನಪದ ಸಮ್ಮೇಳನದ ಸನ್ಮಾನ ಮತ್ತು ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜನರ ಬಾಯಿಂದ ಹುಟ್ಟಿದ ಜಾನಪದ ಹಾಡುಗಳು ಹಿಂದಿನ ದಿನಗಳಲ್ಲಿ ಗ್ರಾಮೀಣ ಜನರ ಬಾಯಲ್ಲಿ ನಿತ್ಯ ಕೇಳಿಬರುತ್ತಿದ್ದವು. ಜೀವನದ ಪ್ರತಿ ಹಂತದಲ್ಲೂ ಜಾನಪದದ ಸೊಗಡು ಹಾಸುಹೊಕ್ಕಾಗಿತ್ತು ಎಂದ ಜೆ.ಟಿ.ಪಾಟೀಲ, ನಮ್ಮ ಸಂಸ್ಕೃತಿ, ಪರಂಪರೆಯನ್ನು ಪರಿಚಯಿಸುವ ಜಾನಪದ ಕಲೆ, ಕಲಾವಿದರನ್ನು ಗೌರವಿಸಿ ಉಳಿಸಿ, ಬೆಳೆಸುವ ಕಾರ್ಯ ನಡೆಯಬೇಕು ಎಂದರು.

ಜನಮಾನಸದಲ್ಲಿ ಉಳಿದಿರುವ ಜಾನಪದ ಗಾರುಡಿಗ ಸಿದ್ದಪ್ಪ ಬಿದರಿ ಅವರನ್ನು ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಮಾಡಿರುವುದು ಸ್ತುತ್ಯಾರ್ಹ. ಡಿ.ಎಂ.ಸಾವಕಾರ ನೇತೃತ್ವದಲ್ಲಿ ಜಾನಪದ ಉಳಿಸಿ ಬೆಳೆಸುವ ಕೆಲಸ ಮಾಡುತ್ತಿರುವುದು ಪ್ರಶಂಸನೀಯ ಎಂದು ಹೇಳಿದರು.

ಗಿರಿಸಾಗರದ ರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿ, ನಮ್ಮ ನೆಲೆಯನ್ನು ತೋರಿಸುವಂಥ ಜಾನಪದ ಪುರಾತನವಾದದ್ದು. ಜನರ ಕಿವಿಯಿಂದ ಕಿವಿಗೆ ಹರಡುತ್ತ ಬಂದಿದೆ. ಜಾನಪದದಲ್ಲಿ ದೇವರು ಮತ್ತು ಧರ್ಮವನ್ನು ನಿಂದೆ ಮಾಡಿಲ್ಲ. ಜನರಲ್ಲಿ ಸಂಸ್ಕಾರ ಬೆಳೆಸಬೇಕೆಂದರೆ ಜಾನಪದ ಸಮ್ಮೇಳನ ಅವಶ್ಯವೆಂದರು.

ನಿವೃತ್ತ ಪ್ರಾಧ್ಯಾಪಕ ಎನ್.ಎಂ.ಕೂಗಲಿ ಅಭಿನಂದನಾ ಪರ ಮಾತನಾಡಿ, ಮಳೆಯ ನಡುವೆಯೂ ಅರ್ಥಪೂರ್ಣವಾಗಿ ನಡೆದ ಸಮ್ಮೇಳನದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 60ಕ್ಕೂ ಹೆಚ್ಚು ಸಾಧಕರನ್ನು ಗುರ್ತಿಸಿ ಗೌರವಿಸಿದ್ದು ಶ್ಲಾಘನೀಯ ಕಾರ್ಯವೆಂದು ಹೇಳಿದರು.

ವಿಶ್ರಾಂತ ಡಿಡಿಪಿಐ ಎಂ.ಜಿ.ದಾಸರ ಸಮಾರೋಪ ನುಡಿ ಹೇಳಿ, ಅರ್ಥಪೂರ್ಣ ಸಮ್ಮೇಳನ ಇದಾಗಿದ್ದು, ಜಾನಪದವನ್ನು ಉಳಿಸುವ ನಿಟ್ಟಿನಲ್ಲಿ ಜನರ ಸಹಭಾಗಿತ್ವ ಹೇಗಿರಬೇಕು ಎಂಬುದರ ಮೇಲೆ ಸಮ್ಮೇಳನ ಬೆಳಕು ಚೆಲ್ಲಿದೆ ಎಂದರು.

ಸಮ್ಮೇಳನದಲ್ಲಿ ಜಿಲ್ಲೆಯ ವಿವಿಧೆಡೆಯಿಂದ ಆಗಮಿಸಿದ್ದ 50ಕ್ಕೂ ಹೆಚ್ಚು ತಂಡಗಳು ತಮ್ಮ ಕಲಾ ಪ್ರದರ್ಶನ ಮಾಡಿದವು.

ಪಿಕೆಪಿಎಸ್ ಅಧ್ಯಕ್ಷ ಎಂ.ಬಿ.ಕಂಬಿ, ಈರಣ್ಣ ಗಾಣಗೇರ, ಪೀರಸಾಬ ನದಾಫ, ಡಾ.ಎಸ್.ಕೆ.ಬಂಗಾರಿ, ನಿಂಗರಾಜ ಮಬ್ರಮಕರ, ಫಕೀರಯ್ಯ ಮಠಪತಿ, ಆರ್.ವಿ.ಅಂಗಡಿ, ಸಂಗಮೇಶ ಶಾಂತಗಿರಿ, ಮಹೇಶ ಮಾದರ, ರಮೇಶ ಮಾದರ, ಬಸವ್ವ ಹೆಬ್ಬಾಳ, ಸುಲೋಚನಾ ಗಿರಿಯನ್ನವರ, ಇಂದ್ರವ್ವ ಗಡ್ಡಿ ಮತ್ತಿತರಿದ್ದರು.

ರಮೇಶ ಮೇಟಿ ನಿರೂಪಿಸಿದರು. ಬಸವರಾಜ ನಾಯ್ಕ ಸ್ವಾಗತಿಸಿದರು. ಎಂ.ಬಿ. ತಾಂಬೋಳಿ ವಂದಿಸಿದರು.

